ಸಂಪುಟ: 05 ಸಂಚಿಕೆ: 311 ಪುಟಗಳು: 08 ಶನಿವಾರ 24 ಜನವರಿ 2026

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಮನಸ್ಸನ್ನು ಶಕ್ತಿಯುತವೂ, ಶಿಸ್ತುಬದ್ಧವೂ ಆಗಿಸುವುದರಲ್ಲಿಯೇ ಜ್ಞಾನದ ಮೌಲ್ಯವಿರುವಂಥದ್ದು.

## ಮಂಡ್ಯದಲ್ಲಿ ಕೈಗಾರಿಕೆಗೆ ಜಾಗ ಕೊಡುವಂತೆ ಸಿಎಂಗೆ ಪತ್ರ

• **ಉದಯವಾಹಿನಿ, ನವದೆಹಲಿ**

'ಜಿಲ್ಲೆಯಲ್ಲಿ ಕೈಗಾರಿಕೆಗೆ ಪೂರಕ ವಾತಾವರಣ ನಿರ್ಮಾಣ ಮಾಡಬೇಕು. ಅದಕ್ಕೆ ಪೂರಕವಾಗಿ ಕೇಂದ್ರದ ಬೃಹತ್ ಕೈಗಾರಿಕೆ ಇಲಾಖೆ ವತಿಯಿಂದಲೇ ಕೈಗಾರಿಕೆ ಸ್ಥಾಪನೆ ಮಾಡುವ ಬಗ್ಗೆ ಪರಿಶೀಲನೆ ನಡೆಸಲಾಗುತ್ತಿದೆ' ಎಂದು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಹೇಳಿದರು.

ಮೇಲುಕೋಟೆ ವಿಧಾನಸಭಾ ಕ್ಷೇತ್ರದ ಶಿವಳ್ಳಿ ಗ್ರಾಮದಲ್ಲಿ ಶುಕ್ರವಾರ ಮಾರಮ್ಮ ದೇವಿ ದೇವಾಲಯ ಉದ್ಘಾಟನೆ ನಂತರ ಮಾಧ್ಯಮದವರೊಂದಿಗೆ ಅವರು ಮಾತನಾಡಿದರು. ಮಂಡ್ಯ ಜಿಲ್ಲೆಗೆ ಏನು ಮಾಡಬೇಕು ಎಂಬುದು ಖಂಡಿತ ನನಗೆ ಗೊತ್ತಿದೆ. ಈ ಬಗ್ಗೆ ಬೇರೆ ಯಾರ ಸರ್ಟಿಫಿಕೇಟ್ ಬೇಕಿಲ್ಲ. ಈ ಬಗ್ಗೆ ನಾನೇ ಸಿಎಂಗೆ ಪತ್ರ ಬರೆದಿದ್ದೇನೆ ಎಂದರು. ಮಂಡ್ಯದಲ್ಲಿ ಕೇಂದ್ರ ಸರ್ಕಾರಿ ಸ್ವಾಮ್ಯದ 'ಆಟೋಮೇಟಿವ್ ರೀಸರ್ಚ್ ಅಸೋಸಿಯೇಷನ್ ಆಫ್ ಇಂಡಿಯಾ' (ಎ.ಆರ್.ಎ.ಐ) ಸಂಸ್ಥೆ ಸ್ಥಾಪಿಸಲು ಜಾಗ ಕೊಡುವಂತೆ ನನ್ನ ಇಲಾಖೆಯಿಂದಲೇ ಮುಖ್ಯಮಂತ್ರಿಗೆ ಪತ್ರ ಬರೆದಿದ್ದೇನೆ ಎಂದು ಅವರು ತಿಳಿಸಿದರು.

## ಬೈಕ್ ಟ್ಯಾಕ್ಸಿ ಅನುಮತಿ ಕುರಿತು ಹೈಕೋರ್ಟ್ ಮಹತ್ವದ ಆದೇಶ

• **ಉದಯವಾಹಿನಿ, ಬೆಂಗಳೂರು**

ಬೈಕ್‌ಗಳನ್ನು ಸಾರಿಗೆ ವಾಹನಗಳನ್ನಾಗಿ ಬಳಸಬಹುದು ಎಂದು ಕರ್ನಾಟಕ ಹೈಕೋರ್ಟ್ ಮಹತ್ವದ ಆದೇಶವನ್ನು ನೀಡಿದೆ. ಕರ್ನಾಟಕ ಸರ್ಕಾರ ಬೈಕ್ ಟ್ಯಾಕ್ಸಿಯನ್ನು ನಿಷೇಧ ಮಾಡಿತ್ತು. ಈ ಬೆನ್ನಲ್ಲೆ ಓಲಾ, ಊಬರ್ ಮತ್ತಿತರ ಅಗ್ರಿಗೇಟರ್‌ಗಳು ಮೇಲ್ಮನವಿ ಸಲ್ಲಿಸಿದ್ದರು. ಕಂಪನಿಗಳ ಮನವಿಯನ್ನು ಮಾನ್ಯ ಮಾಡಿದ ನ್ಯಾಯಾಲಯವು ರಾಜ್ಯ ಸರ್ಕಾರ ಬೈಕ್ ಟ್ಯಾಕ್ಸಿ ನಿಷೇಧಿಸಿದ್ದನ್ನು ಎತ್ತಿಹಿಡಿದಿದ್ದ ಏಕಸದಸ್ಯ ನ್ಯಾಯಪೀಠದ ಆದೇಶವನ್ನು ರದ್ದುಗೊಳಿಸಿದೆ. ಈ ಮೂಲಕ ರಾಜ್ಯದಲ್ಲಿ ಬೈಕ್ ಟ್ಯಾಕ್ಸಿ ಸಂಚಾರಕ್ಕೆ ಹಸಿರು ನಿಶಾನೆ ಸಿಕ್ಕಿದೆ. ಮುಖ್ಯ ನ್ಯಾಯಮೂರ್ತಿ ವಿಭು ಬಕ್ರು ಮತ್ತು ನ್ಯಾಯಮೂರ್ತಿ ಸಿ ಎಂ ಜೋಶಿ ಅವರ ವಿಭಾಗೀಯ ಪೀಠವು ಈ ಆದೇಶವನ್ನು ನೀಡಿದೆ. ಜತೆಗೆ ಬೈಕ್ ಮಾಲೀಕರು ಅಥವಾ ಅಗ್ರಿಗೇಟರ್ ಗಳು ಸಾರಿಗೆ ವಾಹನಗಳನ್ನಾಗಿ ಬಳಸಲು ಅನುಮತಿ ಕೋರಿ ಮನವಿ ಸಲ್ಲಿಸಬೇಕು. ಕಾನೂನಿನಡಿ ಸರ್ಕಾರ ಪರವಾನಿಗೆ ನೀಡಬೇಕು ಎಂದು ಪೀಠವು 2 ಅತಿ ಮಹತ್ವದ ಸೂಚನೆಯನ್ನು ಆದೇಶದಲ್ಲಿ ಉಲ್ಲೇಖಿಸಿದೆ.

## ಕಲ್ಲಡ್ಕ ಪ್ರಭಾಕರ್ ಭಟ್ ವಿರುದ್ಧ ಆತುರದ ಕ್ರಮ ಬೇಡ

• **ಉದಯವಾಹಿನಿ, ಬೆಂಗಳೂರು**

ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರಿನ ಉಪ್ಪಳಿಗೆಯಲ್ಲಿ ನಡೆದ ದೀಪೋತ್ಸವ ಕಾರ್ಯಕ್ರಮದಲ್ಲಿ ಕೋಮು ದ್ವೇಷದ ಪ್ರಚೋದನಕಾರಿ ಭಾಷಣ ಮಾಡಿದ ಆರೋಪದಡಿ ಆರ್‌ಎಸ್‌ಎಸ್ ಮುಖಂಡ ಕಲ್ಲಡ್ಕ ಪ್ರಭಾಕರ ಭಟ್ ವಿರುದ್ಧ ದಾಖಲಾಗಿರುವ ಪ್ರಕರಣದಲ್ಲಿ ಆತುರದ ಕ್ರಮ ಕೈಗೊಳ್ಳಬಾರದು ಎಂದು ಹೈಕೋರ್ಟ್, ರಾಜ್ಯ ಸರ್ಕಾರಕ್ಕೆ ಆದೇಶಿಸಿದೆ. 'ಪ್ರಕರಣಕ್ಕೆ ಸಂಬಂಧಿಸಿದಂತೆ ನನ್ನ ವಿರುದ್ಧ ನೀಡಲಾಗಿರುವ ದೂರು ಹಾಗೂ ಪುತ್ತೂರು ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಎಫ್‌ಐಆರ್ ರದ್ದುಪಡಿಸಬೇಕು' ಎಂದು ಕೋರಿ ಡಾ.ಪ್ರಭಾಕರ ಭಟ್ (83) ಸಲ್ಲಿಸಿರುವ ಕ್ರಿಮಿನಲ್ ಅರ್ಜಿಯನ್ನು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ ವಿಚಾರಣೆ ನಡೆಸಿತು.

## ಕೆಆರ್‌ಎಸ್ ಪಕ್ಷದ ಮುಖಂಡರ ವಿರುದ್ಧ ಎಫ್‌ಐಆರ್‌ಗೆ ಸೂಚನೆ

• **ಉದಯವಾಹಿನಿ, ಬೆಂಗಳೂರು**

ಸರ್ಕಾರಿ ಕಚೇರಿಗಳಲ್ಲಿ ಅಧಿಕಾರಿಗಳು ಹಾಗೂ ಸಿಬ್ಬಂದಿಯ ಕೆಲಸಕ್ಕೆ ಅಡ್ಡಿ ಪಡಿಸುವ ಕರ್ನಾಟಕ ರಾಷ್ಟ್ರ ಸಮಿತಿ (ಕೆಆರ್‌ಎಸ್) ಪಕ್ಷದ ಕಾರ್ಯಕರ್ತರು ಹಾಗೂ ಮುಖಂಡರ ವಿರುದ್ಧ ರಾಜ್ಯದಾದ್ಯಂತ ಎಫ್‌ಐಆರ್ ದಾಖಲಿಸುವಂತೆ ರಾಜ್ಯ ಪೊಲೀಸ್ ಮಹಾನಿರ್ದೇಶಕರು ಆದೇಶಿಸಿದ್ದಾರೆ. ಸಾರ್ವಜನಿಕವಾಗಿ ಕರ್ತವ್ಯಕ್ಕೆ ಅಡ್ಡಿ ಪಡಿಸುತ್ತಿರುವುದು. ಸನ್ಮಾನದ ನೆಪದಲ್ಲಿ ಮಾನಹಾನಿ ಮಾಡುತ್ತಿರುವ ಘಟನೆಗಳು ನಡೆದಿವೆ ಎಂದು ಆದೇಶದಲ್ಲಿ ತಿಳಿಸಲಾಗಿದೆ. ಚನ್ನಪಟ್ಟಣದ ಇನ್‌ಸ್ಪೆಕ್ಟರ್ ಜತೆಗೆ ಕೆಆರ್‌ಎಸ್ ಪಕ್ಷದ ಕಾರ್ಯಕರ್ತರು ಇತ್ತೀಚೆಗೆ ಗಲಾಟೆ ಮಾಡಿದ್ದರು.

ಏಕಮುಖ ಸಂಚಾರ ಮಾರ್ಗದಲ್ಲಿ ಬಸ್ ತಂದು ನಿಯಮ ಉಲ್ಲಂಘಿಸಿದ್ದಲ್ಲದೆ, ಅದನ್ನು ಪ್ರಶ್ನಿಸಿದ ಪೊಲೀಸರೊಂದಿಗೆ ಗಲಾಟೆ ನಡೆಸಿದ್ದರು ಎಂಬ ಆರೋಪವಿದೆ. ಈ ಸಂಬಂಧ ಬೆಂಗಳೂರು ದಕ್ಷಿಣ ಜಿಲ್ಲೆಯ ಎಸ್.ಪಿ ಅವರು ರಾಜ್ಯ ಪೊಲೀಸ್ ಮಹಾನಿರ್ದೇಶಕರಿಗೆ ಪತ್ರ ಬರೆದಿದ್ದರು. ಈ ಘಟನೆ ಆಧರಿಸಿ, ರಾಜ್ಯದ ಪೊಲೀಸರಿಗೆ ಸೂಚನೆ ರವಾನಿಸಲಾಗಿದೆ. ಎಲ್ಲಾ ಇಲಾಖೆಗಳ ಮುಖ್ಯಸ್ಥರೂ ಈ ಕುರಿತು ಆದೇಶ ಹೊರಡಿಸುವಂತೆ ಮನವಿ ಮಾಡಲಾಗಿದೆ.


ರಾಜ್ಯಪಾಲರಿಗೆ ಅವಮಾನ ಆರೋಪ

# ಮತ್ತೆ ಸದನ ಕಲಾಪ

## ಆಡಳಿತ ವಿಪಕ್ಷಗಳ ನಡುವೆ ನಿಯಮಾವಳಿ ಯುದ್ಧ!

## ವಿಧಾನಸಭೆಯಲ್ಲಿ ರಾಜ್ಯಪಾಲರ ಭಾಷಣ ಜಟಾಪಟಿ

### ಸದನದಿಂದ ಬಿ.ಕೆ.ಹರಿಪ್ರಸಾದ್ ಅಮಾನತಿಗೆ ಬಿಜೆಪಿ ಆಗ್ರಹ



• **ಉದಯವಾಹಿನಿ, ಬೆಂಗಳೂರು**

ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರನ್ನು ಅವಮಾನಿಸಿರುವ ಕಾಂಗ್ರೆಸ್ ಸದಸ್ಯ ಬಿ ಕೆ ಹರಿಪ್ರಸಾದ್ ಅವರನ್ನು ಸದನದಿಂದ ಅಮಾನತುಗೊಳಿಸಬೇಕು ಎಂದು ಒತ್ತಾಯಿಸಿ ಪ್ರತಿಪಕ್ಷ ಬಿಜೆಪಿ ಸದಸ್ಯರು ಶುಕ್ರವಾರ ವಿಧಾನ ಪರಿಷತ್‌ನಲ್ಲಿ ಗದ್ದಲ ಉಂಟುಮಾಡಿದ್ದರಿಂದ ಕಲಾಪವನ್ನು ಕೆಲಕಾಲ ಮುಂದೂಡಲಾಯಿತು. ಸರ್ಕಾರ ನೀಡಿದ ಪೂರ್ಣ ಭಾಷಣವನ್ನು ಓದದೆ ಹೋಗುತ್ತಿದ್ದ ರಾಜ್ಯಪಾಲರನ್ನು ತಡೆಯಲು ಬಿಕೆ ಹರಿಪ್ರಸಾದ್ ಪ್ರಯತ್ನಿಸಿದ್ದರು. ಅಧಿವೇಶನ ಆರಂಭವಾದ ಕೂಡಲೇ ರಾಜ್ಯಪಾಲರೊಂದಿಗೆ ಅಶಿಸ್ತಿನ ವರ್ತನೆ ತೋರಿದ ಹರಿಪ್ರಸಾದ್ ಅವರನ್ನು ಸದನದಿಂದ ವಜಾಗೊಳಿಸುವಂತೆ ಬಿಜೆಪಿ ಶಾಸಕರು ಒತ್ತಾಯಿಸಿದರು. ನಾವು ಗೂಂಡಾಗಿರಿಯನ್ನು ಸಹಿಸುವುದಿಲ್ಲ. ರಾಜ್ಯಪಾಲರನ್ನು ಅವಮಾನಿಸಿರುವ ಹರಿಪ್ರಸಾದ್ ಅವರನ್ನು ಅಮಾನತು ಮಾಡಿ ಎಂದು ಬಿಜೆಪಿ ಎಂಎಲ್ಸಿಗಳು ಒಕ್ಕೊರಲಿನಿಂದ ಘೋಷಣೆ ಕೂಗಿದರು.

ಕಲಾಪ ಆರಂಭವಾಗುತ್ತಿದ್ದಂತೆಯೇ ಈ ವಿಷಯ ಪ್ರಸ್ತಾಪಿಸಿದ ವಿಧಾನಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಬಿಕೆ ಹರಿಪ್ರಸಾದ್ ಅವರ ದುಂಡಾವರ್ತನೆಯನ್ನು ಸಹಿಸುವುದಿಲ್ಲ. ಕೂಡಲೇ ಅವರನ್ನು ಸದನದಿಂದ ಅಮಾನತುಗೊಳಿಸಬೇಕು ಎಂದು ಸಭಾಪತಿಗಳನ್ನು ಒತ್ತಾಯಿಸಿದರು. ರಾಜ್ಯಪಾಲರು ರಾಷ್ಟ್ರಗೀತೆಗೆ ಅವಮಾನ ಮಾಡಿದ್ದಾರೆ ಎಂಬ ಕಾಂಗ್ರೆಸ್ ಆರೋಪವನ್ನು ತಳ್ಳಿಹಾಕಿದ ಅವರು, ಗೆಹ್ಲೋಟ್ ಹೊರನಡೆಯುತ್ತಿದ್ದಂತೆ ರಾಷ್ಟ್ರಗೀತೆ ನುಡಿಸುತ್ತಿರಲಿಲ್ಲ.

**1** ವಿಧಾನಸಭೆಯ ಜಂಟಿ ಅಧಿವೇಶನದಲ್ಲಿ ಭಾಷಣ ಓದದೆ ನಿರ್ಗಮಿಸಿದ ರಾಜ್ಯಪಾಲರು

**2** ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ನಡೆ ವಿರುದ್ಧ ಕಾಂಗ್ರೆಸ್ ಸದಸ್ಯರಿಂದ ತೀವ್ರ ಆಕ್ಷೇಪ

**3** ರಾಜ್ಯಪಾಲರು ಸಂವಿಧಾನವನ್ನು ಉಲ್ಲಂಘನೆ ಮಾಡಿದ್ದಾರೆ ಎಂದು ಆಡಳಿತ ಪಕ್ಷ ಆಕ್ಷೇಪ ವ್ಯಕ್ತಪಡಿಸುವ ಸಾಧ್ಯತೆ

ಈ ಗೂಂಡಾಗಿರಿಯನ್ನು ನಾವು ಸಹಿಸುವುದಿಲ್ಲ. ರಾಜ್ಯಪಾಲರಿಗೆ ಮಾಡಿದ ಅವಮಾನ ಸಂವಿಧಾನಕ್ಕೆ ಮಾಡಿದ ಅವಮಾನ ಎಂದರು. ಬಿಜೆಪಿ ಆರೋಪಕ್ಕೆ ಉತ್ತರಿಸಿದ ಹರಿಪ್ರಸಾದ್, ರಾಜ್ಯಪಾಲರ ಭಾಷಣದ ಪ್ರಕ್ರಿಯೆ ಬಗ್ಗೆ ನಿಯಮಾವಳಿ ಓದುತ್ತಿದ್ದಂತೆ ಬಿಜೆಪಿ ಸದಸ್ಯರು ಆಕ್ಷೇಪಿಸಿದರು.

ಪೋಕ್ಸೋ ಪ್ರಕರಣದ ನಾಯಕರಿಗೆ ಹಾರ ಹಾಕುವ ಪಕ್ಷದವರು ಇವರು, ಇವರಿಂದ ಪಾಠ ಕಲಿಯಬೇಕಾ? ಎಂದು ಪ್ರಶ್ನಿಸಿದರು. ಆಡಳಿತ ವಿಪಕ್ಷಗಳ ನಡುವೆ ಭಾರಿ ಗದ್ದಲ, ಕೋಲಾಹಲ ಸೃಷ್ಟಿಯಾಯಿತು. ಹರಿಪ್ರಸಾದ್ ಎತ್ತಿದ್ದ ಪಾಯಿಂಟ್ ಆಫ್ ಆರ್ಡರ್ ಅನ್ನು ಸಭಾಪತಿ ಹೊರಟ್ಟಿ ಅವರು ತಿರಸ್ಕರಿಸಿ, ಸದನವನ್ನು 10 ನಿಮಿಷಗಳ ಕಾಲ ಮುಂದೂಡಿದರು.

**ಅತ್ಯಾಚಾರಿ ಪಕ್ಷದವರಿಂದ ಪಾಠ ಕಲಿಯಬೇಕಿಲ್ಲ:** ಸದನದಲ್ಲಿ ಬಿಜೆಪಿ ಸದಸ್ಯರು ಅಮಾನತಿಗೆ ಒತ್ತಾಯಿಸುತ್ತಿದ್ದಂತೆ ಎದ್ದು ನಿಂತು ಆಕ್ಷೇಪಿಸಿದ ಕಾಂಗ್ರೆಸ್‌ನ ಬಿ.ಕೆ.ಹರಿಪ್ರಸಾದ್, 'ನಿಮ್ಮದು ಅತ್ಯಾಚಾರಿಗಳ ಪಕ್ಷ, ಭ್ರಷ್ಟಾಚಾರಿಗಳ ಪಕ್ಷ, ಬಲತ್ಕಾರಿ ಪಾಪಿಗಳಿವರು. ಆರೆಸ್ಸೆಸ್‌ನವರು ಸಂವಿಧಾನದ ಮೌಲ್ಯವನ್ನು ಕೊಲೆಗೈಯುತ್ತಿದ್ದಾರೆ. ಪೋಕೋ ಪ್ರಕರಣದ ನಾಯಕರಿಗೆ ಹಾರ ಹಾಕುವ ಪಕ್ಷದವರು ಇವರು, ಇವರಿಂದ ನಾನು ಪಾಠ ಕಲಿಯಬೇಕೆ?' ಎಂದು ಹರಿಪ್ರಸಾದ್ ಆಕ್ರೋಶ ವ್ಯಕ್ತಪಡಿಸಿದರು. ನಾವು ಸುಳ್ಳು ಹೇಳಿದ್ರೆ ರಾಜೀನಾಮೆ ಕೊಡಲು ಸಿದ್ಧ, ನಮ್ಮ ಬಳಿ ಲಂಚದ ಆಡಿಯೋ ಪೆನ್ ಡ್ರೈವ್ ಇದೆ. ಎಲ್ಲವೂ ದಾಖಲೆ ಇದೆ. ಕೊಡುತ್ತೇವೆ, ಚರ್ಚೆಗೆ ಕೊಡಿ. ನಾನು ಇದರಲ್ಲಿ ಏನಾದರೂ ತಪ್ಪು ಮಾತನಾಡಿದರೆ ನಮಗೆ ಶಿಕ್ಷೆ ಕೊಡಿ. ಆದರೆ ಲಂಚ ಕೇಳಿರೋ ಇಲಾಖೆಯ ಸಚಿವರ ರಾಜೀನಾಮೆ ಪಡೆಯಿರಿ. ನಾನು ಸುಮ್ಮನೆ ಸಂತೆಯಲ್ಲಿ ಭಾಷಣ ಮಾಡಿಲ್ಲ. ನಾನು ಸುಳ್ಳು ಆರೋಪ ಮಾಡಿದ್ರೆ, ರಾಜೀನಾಮೆಗೆ ಸಿದ್ಧ. ನೋಡಿ ನಾನು ಪೆನ್ ಡ್ರೈವ್ ತಂದಿದ್ದೇನೆ. ನೋಡಿ ಅದಕ್ಕೆ ದಾಖಲೆ ತಂದಿದ್ದೇನೆ. ಈಶ್ವರಪ್ಪ ಮೇಲೆ ಸುಮ್ಮನೆ ಆರೋಪ ಮಾಡಿದ್ರಿ. ಈಗ ನೀವು ಹರಾಜು ಅಂತ ಹಾಕ್ತಿದ್ದೀರ. ಎರಡು ಸಾವಿರ ಕೋಟಿ ಅಕ್ರಮ ನಡೆದಿದೆ. ಮಂತ್ರಿ ಹೇಳಿದ್ದಾರೆ ಪಿತೂರಿ ಇದೆ ಅಂತ. ಅವರು ಯಾರು ಅಂತ ಹೇಳಲಿ ಎಂದು ಒತ್ತಾಯಿಸಿದರು. ಚರ್ಚೆಗೆ ಅವಕಾಶ ನೀಡದ ಸ್ಪೀಕರ್ ರಾಜ್ಯಪಾಲರ ಭಾಷಣದ ಮೇಲಿನ ವಂದನಾ ನಿರ್ಣಯದ ಕುರಿತ ಚರ್ಚೆಗೆ ಅವಕಾಶ ಮಾಡಿಕೊಟ್ಟರು.

### ಆರೋಪ ಪ್ರತ್ಯಾರೋಪ

ಪುನಃ ಆರಂಭವಾದ ಕಲಾಪದ ವೇಳೆ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್ ಅವರು, ರಾಜ್ಯಪಾಲರು ರಾಷ್ಟ್ರಗೀತೆಗೆ ಅವಮಾನ ಮಾಡಿದ್ದಾರೆ. ಸರ್ಕಾರ ಸಿದ್ಧಪಡಿಸಿದ ಭಾಷಣ ಓದಬೇಕಿರುವುದು ರಾಜ್ಯಪಾಲರ ಕರ್ತವ್ಯ. ಅದನ್ನು ಅಲ್ಲಗಳೆದು ಸಂವಿಧಾನ ಉಲ್ಲಂಘಿಸಿದ್ದಾರೆ. ಇದರ ವಿರುದ್ಧ ಚರ್ಚೆಯಾಗಬೇಕು. ರಾಜ್ಯಪಾಲರು ಕ್ಷಮೆ ಕೋರಬೇಕು ಎಂದು ಆಗ್ರಹಿಸಿದರು. ಪ್ರತಿಪಕ್ಷ ನಾಯಕ ಆರ್. ಅಶೋಕ್, ವಿವಾದ ಸೃಷ್ಟಿಸಿದ್ದ ರಾಜ್ಯ ಸರ್ಕಾರ. ಕಾನೂನು ಸಚಿವರು ಇದರಲ್ಲಿ ಮೊದಲ ಅಪರಾಧಿ. ರಾಜ್ಯಪಾಲರಿಗೆ ಅವಮಾನ ಮಾಡಿದ್ದೀರಿ. ಮೊದಲು ಸರ್ಕಾರ ರಾಜ್ಯಪಾಲರ ಕ್ಷಮೆ ಯಾಚಿಸಬೇಕು ಎಂದು ಆಕ್ರೋಶ ವ್ಯಕ್ತಪಡಿಸಿದರು. ಬಿಜೆಪಿಯ ಸುನಿಲ್ ಕುಮಾರ್, ರಾಜ್ಯಪಾಲರು ದಲಿತರು ಎಂಬ ಕಾರಣಕ್ಕಾಗಿ ಸರ್ಕಾರ ಅವಮಾನ ಮಾಡಿದೆಯೇ? ರಾಷ್ಟ್ರಗೀತೆ ಬಗ್ಗೆ ಮಾತನಾಡುವ ಸರ್ಕಾರ ವಿಧಾನಸೌಧದಲ್ಲಿ ಪಾಕಿಸ್ತಾನ ಜಿಂದಾಬಾದ್ ಎಂದು ಕೂಗಿದಾಗ ಎಲ್ಲಿ ಹೋಗಿತ್ತು? ಎಂದು ಕಿಡಿ ಕಾರಿದರು.

### 5 ನಿಮಿಷಗಳ ಹೈಡ್ರಾಮಾ

ಇಡೀ ಹೈಡ್ರಾಮಾ ಕೇವಲ 5 ನಿಮಿಷಗಳಲ್ಲಿ ನಡೆದಿದೆ. ರಾಜ್ಯಪಾಲರ ಅಚ್ಚರಿ ಬೆಳವಣಿಗೆ ಹಾಗೂ 64 ಸೆಕೆಂಡುಗಳಲ್ಲಿ ಭಾಷಣ ಮುಗಿಸುವುದನ್ನು ನಿರೀಕ್ಷಿಸದ ಉಭಯ ಪಕ್ಷಗಳ ಸದಸ್ಯರು, ಸಿಬ್ಬಂದಿ ಮೂಕವಿಸ್ಮಿತರಾಗಿ ನಿಂತರು. ಬೆಳಗ್ಗೆ 11.06ಕ್ಕೆ ಸದನಕ್ಕೆ ಆಗಮಿಸಿದ ರಾಜ್ಯಪಾಲರು 11.11 ಗಂಟೆಗೆ ಭಾಷಣ ಮುಗಿಸಿ ಹೊರ ನಡೆದರು. ಹೀಗಾಗಿ ರಾಜ್ಯಪಾಲರ ಭಾಷಣ ಮುಗಿದಾಗ ರಾಷ್ಟ್ರಗೀತೆಯೂ ನುಡಿಸಿಲ್ಲ. ಇದು ಮತ್ತೊಂದು ವಿವಾದಕ್ಕೆ ಕಾರಣವಾಗಿದೆ.



### ಸಚಿವ ತಿಮ್ಮಾಪುರ ರಾಜೀನಾಮೆಗೆ ಪಟ್ಟು

### ಕೇಂದ್ರದ ವಿರುದ್ಧ ಟೀಕಾಪ್ರಹಾರ, ಗವರ್ನರ್ ನಕಾರ

ರಾಜ್ಯ ಸರ್ಕಾರವು ವಿಬಿ ಜಿ ರಾಮ್ ಜಿ ಕಾಯ್ದೆ ವಿರೋಧಿಸುವುದು ಸೇರಿ ಕೇಂದ್ರದ ವಿರುದ್ಧ ಟೀಕಾಪ್ರಹಾರ ಮಾಡಿದ್ದ ಅಂಶಗಳನ್ನು ರಾಜ್ಯಪಾಲರ ಭಾಷಣದಲ್ಲಿ ಸೇರಿಸಿತ್ತು. ಹೀಗಾಗಿ ಸರ್ಕಾರ ಸಿದ್ಧಪಡಿಸಿದ್ದ ಭಾಷಣ ಸಂಪೂರ್ಣ ಓದಲು ನಿರಾಕರಿಸಿದ ರಾಜ್ಯಪಾಲರು ಮೊದಲ, ಕೊನೆಯ ಅಂಶವನ್ನು ಪ್ರಸ್ತಾಪಿಸಿ ಜೈ ಹಿಂದ್, ಜೈ ಕರ್ನಾಟಕ ಎಂದು ಹೇಳಿ ಭಾಷಣಕ್ಕೆ ಮುಕ್ತಾಯ ಹಾಡಿ ರಾಷ್ಟ್ರಗೀತೆಗೂ ಕಾಯದೆ ಹೊರ ನಡೆದರು.ಆಗ ಕಾನೂನು ಸಚಿವ ಎಚ್.ಕೆ.ಪಾಟೀಲ್ ಸೇರಿ ಹಿರಿಯ ಸಚಿವರು ನೀವು ಕಡ್ಡಾಯವಾಗಿ ಭಾಷಣ ಓದಬೇಕು ಎಂದು ಕೂಗಿದರು. ಆದರೂ ಕಿವಿಗೊಡದೆ ಭಾಷಣ ಮುಗಿಸಿ ವಿರೋಧಪಕ್ಷದ ಸಾಲಿನಲ್ಲಿದ್ದವರಿಗೆ ಕೈ ಮುಗಿಯುತ್ತಾ ರಾಜ್ಯಪಾಲರು ಹೊರ ನಡೆದರು.ಈ ವೇಳೆ ರಾಜ್ಯಪಾಲರನ್ನು ತಡೆಯಲು ಅಡ್ಡ ಹಾಕಿದ ಕಾಂಗ್ರೆಸ್‌ನ ಪರಿಷತ್ ಸದಸ್ಯ ಎಸ್.ರವಿ ಅವರು ಪೂರ್ಣ ಭಾಷಣ ಓದುವಂತೆ ಕೋರಿದರು. ಬಳಿಕ ಬಿ.ಕೆ.ಹರಿಪ್ರಸಾದ್ ಅವರು ಅಡ್ಡಲಾಗಿ ನಿಂತು ಹೊರ ಹೋಗದಂತೆ ತಡೆಯಲು ಯತ್ನಿಸಿದರು. ಈ ವೇಳೆ ಮಾರ್ಷಲ್‌ಗಳು ಹರಿಪ್ರಸಾದ್ ಅವರನ್ನು ಹೊರಗೆ ತಳ್ಳಿದರು.

## ಸೈಬರ್ ಅಪರಾಧ ಸಹಾಯವಾಣಿಗೆ 4 ವರ್ಷಗಳಲ್ಲಿ 24 ಲಕ್ಷ ಕರೆ

• **ಉದಯವಾಹಿನಿ, ಬೆಂಗಳೂರು**

ರಾಜ್ಯದಲ್ಲಿ ಸೈಬರ್ ಅಪರಾಧಗಳ ಕುರಿತ ರಾಷ್ಟ್ರೀಯ ಸಹಾಯವಾಣಿ (1930)ಗೆ ಬರುವ ಕರೆಗಳ ಸಂಖ್ಯೆ ವರ್ಷದಿಂದ ವರ್ಷಕ್ಕೆ ಏರಿಕೆ ಕಂಡಿದ್ದು, ಸೈಬರ್ ಅಪರಾಧಗಳ ಬಗ್ಗೆ ಜನರು ಜಾಗೃತವಾಗುತ್ತಿರುವ ಬಗ್ಗೆ ಮುನ್ಸೂಚನೆ ನೀಡಿದೆ.

ಕಳೆದ ನಾಲ್ಕು ವರ್ಷಗಳ ಅವಧಿಯಲ್ಲಿ ವರ್ಷದಿಂದ ವರ್ಷಕ್ಕೆ ಸೈಬರ್ ಸಹಾಯವಾಣಿಗೆ ಬರುವ ಕರೆಗಳ ಸಂಖ್ಯೆ ದ್ವಿಗುಣವಾಗುತ್ತಿದ್ದು, 2025ರಲ್ಲಿ ಬರೋಬ್ಬರಿ 24 ಲಕ್ಷ ಕರೆಗಳು ದಾಖಲಾಗಿರುವುದು ಪೊಲೀಸ್ ಇಲಾಖೆಯ ಅಂಕಿ-ಅಂಶಗಳಿಂದ ಬಯಲಾಗಿದೆ.

**2025ರ ಅಂತ್ಯಕ್ಕೆ ಕರೆ ಸಂಖ್ಯೆ ಹೆಚ್ಚಳ:** 2022ರಲ್ಲಿ1,30,330ರಷ್ಟಿದ್ದ ಕರೆಗಳ ಸಂಖ್ಯೆ, 2023ರಲ್ಲಿ4,67,258ಕ್ಕೆ ಏರಿಕೆ ಕಂಡಿತ್ತು. 2024ರಲ್ಲಿ ಇದೇ ಸಂಖ್ಯೆ 10,79,458ಗಳಿಗೆ ಹೆಚ್ಚಾಯಿತು. 2025ರ ಅಂತ್ಯಕ್ಕೆ ಕರೆಗಳ ಸಂಖ್ಯೆ 24,08,475ರ ಗಡಿ ದಾಟಿದೆ. ಆನ್‌ಲೈನ್ ವಂಚನೆ, ಡಿಜಿಟಲ್ ಅರೆಸ್ಟ್, ಸೈಬರ್ ಅಪರಾಧಗಳ ಬಗ್ಗೆ ಜನರಲ್ಲಿಜಾಗೃತಿ ಮೂಡಿಸಲು ಪೊಲೀಸ್ ಇಲಾಖೆ ಜಾಗೃತಿ ಕಾರ್ಯಕ್ರಮಗಳನ್ನು ರೂಪಿಸುತ್ತಿರುವ ಹಿನ್ನೆಲೆಯಲ್ಲಿಜನರು ಜಾಗೃತರಾಗಿ ಅಪರಾಧಗಳು ನಡೆದ ತಕ್ಷಣ ಸಹಾಯವಾಣಿ ಮೊರೆ ಹೋಗುತ್ತಿರುವುದು ಹಲವು ಪ್ರಕರಣಗಳಲ್ಲಿಶೀಘ್ರ ಆರೋಪಿಗಳ ಪತ್ತೆಗೆ ಸಹಕಾರಿಯಾಗುತ್ತಿದೆ ಎಂದು ಪೊಲೀಸ್ ಇಲಾಖೆ ತಿಳಿಸಿದೆ.

**ಗೋಲ್ಡನ್ ಅವರ್‌ನಲ್ಲಿ ದೂರು ಕೊಡಿ:** ''ಸೈಬರ್ ಅಪರಾಧ ಜರುಗಿದ ಕೂಡಲೇ ದೂರು ದಾಖಲಿಸುವುದರಿಂದ ಬಾಧಿತರ ಬ್ಯಾಂಕ್ ಖಾತೆಗಳಲ್ಲಿರುವ ಹಣವನ್ನು ವಂಚಕರ ಕೈಗೆ ಸಿಗದಂತೆ ಉಳಿಸಲು ಕಾಲಾವಕಾಶ ಸಿಗಲಿದೆ. ದೂರು ನೀಡಲು ತಡಮಾಡಿದರೆ ವಂಚಕರ ಬಲೆಗೆ ಬೀಳುವ ಅಪಾಯ ಹೆಚ್ಚಾಗಿರಲಿದೆ,'' ಎಂದು ಅವರು ಎಚ್ಚರಿಕೆ ನೀಡಿದ್ದಾರೆ.

ಸದ್ಯ ಸಹಾಯವಾಣಿಗೆ ಬರುವ ಕರೆಗಳ ಸಂಖ್ಯೆ ಏರಿಕೆ ಕಂಡರೂ, ಹಣ ಕಳೆದುಕೊಂಡವರಿಗೆ ಹಣ ಮರಳಿಸುವ ಕೆಲಸದಲ್ಲಿಸವಾಲುಗಳು ಎದುರಾಗುತ್ತಿವೆ.

**ಕರೆ ಏರಿಕೆಯಾದರೂ ತಗ್ಗದ ವಂಚನೆ:** ಸಹಾಯವಾಣಿಗೆ ಕರೆಗಳು ಬರುವುದು ಹೆಚ್ಚಳವಾಗಿದ್ದರೂ ಸೈಬರ್ ಅಪರಾಧಗಳ ಮೂಲಕ ವಂಚಕರ ಪಾಲಾಗುವ ಹಣವನ್ನು ಸ್ಥಗಿತಗೊಳಿಸುವುದು ಸವಾಲಾಗಿದೆ.

2022ರಲ್ಲಿ ರಾಜ್ಯದ ವಿವಿಧ ಸೈಬರ್ ಅಪರಾಧಗಳಲ್ಲಿ ನಷ್ಟವಾಗಿದ್ದ 113 ಕೋಟಿ ರೂ. ಪೈಕಿ ಕೇವಲ 8 ಕೋಟಿ ರೂ.ಗಳನ್ನು ಮಾತ್ರ ಖಾತೆಯಲ್ಲಿ ನಿರ್ಬಂಧಿಸಲಾಗಿತ್ತು. 2025ರಲ್ಲಿ2,640 ಕೋಟಿ ರೂ. ಸೈಬರ್ ವಂಚಕರ ಪಾಲಾಗಿದ್ದು, ಇದರಲ್ಲಿ436 ಕೋಟಿ ರೂ. ಮಾತ್ರ ಬಾಧಿತರ ಬ್ಯಾಂಕ್ ಖಾತೆಗಳಲ್ಲಿ ನಿರ್ಬಂಧಿಸಲಾಗಿದೆ.



**ಸೈಬರ್ ವಂಚನೆ ಅಂಕಿ-ಅಂಶ**

| ವರ್ಷ | ಪ್ರಕರಣ |
|---|---|
| 2022 | 12,879 |
| 2023 | 21,903 |
| 2024 | 21,995 |
| 2025 | 14,391 |



"ಸೈಬರ್ ವಂಚನೆ ಪ್ರಕರಣವೊಂದರಲ್ಲಿ2.2 ಕೋಟಿ ರೂ.ಗಳನ್ನು ಶೀಘ್ರ ರಿಕವರಿ ಮಾಡಲಾಯಿತು. ಅಪರಾಧ ನಡೆದ 20 ರಿಂದ 30 ನಿಮಿಷದ ಅವಧಿಯಲ್ಲಿ ಸಹಾಯವಾಣಿಗೆ ಕರೆ ಮಾಡಿ ದೂರು ದಾಖಲಿಸಿದ್ದರಿಂದ ಶೇ.100 ರಷ್ಟು ರಿಕವರಿ ಸಾಧ್ಯವಾಯಿತು

**-ರಾಜಾ ಇಮಾಮ್ ಖಾಸಿಂ,** ಅಪರಾಧ ವಿಭಾಗದ ಡಿಸಿಪಿ



ಸೈಬರ್ ಅಪರಾಧಗಳು ಜರುಗಿದ 60ರಿಂದ 90 ನಿಮಿಷಗಳ ಗೋಲ್ಡನ್ ಅವರ್‌ನಲ್ಲಿ ದೂರು ನೀಡಿದರೆ, ಆರೋಪಿಗಳ ಪತ್ತೆ ಮತ್ತಷ್ಟು ಸುಲಭವಾಗಲಿದೆ

**-ಡಾ.ಎಂ.ಎ. ಸಲೀಂ,** ಡಿಜಿಪಿ

# ಖಾಸಗಿ ಕಂಪನಿಯಿಂದ ಬರೋಬ್ಬರಿ 10,500 ಕೋಟಿ ರೂ. ಹೂಡಿಕೆ!

## ದಾವೋಸ್‌ನಲ್ಲಿ ನಡೆದ ವಿಶ್ವ ಆರ್ಥಿಕ ಶೃಂಗಸಭೆಯಲ್ಲಿ ಖಾಸಗಿ ಉದ್ಯಮ ಸಂಸ್ಥೆ ಜತೆ ಸರ್ಕಾರ ಮಾತುಕತೆ


• **ಉದಯವಾಹಿನಿ, ಬೆಂಗಳೂರು**

ಉತ್ತರ ಕರ್ನಾಟಕದ 2 ಪ್ರಮುಖ ಜಿಲ್ಲೆಗಳಿಗೆ ಮುಂದಿನ 3 ವರ್ಷದಲ್ಲಿ ಬರೋಬ್ಬರಿ 10,500 ಕೋಟಿ ರೂ. ಹೂಡಿಕೆ ಮಾಡಲಾಗುತ್ತಿದೆ. ದಾವೋಸ್‌ನಲ್ಲಿ ನಡೆದ ವಿಶ್ವ ಆರ್ಥಿಕ ಶೃಂಗಸಭೆಯಲ್ಲಿ ಖಾಸಗಿ ಉದ್ಯಮ ಸಂಸ್ಥೆ ಜತೆ ಈ ಕುರಿತ ಮಹತ್ವದ ಒಪ್ಪಂದವನ್ನು ಕರ್ನಾಟಕ ಸರ್ಕಾರ ಮಾಡಿಕೊಂಡಿದೆ.

ದಾವೋಸ್‌ನಲ್ಲಿ ನಡೆದಿರುವ ವಿಶ್ವ ಆರ್ಥಿಕ ಶೃಂಗಸಭೆಯಲ್ಲಿ ಕರ್ನಾಟಕದ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಅವರು, ರಾಜ್ಯದಲ್ಲಿ ಹೂಡಿಕೆ ಆಕರ್ಷಿಸುವ ನಿಟ್ಟಿನಲ್ಲಿ ಮಹತ್ವದ ಬೆಳವಣಿಗೆಗಳನ್ನು ಪ್ರಕಟಿಸಿದ್ದಾರೆ. ಆರ್‌ಪಿ-ಸಂಜೀವ್ ಗೊಯೆಂಕಾ ಸಮೂಹವು ವಿಜಯಪುರ ಮತ್ತು ಬಳ್ಳಾರಿ ಜಿಲ್ಲೆಗಳಲ್ಲಿ ಮುಂದಿನ ಮೂರು ವರ್ಷಗಳಲ್ಲಿ 10,500 ಕೋಟಿ ರೂ. ಹೂಡಿಕೆ ಮಾಡಲಿದೆ.

### ವಿಜಯಪುರ ಮತ್ತು ಬಳ್ಳಾರಿಯಲ್ಲಿ ಹೂಡಿಕೆ

ಐನಾಕ್ಸ್ ಜಿಎಫ್‌ಎಲ್ ಕಂಪನಿ ರಾಜ್ಯದಲ್ಲಿ ಈಗಾಗಲೇ 10 ಸಾವಿರ ಕೋಟಿ ರೂ. ಹೂಡಿಕೆ ಮಾಡಿದ್ದು, ಇದೀಗ ಪವನ ವಿದ್ಯುತ್‌ಗೆ ಬೇಕಾದ ದೈತ್ಯ ಗೋಪುರಗಳ ಅಭಿವೃದ್ಧಿ ಘಟಕವನ್ನು ಆರಂಭಿಸಲು ಮುಂದಾಗಿದೆ. ರಾಮ್ಕಿ ಗ್ರೂಪ್ ತ್ಯಾಜ್ಯ ನಿರ್ವಹಣೆ ಘಟಕಗಳನ್ನು ಸ್ಥಾಪಿಸಲು ಆಸಕ್ತಿ ತೋರಿದ್ದು, ಲೆನೋವೊ ಕಂಪನಿ ಸ್ಥಳೀಯ ಉದ್ಯಮಿಗಳೊಂದಿಗೆ ಸಹಭಾಗಿತ್ವಕ್ಕೆ ಸಿದ್ಧತೆ ನಡೆಸಿದೆ.



ಈ ಎಲ್ಲಾ ಬೆಳವಣಿಗೆಗಳು ಕರ್ನಾಟಕವನ್ನು ಜಾಗತಿಕ ಮಟ್ಟದಲ್ಲಿ ಮತ್ತಷ್ಟು ಬಲಪಡಿಸಲಿವೆ. ತ್ಯಾಜ್ಯ ನಿರ್ವಹಣೆಯಲ್ಲಿ ಪರಿಣತಿ ಹೊಂದಿರುವ ರಾಮ್ಕಿ ಗ್ರೂಪ್ ಕಂಪನಿಯು, ರಾಜ್ಯದ ಕೆಐಎಡಿಬಿ ಕೈಗಾರಿಕಾ ಪ್ರದೇಶಗಳಲ್ಲಿ ಸಾಮಾನ್ಯ ತ್ಯಾಜ್ಯ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸಲು ಆಸಕ್ತಿ ತೋರಿಸಿದೆ. ಇದರ ಜೊತೆಗೆ, ರಾಮ್ಕಿ ಗ್ರೂಪ್ ಜೊತೆಗೂಡಿ 'ಫಾರ್ಮಾ ಪಾರ್ಕ್' ಸ್ಥಾಪಿಸುವ ಬಗ್ಗೆಯೂ ಚರ್ಚಿಸಲಾಗಿದೆ.

ಟೆಕ್ ಮಹೀಂದ್ರ ಕಂಪನಿಯು 2ನೇ ಹಂತದ ನಗರಗಳಲ್ಲಿ ಹೂಡಿಕೆ ಮಾಡಲು ಮುಂದಾಗಿದೆ. ಸಿಂಗಾಪುರ ಮೂಲದ ಕಂಪನಿಗಳಿಂದ ಕರ್ನಾಟಕಕ್ಕೆ ಹೆಚ್ಚಿನ ಹೂಡಿಕೆ ಆಕರ್ಷಿಸುವ ಗುರಿಯನ್ನು ರಾಜ್ಯ ಸರ್ಕಾರ ಹೊಂದಿದೆ. ಈ ನಿಟ್ಟಿನಲ್ಲಿ, ಸಿಂಗಾಪುರ ಆರ್ಥಿಕ ಅಭಿವೃದ್ಧಿ ಮಂಡಳಿಯ ಪ್ರತಿನಿಧಿಗಳೊಂದಿಗೆ 'ಸಿಂಗಾಪುರ ಪಾರ್ಕ್' ಸ್ಥಾಪಿಸುವ ಬಗ್ಗೆಯೂ ಪ್ರಸ್ತಾಪಿಸಲಾಗಿದೆ. ಪರ್ಸನಲ್ ಕಂಪ್ಯೂಟರ್, ಲ್ಯಾಪ್‌ಟಾಪ್, ಟ್ಯಾಬ್ಲೆಟ್ ಮತ್ತು ಸ್ಮಾರ್ಟ್‌ಫೋನ್‌ಗಳ ತಯಾರಿಕೆಯಲ್ಲಿ ಪ್ರಮುಖವಾಗಿರುವ ಲೆನೋವೊ ಕಂಪನಿಯು, ಸ್ಥಳೀಯ ಪೂರೈಕೆದಾರರು ಮತ್ತು ಉದ್ಯಮಿಗಳೊಂದಿಗೆ ಸಹಭಾಗಿತ್ವ ಹೊಂದುವ ಬಗ್ಗೆ ಚರ್ಚಿಸಿದೆ.

ರಕ್ಷಣಾ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಕ್ವಾನ್ ಕೇಬಲ್ಸ್ ಕಂಪನಿಯು, ಭಾರತದಲ್ಲಿ ತಮ್ಮ ಉತ್ಪಾದನೆಯನ್ನು ಹೆಚ್ಚಿಸಲು ನಿರ್ಧರಿಸಿದೆ. ಜಾಗತಿಕ ವ್ಯಾಪಾರ ಮತ್ತು ಕೈಗಾರಿಕಾ ಕ್ಷೇತ್ರದಲ್ಲಿ ಕರ್ನಾಟಕವು ಹಿಂದುಳಿಯದಂತೆ, ಸ್ಪರ್ಧಾತ್ಮಕವಾಗಿ ತನ್ನ ಸ್ಥಾನವನ್ನು ಬಲಪಡಿಸಿಕೊಳ್ಳಲು ರಾಜ್ಯದ ನಿಯೋಗವು ಬೋಸ್ಟನ್ ಕನ್ಸಲ್ಟಿಂಗ್ ಗ್ರೂಪ್ ನ ವ್ಯವಸ್ಥಾಪಕ ನಿರ್ದೇಶಕ ನಿಕೋಲಸ್ ಲ್ಯಾಂಗ್ ಅವರೊಂದಿಗೆ ಸುಂಕ, ಕೃತಕ ಬುದ್ಧಿಮತ್ತೆ ಮತ್ತು ಹೊಸ ತಂತ್ರಜ್ಞಾನಗಳ ಕುರಿತು ವಿಸ್ತೃತವಾಗಿ ಚರ್ಚಿಸಿದೆ.

ಸ್ನೈಡರ್ ಎಲೆಕ್ಟ್ರಿಕ್ ಕಂಪನಿಯು 20 ಹೆಚ್ಚುವರಿ ತರಬೇತಿ ಮೂಲಸೌಕರ್ಯ ಸೌಲಭ್ಯಗಳನ್ನು ಸ್ಥಾಪಿಸುವ ಯೋಜನೆಯನ್ನು ಹೊಂದಿದೆ. ಭವಿಷ್ಯದಲ್ಲಿ ಇದನ್ನು 100 ಕೌಶಲ ಅಭಿವೃದ್ಧಿ ಕೇಂದ್ರಗಳವರೆಗೆ ವಿಸ್ತರಿಸುವ ಗುರಿಯನ್ನು ಕಂಪನಿ ಹೊಂದಿದೆ. ಸ್ವಿಜರ್ಲೆಂಡ್‌ನ ಕಂಪನಿಗಳೊಂದಿಗೆ ರಾಜ್ಯದ ಕೈಗಾರಿಕಾ ಸಂಬಂಧವನ್ನು ಉತ್ತೇಜಿಸುವ ನಿಟ್ಟಿನಲ್ಲಿ, ಸ್ವಿಸ್ ಚೇಂಬರ್ಸ್ ಇಂಡಿಯಾದೊಂದಿಗೆ ದಾವೋಸ್ ಸಮಾವೇಶದಲ್ಲಿ ರಾಜ್ಯ ಸರ್ಕಾರ ಒಡಂಬಡಿಕೆಗೆ ಸಹಿ ಹಾಕಿದೆ.

### ಟೆಕ್ ಮಹೀಂದ್ರ ಕಂಪನಿ ಒಲವು

ಯೋಜನೆಗಳನ್ನು ನಿಗದಿತ ಸಮಯದೊಳಗೆ ಪೂರ್ಣಗೊಳಿಸಲು ರಾಜ್ಯ ಸರ್ಕಾರ ನೀಡುತ್ತಿರುವ ಬೆಂಬಲವನ್ನು ವಿವಿಧ ಉದ್ಯಮ ಸಮೂಹಗಳು ಶ್ಲಾಘಿಸಿವೆ. ಬೆಂಗಳೂರಿನ ಹೊರಗಿನ ನಗರಗಳನ್ನು ಸ್ವಾವಲಂಬಿ ನಗರಗಳಾಗಿ ಬೆಳೆಸುವ ಉದ್ದೇಶಕ್ಕೆ ಪೂರಕವಾಗಿ, ಟೆಕ್ ಮಹೀಂದ್ರ ಕಂಪನಿಯು ರಾಜ್ಯದ 2ನೇ ಹಂತದ ನಗರಗಳಲ್ಲಿ ತಮ್ಮ ವಿಸ್ತರಣೆಯನ್ನು ಮಾಡಲು ಒಲವು ತೋರಿದೆ.

### ಕುಷ್ಟಗಿಯಲ್ಲಿ ಪವನ ವಿದ್ಯುತ್‌ಗೆ ಅಗತ್ಯವಿರುವ ದೊಡ್ಡ ಗೋಪುರ


ಕುಷ್ಟಗಿಯಲ್ಲಿ ಪವನ ವಿದ್ಯುತ್‌ಗೆ ಬೇಕಾದ ಟರ್ಬೈನ್ ಬ್ಲೇಡ್‌ಗಳನ್ನು ಉತ್ಪಾದಿಸುತ್ತಿರುವ ಐನಾಕ್ಸ್ ಜಿಎಫ್‌ಎಲ್ ಕಂಪನಿ, ಇದೀಗ ಅದೇ ಪ್ರದೇಶದಲ್ಲಿ ಪವನ ವಿದ್ಯುತ್‌ಗೆ ಅಗತ್ಯವಿರುವ ದೊಡ್ಡ ಗೋಪುರಗಳನ್ನು ತಯಾರಿಸುವ ಘಟಕವನ್ನು ಆರಂಭಿಸಲು ಉತ್ಸುಕತೆ ತೋರಿದೆ. ಈ ಕಂಪನಿಯು ಈಗಾಗಲೇ ಕರ್ನಾಟಕದಲ್ಲಿ 10 ಸಾವಿರ ಕೋಟಿ ರೂ. ಹೂಡಿಕೆ ಮಾಡಿದೆ ಎಂದು ಸಚಿವರು ತಿಳಿಸಿದರು.

**ಈ ದಿನದ ದರ** ಪೆಟ್ರೋಲ್: 102.92 ₹/L ಡೀಸೆಲ್ : 90.99 ₹/L ಬಂಗಾರ: ₹15,715/Gram24ct ₹14,405/Gram22ct ಬೆಳ್ಳಿ: ₹340.00/Gram

## ಮಧ್ವನವಮಿ ಉತ್ಸವ-2026

• ಉದಯವಾಹಿನಿ ಬೆಂಗಳೂರು

ತ್ಯಾಗರಾಜನಗರದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಮಧ್ವನವಮಿ ಪ್ರಯುಕ್ತ ಜನವರಿ 27, ಮಂಗಳವಾರ ಬೆಳಗ್ಗೆ 8-00 ಗಂಟೆಯಿಂದ ಹಮ್ಮಿಕೊಂಡಿರುವ ಧಾರ್ಮಿಕ ಕಾರ್ಯಕ್ರಮಗಳು: ಮಧ್ವಾಚಾರ್ಯರಿಗೆ ಹಾಗೂ ಗುರುರಾಯರಿಗೆ ಫಲ ಪಂಚಾಮೃತ ಅಭಿಷೇಕ, ವಿಶೇಷ ಅಲಂಕಾರ, ಸಾಮೂಹಿಕ ಶ್ರೀ ವಾಯು ಸ್ತುತಿ ಮತ್ತು ಸಾಮೂಹಿಕ ಶ್ರೀ ಸುಮಧ್ವ ವಿಜಯ ಪಾರಾಯಣ, ನೂತನ ಪ್ರಾಣದೇವರ ಉತ್ಸವ ಮೂರ್ತಿ ಪ್ರಾಣಪ್ರತಿಷ್ಠಾಪನೆ ಮತ್ತು ರಜತ ಕವಚ ಸಮರ್ಪಣೆ, ವಿವಿಧ ಭಜನಾ ಮಂಡಳಿಗಳ ಗಾಯನದೊಂದಿಗೆ ಶ್ರೀ ಮಧ್ವಾಚಾರ್ಯರ ಹಾಗೂ ಶ್ರೀ ಪ್ರಾಣದೇವರ ರಾಜಬೀದಿ ಉತ್ಸವ, ಮಧ್ವಶಾಸ್ತ್ರಸಂಪನ್ನರಾದ ಶ್ರೀ ಕರ್ನೂಲು ಶ್ರೀನಿವಾಸಾಚಾರ್ ಮತ್ತು ಶ್ರೀ ಕಲ್ಲಾಪುರ ಪವಮಾನಾಚಾರ್ ಇವರಿಂದ ಈಗಿನ ಪೀಳಿಗೆಗೆ ಮಧ್ವಾಚಾರ್ಯರ ಸಿದ್ಧಾಂತ ಕುರಿತು ವಿಶೇಷ ಉಪನ್ಯಾಸ ಹಾಗೂ ಮಹಾಮಂಗಳಾರತಿ, ತೀರ್ಥಪ್ರಸಾದ ವಿನಿಯೋಗ ನಡೆಯಲಿವೆ.



ಹೆಚ್ಚಿನ ಮಾಹಿತಿಗೆ ಸಂಪರ್ಕಿಸಿ : 9900215389 / 080-41201274

## ಸರ್ಕಾರಕ್ಕೆ ಹಿನ್ನಡೆ: ಬೈಕ್ ಟ್ಯಾಕ್ಸಿಗೆ ಹೈಕೋರ್ಟ್ ಗ್ರೀನ್ ಸಿಗ್ನಲ್, ನಿಷೇಧ ತೆರವು

• ಉದಯವಾಹಿನಿ ಬೆಂಗಳೂರು

ರಾಜ್ಯದಲ್ಲಿ ಬೈಕ್‌ಗಳನ್ನು ಟ್ಯಾಕ್ಸಿಗಳನ್ನಾಗಿ ಬಳಸಲು ಹೈಕೋರ್ಟ್ ಅನುಮತಿ ನೀಡಿದ್ದು, ಈ ಮೂಲಕ ಬೈಕ್ ಟ್ಯಾಕ್ಸಿಗಳಿಗೆ ನಿಷೇಧ ಹೇರಿದ್ದ ರಾಜ್ಯ ಸರ್ಕಾರಕ್ಕೆ ಹಿನ್ನಡೆಯಾಗಿದೆ. ರಾಜ್ಯ ಸರ್ಕಾರ ಬೈಕ್ ಟ್ಯಾಕ್ಸಿ ನಿಷೇಧಿಸಿದ್ದನ್ನು ಹೈಕೋರ್ಟ್ ಏಕಸದಸ್ಯ ನ್ಯಾಯಪೀಠ ಎತ್ತಿಹಿಡಿದಿತ್ತು. ಆದರೆ ಇದೀಗ ವಿಭಾಗೀಯ ಪೀಠ ಆದೇಶ ರದ್ದುಗೊಳಿಸಿ, ಬೈಕ್ ಟ್ಯಾಕ್ಸಿಗೆ ಅನುಮತಿ ನೀಡಿದೆ.

ಒಲಾ, ಊಬರ್ ಮತ್ತಿತರ ಅಗ್ರಿಗೇಟರ್‌ಗಳು ಸಲ್ಲಿಸಿದ ಮೇಲ್ಮನವಿಗಳನ್ನು ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಗಳ ಪೀಠ ಮಾನ್ಯ ಮಾಡಿದೆ. ಇದೇ ವೇಳೆ ಸಾರಿಗೆ ವಾಹನಗಳಾಗಿ ಕಾರ್ಯನಿರ್ವಹಿಸಲು ಸಾಧ್ಯವಿಲ್ಲ ಎಂಬ ಕಾರಣಕ್ಕೆ ಬೈಕ್ ಟ್ಯಾಕ್ಸಿಗಳಿಗೆ ಅನುಮತಿಯನ್ನು ನಿರಾಕರಿಸಲಾಗುವುದಿಲ್ಲ ಎಂದು ಹೇಳಿದೆ. ಮುಖ್ಯ ನ್ಯಾಯಮೂರ್ತಿ ವಿಭು ಬಕ್ರು ಮತ್ತು ನ್ಯಾಯಮೂರ್ತಿ ಸಿ ಎಂ ಜೋಶಿ ಅವರ ವಿಭಾಗೀಯ ಪೀಠವು ಈ ಆದೇಶವನ್ನು ನೀಡಿದೆ.

ಬೈಕ್ ಮಾಲೀಕರು ಅಥವಾ ಅಗ್ರಿಗೇಟರ್ ಗಳು ಸಾರಿಗೆ ವಾಹನಗಳನ್ನಾಗಿ ಬಳಸಲು ಅನುಮತಿ ಕೋರಿ ಸರ್ಕಾರಕ್ಕೆ ಮನವಿ ಸಲ್ಲಿಸಬೇಕು. ಅರ್ಹ ಮನವಿಗಳನ್ನು ಸರ್ಕಾರ ಪುರಸ್ಕರಿಸಿ ಅನುಮತಿ ನೀಡಬೇಕು. ಮೋಟಾರ್ ವಾಹನ ಕಾಯ್ದೆಯ ಸೆಕ್ಷನ್ 74(2) ರ ಪ್ರಕಾರ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಅಗತ್ಯ ಷರತ್ತುಗಳನ್ನು ವಿಧಿಸಬಹುದು ಎಂದು ಪೀಠ ಆದೇಶ ನೀಡಿದೆ. ಇದರಿಂದ ಬೈಕ್ ಟ್ಯಾಕ್ಸಿ ಚಾಲಕರು ನಿಟ್ಟುಸಿರು ಬಿಟ್ಟಿದ್ದಾರೆ. ವಿಚಾರಣೆ ವೇಳೆ ವಾದ ಮಂಡಿಸಿದ ಬೈಕ್ ಟ್ಯಾಕ್ಸಿ ವೆಲ್ಫೇರ್ ಅಸೋಸಿಯೇಷನ್, ರಾಜ್ಯ ಸರ್ಕಾರದ ನಡೆಯು ಬೈಕ್ ಟ್ಯಾಕ್ಸಿ ಚಾಲಕರ ಸುಮಾರು 6 ಲಕ್ಷ ಕುಟುಂಬಗಳ ಬದುಕು ಸಂಕಷ್ಟಕ್ಕೆ ದೂಡುತ್ತದೆ.ಈ ಕುಟುಂಬಗಳು ಬದುಕು ಸಾಗಿಸಲು ತನ್ನ ದುಡಿಮೆ ಹಣದಿಂದ ಬೈಕ್ ಖರೀದಿಸಿ, ಸಾಲವನ್ನೂ ಪಡೆದಿದ್ದಾರೆ.


## ಮಲೆ ಮಹದೇಶ್ವರ ಬೆಟ್ಟದಲ್ಲಿ ಡ್ರೋನ್ ಕ್ಯಾಮರ ಕಣ್ಗಾವಲಿಗೆ ಈಶ್ವರ್ ಖಂಡ್ರೆ ಸೂಚನೆ!

• ಉದಯವಾಹಿನಿ ಬೆಂಗಳೂರು

ಮಲೆ ಮಹದೇಶ್ವರ ಬೆಟ್ಟದಲ್ಲಿ ಇತ್ತೀಚಿಗೆ ಚಿರತೆ ದಾಳಿಯಿಂದ ಯುವಕನೋರ್ವ ಮೃತಪಟ್ಟಿರುವ ಹಿನ್ನೆಲೆಯಲ್ಲಿ ಭಕ್ತರು ಕಾಲುದಾರಿಯಲ್ಲಿ ಮೆಟ್ಟಿಲೇರಿ ಬರುವ ಮಾರ್ಗದಲ್ಲಿ ಡ್ರೋನ್ ಕ್ಯಾಮರ ಅಳವಡಿಸಿ ಸತತ ನಿಗಾ ಇಡುವಂತೆ ಅರಣ್ಯ ಸಚಿವ ಈಶ್ವರ ಖಂಡ್ರೆ ಸೂಚಿಸಿದ್ದಾರೆ. ಕಾಲುದಾರಿ, ಮೆಟ್ಟಿಲು ಇರುವ ಪ್ರದೇಶದಲ್ಲಿ ಅರಣ್ಯ ಸಿಬ್ಬಂದಿ, ಹೋಂಗಾರ್ಡ್ಸ್ ಮತ್ತು ಸ್ಥಳೀಯ ಸಿಬ್ಬಂದಿಯ ತಂಡ ರಚಿಸಿ ಭಕ್ತರಿಗೆ ನೆರವಾಗುವ ಅಗತ್ಯವಿದ್ದು, ಇದಕ್ಕೆ ತಗಲುವ ವೆಚ್ಚವನ್ನು ಭರಿಸುವಂತೆ ಮಲೆ ಮಹದೇಶ್ವರಸ್ವಾಮಿ ಬೆಟ್ಟ ಅಭಿವೃದ್ಧಿ ಪ್ರಾಧಿಕಾರ ಮತ್ತು ಜಿಲ್ಲಾಡಳಿತಕ್ಕೆ ಪತ್ರ ಬರೆಯುವಂತೆಯೂ ಅಧಿಕಾರಿಗಳಿಗೆ ನಿರ್ದೇಶಿಸಿದ್ದಾರೆ. ಮಂಡ್ಯ, ಮೈಸೂರು, ರಾಮನಗರ, ಬೆಂಗಳೂರು ಸೇರಿದಂತೆ ಹಲವು ಜಿಲ್ಲೆಗಳಿಂದ ಭಕ್ತರು ಕಾವೇರಿ ನದಿ ದಾಟಿ, ಹನೂರು ತಾಲ್ಲೂಕಿನ ಬಸವನಕಣಕ್ಕೆ ಬಂದು ಅಲ್ಲಿಂದ ಕಾಡಿನಲ್ಲಿಯೇ ನಡೆದುಕೊಂಡು ಶಾಗ್ಯ, ಡಿಎಂ ಸಮುದ್ರ, ಎಲ್ಲೆಮಾಳ, ಮಲ್ಲಯ್ಯನಪುರ, ಕೌದಳ್ಳಿ, ವಡಕೆಹಳ್ಳ, ಕೋಣನಕೆರೆ, ತಾಳುಬೆಟ್ಟ ಮಾರ್ಗವಾಗಿ ಬೆಟ್ಟಕ್ಕೆ ಬರುತ್ತಾರೆ ಎನ್ನಲಾಗಿದೆ.

ವನ್ಯಜೀವಿಗಳ ಸಂಖ್ಯೆಯಲ್ಲಿ ಹೆಚ್ಚಳವಾಗಿದ್ದು, ಪಾದಯಾತ್ರೆ ಅಪಾಯಕಾರಿಯಾಗಿದೆ. ಹೀಗಾಗಿ ಭಕ್ತರ ಭಾವನೆಗೆ ಧಕ್ಕೆಯಾಗದಂತೆ ಅವರ ಮನವೊಲಿಸಲು ಸಚಿವರು ಸೂಚಿಸಿದರು. ರಾತ್ರಿಯ ವೇಳೆ ಕಾಡಿನ ಅಂಚಿನಲ್ಲಿ, ಕಾಡಿನೊಳಗಿರುವ ವಸತಿ ಪ್ರದೇಶದಲ್ಲಿ ಮಲಗುವುದೂ ಅಪಾಯಕಾರಿಯಾಗಿದೆ. ಕಳೆದ ಮಂಡ್ಯ ಜಿಲ್ಲೆಯ ಚೀರನಹಳ್ಳಿ ಗ್ರಾಮದ ಪ್ರವೀಣ್ ಎಂಬ ಯುವಕ ಚಿರತೆ ದಾಳಿಯಿಂದ ಮೃತಪಟ್ಟಿರುವುದು ಅತ್ಯಂತ ನೋವಿನ ಸಂಗತಿಯಾಗಿದೆ. ಹೀಗಾಗಿ ಬಸ್, ಕಾರುಗಳಲ್ಲಿ ತೆರಳಿ ಮಾದಪ್ಪನ ದರ್ಶನ ಪಡೆಯುವಂತೆ ಭಕ್ತರ ಮನವೊಲಿಸಲು ಜಿಲ್ಲಾಡಳಿತ, ಜಿಲ್ಲಾ ಪೊಲೀಸ್ ಮತ್ತು ಅರಣ್ಯ ಇಲಾಖೆಯ ಅಧಿಕಾರಿ, ಸಿಬ್ಬಂದಿ ಒಳಗೊಂಡ ತಂಡ ರಚಿಸಿ ಅಗತ್ಯ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಲು ಮುಖ್ಯ ಕಾರ್ಯದರ್ಶಿಯವರಿಗೆ ಟಿಪ್ಪಣಿ ಕಳಿಸಿರುವುದಾಗಿ ಈಶ್ವರ ಖಂಡ್ರೆ ತಿಳಿಸಿದರು.

## SC/ST/OBC ಮಠಗಳಿಗೆ 40 ಎಕರೆ ಭೂಮಿ: ಸಚಿವ ಸಂಪುಟ ಅನುಮೋದನೆ



ಉದಯವಾಹಿನಿ ಚಿತ್ರ

• ಉದಯವಾಹಿನಿ ಬೆಂಗಳೂರು

ಬೆಂಗಳೂರು ಉತ್ತರ ತಾಲ್ಲೂಕಿನ ದಾಸನಪುರ ಹೋಬಳಿಯ ರಾವುತ್ತನಹಳ್ಳಿ ಗ್ರಾಮದ ಕ್ರಮ ಸಂಖ್ಯೆ 57 ಮತ್ತು 58 ರಲ್ಲಿ ದಲಿತ ಮತ್ತು ಹಿಂದುಳಿದ ವರ್ಗಗಳ 22 ಮಠಗಳಿಗೆ 40 ಎಕರೆ ಭೂಮಿ ಹಂಚಿಕೆ ಮಾಡಲು ರಾಜ್ಯ ಸಚಿವ ಸಂಪುಟ ಅನುಮೋದನೆ ನೀಡಿದೆ. ಸಂಬಂಧಪಟ್ಟ ಧಾರ್ಮಿಕ ಸಂಸ್ಥೆಗಳು ಕೃಷಿ ಭೂಮಿಯ ಸಬ್-ರಿಜಿಸ್ಟ್ರಾರ್ ಮೌಲ್ಯದ ಶೇಕಡಾ 5ರಿಂದ 10ರಷ್ಟು ನಾಮಮಾತ್ರವನ್ನು ಸರ್ಕಾರಕ್ಕೆ ಪಾವತಿಸಬೇಕಾಗುತ್ತದೆ. ಡಿಸೆಂಬರ್ 31, 2027 ರವರೆಗೆ ಹೊರಡಿಸಲಾದ ಎಲ್ಲಾ ಸಂಬಂಧಿತ ಅಧಿಸೂಚನೆಗಳಲ್ಲಿ ರಾಜ್ಯ ನಾಗರಿಕ ಸೇವೆಗಳಲ್ಲಿನ ಖಾಲಿ ಹುದ್ದೆಗಳಿಗೆ ಎಲ್ಲಾ ವರ್ಗಗಳಿಗೆ 5 ವರ್ಷಗಳ ವಯೋಮಿತಿಯನ್ನು ಸಡಿಲಿಸಲು ಸಂಪುಟವು ಅನುಮೋದನೆ ನೀಡಿದೆ.

## ಜ.27ಕ್ಕೆ ಬ್ಯಾಂಕ್ ಸಿಬ್ಬಂದಿ ಪ್ರತಿಭಟನೆ

• ಉದಯವಾಹಿನಿ ಬೆಂಗಳೂರು

ಬ್ಯಾಂಕಿಂಗ್ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಗೆ ತಿಂಗಳ ಎಲ್ಲಾ ಶನಿವಾರ ರಜೆ ನೀಡುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಇದೇ 27ರಂದು ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನದಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಯುನೈಟೆಡ್ ಫೋರಂ ಆಫ್ ಬ್ಯಾಂಕ್ ಯೂನಿಯನ್ಸ್ ತಿಳಿಸಿದೆ. ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಯೂನಿಯನ್ಸ್‌ನ ಪ್ರಧಾನ ಕಾರ್ಯದರ್ಶಿ ಗಿರಿರಾಜ್ ಕೆ.ಎನ್.. ಷೇರುಪೇಟೆ, ವಿದೇಶಿ ವಿನಿಮಯದ ವ್ಯವಹಾರಗಳು ಸೋಮವಾರದಿಂದ ಶುಕ್ರವಾರದವರೆಗೆ ಮಾತ್ರ ಕಾರ್ಯನಿರ್ವಹಿಸುತ್ತಿವೆ. ಆದ್ದರಿಂದ ಬ್ಯಾಂಕ್‌ಗಳಲ್ಲಿ ಕೆಲಸ ಮಾಡುವ ಸಿಬ್ಬಂದಿಗೆ ತಿಂಗಳ ಎಲ್ಲಾ ಶನಿವಾರವೂ ರಜೆ ನೀಡಬೇಕು. ಬಹುತೇಕ ಎಲ್ಲಾ ಬ್ಯಾಂಕ್‌ಗಳಲ್ಲಿ ಆನ್‌ಲೈನ್ ಸೇವೆ ಲಭ್ಯ ಇರುವುದರಿಂದ ಗ್ರಾಹಕರಿಗೆ ಯಾವುದೇ ರೀತಿಯ ತೊಂದರೆ ಆಗುವುದಿಲ್ಲ ಎಂದು ಮಾಹಿತಿ ನೀಡಿದರು.

# ಹೆಬ್ಬಾಳ-ವಿಮಾನ ನಿಲ್ದಾಣ ಮೆಟ್ರೊಗೆ ಬೇಕು ವೇಗ

### ವಿಮಾನ ನಿಲ್ದಾಣಕ್ಕೆ ಸಂಪರ್ಕ ಕಲ್ಪಿಸುವ ಮಾರ್ಗದಲ್ಲಿ ಬಿಎಂಆರ್‌ಸಿಎಲ್ ಪ್ರಕಾರ 2027ರ ಜೂನ್ ಒಳಗೆ ಮೆಟ್ರೊ ಸಂಚಾರ ಆರಂಭ

• ಉದಯವಾಹಿನಿ ಬೆಂಗಳೂರು

ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಸಂಪರ್ಕ ಕಲ್ಪಿಸುವ ಮಾರ್ಗದಲ್ಲಿ ಬಿಎಂಆರ್‌ಸಿಎಲ್ ಪ್ರಕಾರ 2027ರ ಜೂನ್ ಒಳಗೆ ಮೆಟ್ರೊ ಸಂಚಾರ ಆರಂಭವಾಗಬೇಕು. ಆದರೆ, ಹೆಬ್ಬಾಳದಿಂದ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದವರೆಗೆ ನಡೆಯುತ್ತಿರುವ ಕಾಮಗಾರಿಯ ವೇಗ ನೋಡಿದರೆ ಒಂದೂವರೆ ವರ್ಷದೊಳಗೆ ಮುಗಿಯುವ ಲಕ್ಷಣ ಕಾಣುತ್ತಿಲ್ಲ.ಕೇಂದ್ರ ರೇಷ್ಮೆ ಮಂಡಳಿಯಿಂದ (ಸೆಂಟ್ರಲ್ ಸಿಲ್ಕ್ ಬೋರ್ಡ್) ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದವರೆಗಿನ 58 ಕಿ.ಮೀ. ಉದ್ದದ ಈ ಮಾರ್ಗದ ಕಾಮಗಾರಿಯು ಎರಡು ಹಂತದಲ್ಲಿ 2024ರ ಒಳಗೆ ಪೂರ್ಣಗೊಳ್ಳಬೇಕಿತ್ತು. ಕೋವಿಡ್ ನಿಂದಾಗಿ ತಡವಾಗಿ ಕಾಮಗಾರಿ ಆರಂಭವಾಗಿದ್ದರಿಂದ 2026ರ ಡಿಸೆಂಬರ್‌ಗೆ ಗಡುವು ವಿಸ್ತರಿಸಲಾಗಿತ್ತು. ಆದರೆ, ಈ ಗಡುವಿನ ಒಳಗೆ ಕಾಮಗಾರಿ ಮುಗಿಯುವ ಸಾಧ್ಯತೆ ಇಲ್ಲ.

ಗಡುವಿನ ಒಳಗೆ ಸಿಲ್ಕ್ ಬೋರ್ಡ್ ನಿಂದ ಕೆ.ಆರ್. ಪುರದವರೆಗೆ ಮಾತ್ರ ಸಂಚಾರ ಆರಂಭಿಸುವ ಗುರಿಯನ್ನು ಬಿಎಂಆರ್ ಸಿಎಲ್ ಸದ್ಯಕ್ಕೆ ಇಟ್ಟುಕೊಂಡಿದೆ. ಉಳಿದ ಕಾಮಗಾರಿ ಮತ್ತಷ್ಟು ತಡವಾಗುವ ಸಾಧ್ಯತೆ ಇದೆ. ಕೆ.ಆರ್.ಪುರದಿಂದ ಹೆಬ್ಬಾಳದವರೆಗಿನ ಕಾಮಗಾರಿಗೆ ಹೋಲಿಸಿದರೆ ಹೆಬ್ಬಾಳದಿಂದ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದವರೆಗಿನ ಕಾಮಗಾರಿಯು ಸ್ವಲ್ಪ ವೇಗವಾಗಿ ನಡೆಯುತ್ತಿದೆ. ನಿಲ್ದಾಣಗಳ ಸ್ಥಳಗಳನ್ನು ಹೊರತುಪಡಿಸಿ ಉಳಿದೆಡೆ ಬಹುತೇಕ ಪಿಲ್ಲರ್‌ಗಳ ಕಾಮಗಾರಿ ಮುಗಿದಿದೆ. ಸಿಮೆಂಟಿನ ತೊಲೆಗಳನ್ನು (ಗರ್ಡರ್) ಅಳವಡಿಸಲಾಗಿದೆ. ಕೊಡಿಗೆಹಳ್ಳಿ, ಜಕ್ಕೂರು, ಯಲಹಂಕ (ಕೋಗಿಲು ಜಂಕ್ಷನ್), ಬಾಗಲೂರು ಕ್ರಾಸ್ ಹೀಗೆ ಕೆಲವು ಕಡೆಗಳಲ್ಲಿ ನಡುನಡುವೆ ಪಿಲ್ಲರ್ ನಿರ್ಮಾಣ ಹಂತದಲ್ಲೇ ಇದೆ. ಹೊರ ವರ್ತುಲ ರಸ್ತೆಯಲ್ಲಿ ಹೆಚ್ಚು ಮೇಲ್ಸೇತುವೆ ರಸ್ತೆಗಳಿರುವುದರಿಂದ ಕಾಮಗಾರಿ ನಿಧಾನವಾಗಿದೆ. ಮೇಲ್ಸೇತುವೆಗಳನ್ನು ತಪ್ಪಿಸಿಕೊಂಡು ಗರ್ಡರ್ ಅಳವಡಿಸಬೇಕು. ಇಂಥ ಸಮಸ್ಯೆ ಕ್ರೇನ್ ಹೋಗದ ಜಾಗಗಳಲ್ಲಿ ಬೇರೆ. ವ್ಯವಸ್ಥೆಗಳನ್ನು ಮಾಡಬೇಕು. ಪ್ರಮುಖ ಜಂಕ್ಷನ್‌ಗಳಲ್ಲಿ ಕಾಂಪೋಸ್ಟ್ ಗರ್ಡರ್, ವೆಬ್ ಗರ್ಡರಗಳನ್ನು ಹಾಕಲಾಗುತ್ತಿದೆ. ಇದರಿಂದ ನಿಧಾನವಾಗಿದೆ.

ಆದರೆ, ಹೆಬ್ಬಾಳದಿಂದ ವಿಮಾನ ನಿಲ್ದಾಣ ಕಡೆಗೆ ಇಂಥ ಸಮಸ್ಯೆಗಳು ಇಲ್ಲ. ಬಹುತೇಕ ರಸ್ತೆಯ ಪಕ್ಕದಲ್ಲಿ ಸಮಾನಾಂತರವಾಗಿ ಸಾಗುತ್ತಿರುವುದರಿಂದ ಕಾಮಗಾರಿ ಸರಾಗವಾಗಿ ನಡೆಯುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ನಮ್ಮ ಮೆಟ್ರೊದವರು ಎರಡು ಮೂರು ವರ್ಷಗಳಿಂದ ಬೇಗ ಆಗುತ್ತದೆ ಎಂದು ಕಥೆ ಹೇಳುತ್ತಿರುವುದು ಬಿಟ್ಟರೆ ಕಾಮಗಾರಿ ವೇಗವಾಗಿ ನಡೆಯುತ್ತಿಲ್ಲ. ಇಲ್ಲಿವರೆಗೆ ಕಾಮಗಾರಿ ಸಾಗಿ ಬಂದಿರುವುದನ್ನು ಹಿಂತಿರುಗಿ ನೋಡಿದರೆ ಇನ್ನು ಒಂದೂವರೆ ವರ್ಷದಲ್ಲಿ ಪೂರ್ಣಗೊಳ್ಳುವುದು ಅನುಮಾನ' ಎಂದು ಕೋಗಿಲು ಕ್ರಾಸ್‌ನ ಅನಿಲ್ ತಿಳಿಸಿದರು.



ಉದಯವಾಹಿನಿ ಚಿತ್ರ

**ಕೋವಿಡ್ ನಿಂದಾಗಿ ತಡವಾಗಿ ಕಾಮಗಾರಿ ಆರಂಭ**

> ಕಾಮಗಾರಿ ವೇಗವಾಗಿ ಪೂರ್ಣಗೊಳಿಸಿ ಮೆಟ್ರೊ ಆರಂಭಗೊಂಡರೆ ವಾಹನ ದಟ್ಟಣೆಯಲ್ಲಿ ಕಾಲ ಕಳೆದು ಹೋಗುವುದು ತಪ್ಪಲಿದೆ. ಸಮಯ ಉಳಿಯಲಿದೆ. ಆದಷ್ಟು ಬೇಗ ಕಾಮಗಾರಿ ಮುಗಿಸಲಿ
>
> ಇಸ್ಮಾಯಿಲ್ ಥಣಿಸಂದ್ರ, ನಿವಾಸಿ

**ನಿಗದಿತ ಸಮಯದಲ್ಲಿ ಪೂರ್ಣ**

ಸಿವಿಲ್ ಕಾಮಗಾರಿ ಪೂರ್ಣಗೊಂಡ ಬಳಿಕ ಸೀಮೆನ್ಸ್ ನೇತೃತ್ವದ ಕಂಪನಿಗಳ ಸಮೂಹವು ವಿದ್ಯುದ್ದೀಕರಣ ತಂತ್ರಜ್ಞಾನವನ್ನು ಅಳವಡಿಸಲಿದೆ. ಸೂಪರ್‌ವೈಸರಿ ಕಂಟ್ರೋಲ್ ಆ್ಯಂಡ್ ಡೇಟಾ ಅಕ್ವಿಸಿಷನ್ (ಎಸ್‌ಸಿಎಡಿಎ) ವ್ಯವಸ್ಥೆಗಳನ್ನು ಒಳಗೊಂಡ ರೈಲು ವಿದ್ಯುದ್ದೀಕರಣ ತಂತ್ರಜ್ಞಾನಗಳ ಜೊತೆಗೆ ಡಿಜಿಟಲ್ ಪರಿಹಾರಗಳನ್ನು ವಿನ್ಯಾಸಗೊಳಿಸಲಿದೆ. ಎಲ್ಲಾ ಕಾಮಗಾರಿಗಳು ಒಂದೂವರೆ ವರ್ಷದ ಒಳಗೆ ಮುಗಿಯಲಿವೆ ಎಂದು ಬಿಎಂಆರ್‌ಸಿಎಲ್ ಅಧಿಕಾರಿಗಳು ತಿಳಿಸಿದ್ದಾರೆ.

**ಬಿಐಎಎಲ್‌ನಿಂದ 2 ಮೆಟ್ರೊ ನಿಲ್ದಾಣ!:** ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಒಳಗಿನ ನಿಲ್ದಾಣ ಮತ್ತು ವಿಮಾನ ನಗರದಲ್ಲಿರುವ ನಿಲ್ದಾಣವನ್ನು ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಲಿಮಿಟೆಡ್ (ಬಿಐಎಎಲ್) ನಿರ್ಮಿಸುತ್ತಿದೆ. ಅದರ ನಿರ್ಮಾಣ ವೆಚ್ಚ ರೂ.800 ಕೋಟಿಯನ್ನು ಬಿಐಎಎಲ್ ಭರಿಸುತ್ತಿದೆ ಎಂದು ಬಿಎಂಆರ್‌ಸಿಎಲ್ ತಿಳಿಸಿದೆ. ವಿಮಾನ ನಿಲ್ದಾಣದಿಂದ ಒಂದು ಕಿಲೋಮೀಟರ್ ದೂರದಲ್ಲಿರುವ ವಿಮಾನ ನಗರದವರೆಗೆ ನೆಲಮಟ್ಟದಲ್ಲಿ ಹಳಿ ಹಾಕಲಾಗಿದೆ. ಎರಡೂ ನಿಲ್ದಾಣಗಳು ನಿರ್ಮಾಣ ಹಂತದಲ್ಲಿವೆ.

## ಲೋಕಕಲ್ಯಾಣಾರ್ಥಕ್ಕಾಗಿ ಶತಚಂಡಿಕಾಯಾಗ : ಶ್ರೀ ಆದಿಶಕ್ತಿ ದೇವಾಲಯ

• ಉದಯವಾಹಿನಿ ಬೆಂಗಳೂರು

ಜಿಬಿಎ ಕೇಂದ್ರ ಅವರಣದಲ್ಲಿರುವ ಏಳುಸುತ್ತಿನ ಕೋಟೆ ಸಪ್ತಮಾತೃಕಾ ದೇವಸ್ಥಾನ ಉದ್ಘಾಟನೆ ಪ್ರಯುಕ್ತ ಲೋಕಕಲ್ಯಾಣಾರ್ಥಕ್ಕಾಗಿ ಶತಚಂಡಿ ಕಯಾಗ ಕಾರ್ಯಕ್ರಮ.

ತುಮಕೂರು ನೊಣವಿನಕೆರೆ ಶ್ರೀ ಕಾಡಸಿದ್ದೇಶ್ವರ ಟ್ರಸ್ಟ್ ದೇವಸ್ಥಾನದ ಆನೆಯನ್ನು ದೇವಸ್ಥಾನ ಅವರಣಕ್ಕೆ ತರಲಾಗಿತ್ತು. ಭಾನು ಪ್ರಕಾಶ್ ಶರ್ಮಾ ರವರ ನೇತೃತ್ವದಲ್ಲಿ 40ಕ್ಕೂ ಹೆಚ್ಚು ಅರ್ಚಕರು, ಅಗಮ ಪಂಡಿತರಿಂದ ಯಾಗ ನೇರವೇರಿತು. ಸಾವಿರಾರು ಜನರು ಪಾಲ್ಗೊಂಡಿದ್ದರು. ಜಿಬಿಎ-ಪಾಲಿಕೆಗಳ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಎ.ಅಮೃತ್ ರಾಜ್ ರವರು, ಸಂಘದ ಪದಾಧಿಕಾರಿಗಳು ಯಾಗದಲ್ಲಿ ಪಾಲ್ಗೊಂಡಿದ್ದರು.

ಇದೇ ಸಂದರ್ಭದಲ್ಲಿ ಎ.ಅಮೃತ್ ರಾಜ್ ರವರು ಮಾತನಾಡಿ ಜೀವನದಲ್ಲಿ ಯಶ್ವಸಿಯಾಗಲು ದೇವರ ಕೃಪೆ ಇರಬೇಕು ಇದ್ದರೆ ಮಾತ್ರ ಜೀವನದಲ್ಲಿ ಸಾಧನೆ ಮಾತ್ರ.



ಉದಯವಾಹಿನಿ ಚಿತ್ರ

ಶ್ರೀ ಆದಿಶಕ್ತಿ ದೇವಾಲಯ ಜರ್ಣೋದ್ಧಾರ ನವೀಕರಣ ಉದ್ಘಾಟನೆ ಸಮಾರಂಭದ ಪ್ರಯುಕ್ತ ಲೋಕಕಲ್ಯಾಣಾರ್ಥಕ್ಕಾಗಿ ಶತಚಂಡಿಕಾಯಾಗ ಮಾಡಿಸಲಾಗುತ್ತಿದೆ.

ಸರಿ ಸುಮಾರು 5 ಸಾವಿರ ಭಕ್ತರಿಗೆ ಹೋಳಿಗೆ ಊಟ ಮಾಡಿಸಲಾಗಿದೆ. ನಾಡಿ ಜನರಿಗೆ ಸುಖ, ಶಾಂತಿ, ನೆಮ್ಮದ್ದಿಯನ್ನು ಜೀವನದಲ್ಲಿ ಲಭಿಸಲಿ ಎಂದು ಪೂಜಾ ಕಾರ್ಯ ಕೈಗೊಳ್ಳಲಾಗಿದೆ ಎಂದು ಹೇಳಿದರು.

ಮುಖ್ಯ ಆಯುಕ್ತರಾದ ಮಹೇಶ್ವರರಾವ್ ಮತ್ತು ಅಧಿಕಾರಿ, ನೌಕರರು, ಸಾರ್ವಜನಿಕರು ಭಾಗವಹಿಸಿದ್ದರು.

## ಮಕ್ಕಳ ಭಿಕ್ಷಾಟನೆ: ನೋಡಲ್ ಅಧಿಕಾರಿ ನೇಮಕಕ್ಕೆ ಹೈಕೋರ್ಟ್ ನಿರ್ದೇಶನ

• ಉದಯವಾಹಿನಿ ಬೆಂಗಳೂರು

ಮಕ್ಕಳ ಭಿಕ್ಷಾಟನೆ ತಡೆದು ಅವರ ಪುನರ್ವಸತಿಗೆ ಸಮಗ್ರ ಕ್ರಿಯಾ ಯೋಜನೆ ರೂಪಿಸಲು ಸಂಬಂಧಿಸಿದ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸುವ ನಿಟ್ಟಿನಲ್ಲಿ ನೋಡಲ್ ಅಧಿಕಾರಿಯೊಬ್ಬರನ್ನು ನೇಮಕ ಮಾಡಿ ಎಂದು ಹೈಕೋರ್ಟ್ ಹಾಗೂ ರಾಜ್ಯ ಸರ್ಕಾರಕ್ಕೆ ನಿರ್ದೇಶಿಸಿದೆ.

ಭಿಕ್ಷಾಟನೆಯಲ್ಲಿ ತೊಡಗಿರುವ ಮಕ್ಕಳನ್ನು ಗುರುತಿಸಿ. ಅವರನ್ನು ಸಮಾಜದ ಮುಖ್ಯವಾಹಿನಿಗೆ ತರಲು ಸರ್ಕಾರಕ್ಕೆ ನಿರ್ದೇಶಿಸಬೇಕು ಎಂದು ಕೋರಿ, ಲೆಟ್ಸ್ ಕಿಟ್ ಫೌಂಡೇಷನ್ ವ್ಯವಸ್ಥಾಪಕ ಟ್ರಸ್ಟಿ ಲಕ್ಷ್ಮಿ ಹೊಳ್ಳ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ನೇತೃತ್ವದ ವಿಭಾಗೀಯ ನ್ಯಾಯಪೀಠ ವಿಚಾರಣೆ ನಡೆಸಿತು.

ವಿಚಾರಣೆ ವೇಳೆ ಹೆಚ್ಚುವರಿ ಅಡ್ವಕೇಟ್ ಜನರಲ್ ಪ್ರತಿಮಾ ಹೊನ್ನಾಪುರ ಅವರು, ಭಿಕ್ಷುಕರ ಸೆಸ್ ಸಂಗ್ರಹಣೆಗೆ ಸಂಬಂಧಿಸಿದಂತೆ ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ಮುಖ್ಯ ಲೆಕ್ಕಾಧಿಕಾರಿಯವರ ಪ್ರಮಾಣ ಪತ್ರವನ್ನು ನ್ಯಾಯಪೀಠಕ್ಕೆ ಸಲ್ಲಿಸಿದರು.

'ಜಿಬಿಎ ವ್ಯಾಪ್ತಿಯಲ್ಲಿ 2024-25ರಲ್ಲಿ ?86.26 ಕೋಟಿ ಭಿಕ್ಷುಕರ ಸೆಸ್ ಸಂಗ್ರಹ ಮಾಡಲಾಗಿದೆ. ಅದರಲ್ಲಿ ?10.32 ಕೋಟಿ ಮೊತ್ತವನ್ನು ಕೇಂದ್ರ ಪರಿಹಾರ ಸಮಿತಿಗೆ ಪಾವತಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ ಈತನಕ ರೂ.73.12 ಕೋಟಿ ಸಂಗ್ರಹಿಸಲಾಗಿದೆ' ಎಂದರು. ಜಿಬಿಎ ವ್ಯಾಪ್ತಿಯಲ್ಲಿ 5 ಹೊಸ ಪಾಲಿಕೆಗಳಾಗಿದ್ದು, ಕಳೆದ ವರ್ಷದ ಬಾಕಿ ರೂ.75 ಕೋಟಿ ಹಾಗೂ ಈ ವರ್ಷದ ಪಾಲನ್ನು 2026ರ ಮಾರ್ಚ್ 31ರೊಳಗೆ ಕೇಂದ್ರ ಪರಿಹಾರ ಸಮಿತಿಗೆ ಪಾವತಿಸುವಂತೆ ಆಯಾ ಪಾಲಿಕೆಗಳ ಆಯುಕ್ತರಿಗೆ ನಿರ್ದೇಶಿಸಲಾಗಿದೆ ಎಂದು ವಿವರಿಸಿದರು.



ಉದಯವಾಹಿನಿ ಚಿತ್ರ

ಕಾನೂನು ಸೇವೆಗಳ ಪ್ರಾಧಿಕಾರದ ಪರ ಹೈಕೋರ್ಟ್ ವಕೀಲೆ ಮೈತ್ರೇಯಿ ಕೃಷ್ಣನ್, ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಿಂದ ಸಂಗ್ರಹಿಸಲಾದ ರೂ.40.88 ಕೋಟಿ ಸೆಸ್ ಅನ್ನು ಪೌರಾಡಳಿತ, ಪಂಚಾಯಿತಿಗಳಲ್ಲಿ ಸಂಗ್ರಹಿಸಲಾದ ಸೆಸ್ ಬಗ್ಗೆ ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ಮಾಹಿತಿ ಬರಬೇಕಿದೆ. ಪ್ರಾಧಿಕಾರ ನಡೆಸಿದ ಸಮೀಕ್ಷೆ ಅನುಸಾರ ಭಿಕ್ಷಾಟನೆಯಲ್ಲಿ ತೊಡಗಿದ್ದ 720 ಮಕ್ಕಳನ್ನು ಗುರುತಿಸಲಾಗಿದೆ. ಪುನರ್ವಸತಿಗೆ ಕೆಲವು ಶಿಫಾರಸುಗಳನ್ನು ಮಾಡಲಾಗಿದೆ ಎಂದು ನ್ಯಾಯಪೀಠದ ಗಮನಕ್ಕೆ ತಂದರು.

ವಾದ-ಪ್ರತಿವಾದ ಆಲಿಸಿದ ನ್ಯಾಯಪೀಠ, ಜಿಬಿಎ ಸೇರಿದಂತೆ ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳು ಮತ್ತು ಪಂಚಾಯಿತಿಗಳಲ್ಲಿ ಸಂಗ್ರಹಿಸಲಾಗಿರುವ ಒಟ್ಟು ಭಿಕ್ಷುಕರ ಸೆಸ್, ಅದರಲ್ಲಿ ಕೇಂದ್ರ ಪರಿಹಾರ ಸಮಿತಿಗೆ ಪಾವತಿಸಲಾದ ಮತ್ತು ಬಾಕಿ ಉಳಿದ ಮೊತ್ತದ ಬಗ್ಗೆ ವಸ್ತುಸ್ಥಿತಿ ವರದಿ ಸಲ್ಲಿಸಿ ಎಂದು ರಾಜ್ಯ ಸರ್ಕಾರ ಹಾಗೂ ಜಿಬಿಎಗೆ ನಿರ್ದೇಶನ ನೀಡಿತು.

ಮಕ್ಕಳ ಭಿಕ್ಷಾಟನೆ ನಿರ್ಮೂಲನೆ ಮತ್ತು ಅವರ ಪುನರ್ವಸತಿಗೆ 6 ವಾರಗಳಲ್ಲಿ ಸಮಗ್ರ ಕ್ರಿಯಾ ಯೋಜನೆ ರೂಪಿಸಬೇಕು. ಈ ನಿಟ್ಟಿನಲ್ಲಿ ಸಂಬಂಧಿಸಿದ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಲು ನೋಡಲ್ ಅಧಿಕಾರಿಯೊಬ್ಬರನ್ನು ನೇಮಕ ಮಾಡಬೇಕು ಎಂದು ಸರ್ಕಾರಕ್ಕೆ ತಾಕೀತು ಮಾಡಿ ವಿಚಾರಣೆಯನ್ನು ಏಪ್ರಿಲ್ 1ಕ್ಕೆ ಮುಂದೂಡಿತು. ಅರ್ಜಿದಾರರ ಪರ ಪದಾಂಕಿತ ಹಿರಿಯ ವಕೀಲ ಪುತ್ತಿಗೆ ರಮೇಶ್ ವಾದ ಮಂಡಿಸಿದರು.

## ಪೂರ್ವ ನಗರ ಪಾಲಿಕೆ: ಅನಧಿಕೃತ ಕಟ್ಟಡ ತೆರವು

• ಉದಯವಾಹಿನಿ ಬೆಂಗಳೂರು

ಪೂರ್ವ ನಗರ ಪಾಲಿಕೆಯ ವೈಟ್ ಫೀಲ್ಡ್ ಉಪವಿಭಾಗ ವ್ಯಾಪ್ತಿಯ ನಲ್ಲೂರಹಳ್ಳಿ, ವಿಕ್ಟೋರಿಯಾ ವ್ಯೂ ಬಡಾವಣೆಯಲ್ಲಿ ನಕ್ಷೆ ಮಂಜೂರಾತಿ ಪಡೆಯದೇ ಅನಧಿಕೃತವಾಗಿ ನಿರ್ಮಿಸಿದ್ದ ಕಟ್ಟಡವನ್ನು ತೆರವುಗೊಳಿಸಲಾಯಿತು ಎಂದು ಆಯುಕ್ತ ಡಿ.ಎಸ್.ರಮೇಶ್ ಅವರು ತಿಳಿಸಿದರು.

ನಕ್ಷೆ ಮಂಜೂರಾತಿ ಪಡೆಯದೇ ನಿಯಮಗಳನ್ನು ಉಲ್ಲಂಘಿಸಿ ನಿರ್ಮಿಸಲಾಗಿದ್ದ ಆರು ಮಹಡಿ ಕಟ್ಟಡದ ತೆರವು ಕಾರ್ಯಾಚರಣೆಯನ್ನು ಮಹದೇವಪುರ ವಲಯದ ಜಂಟಿ ಆಯುಕ್ತರಾದ ಕೆ. ದಾಕ್ಷಾಯಿಣಿ ಅವರ ನೇತೃತ್ವದಲ್ಲಿ ನಡೆಸಲಾಯಿತು.

ಶ್ರೀಕಾಂತ್ ರೆಡ್ಡಿ ಅವರಿಗೆ ಸೇರಿದ ನಿವೇಶನದಲ್ಲಿ ಆರು ಮಹಡಿಗಳ ಕಟ್ಟಡವನ್ನು ಅನಧಿಕೃತವಾಗಿ ನಿರ್ಮಿಸಲಾಗುತ್ತಿತ್ತು. ನಕ್ಷೆ ಮಂಜೂರಾತಿ ಪಡೆಯದೇ ನಿಯಮಾವಳಿಗಳನ್ನು ಉಲ್ಲಂಘಿಸಿ ಕಟ್ಟಡ ನಿರ್ಮಿಸಿರುವುದು ದೃಢಪಟ್ಟಿತ್ತು. ಮಾಲೀಕರಿಗೆ ನೋಟಿಸ್ ಜಾರಿಗೊಳಿಸಿದ ಬಳಿಕ ನೈಸರ್ಗಿಕ ನ್ಯಾಯದಡಿ ಸಾಕಷ್ಟು ಕಾಲಾವಕಾಶ ನೀಡಿದರೂ ತೆರವುಗೊಳಿಸಲಿಲ್ಲ. ಹೀಗಾಗಿ ಪಾಲಿಕೆ ವತಿಯಿಂದ ತೆರವು ಕಾರ್ಯಾಚರಣೆ ನಡೆಯಿತು ಎಂದು ಮಾಹಿತಿ ನೀಡಿದರು.

ಕಟ್ಟಡ ನಿರ್ಮಾಣಕ್ಕೆ ಮೊದಲು ಅಗತ್ಯ ಅನುಮೋದನೆಗಳನ್ನು ಪಡೆದು, ಅನುಮೋದಿತ ನಕ್ಷೆ ಮತ್ತು ನಿಯಮಾವಳಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ನಾಗರಿಕರು, ಕಟ್ಟಡ ಮಾಲೀಕರು ಹಾಗೂ ಬಿಲ್ಡರ್‌ಗಳಲ್ಲಿ ಮನವಿ ಮಾಡಲಾಗಿದೆ. ನಿಯಮ ಉಲ್ಲಂಘನೆ ಕಂಡುಬಂದಲ್ಲಿ ಕಾನೂನು ಕ್ರಮ ಅನಿವಾರ್ಯವಾಗುತ್ತದೆ ಎಂದು ಎಚ್ಚರಿಕೆ ನೀಡಿದರು.



ಉದಯವಾಹಿನಿ ಚಿತ್ರ

> ಅಕ್ರಮ ಕಟ್ಟಡಗಳು ಸಾರ್ವಜನಿಕ ಸುರಕ್ಷತೆ ಮತ್ತು ಯೋಜಿತ ನಗರ ಅಭಿವೃದ್ಧಿಗೆ ಗಂಭೀರ ಅಪಾಯವನ್ನುಂಟು ಮಾಡುತ್ತವೆ. ಈ ಹಿನ್ನೆಲೆಯಲ್ಲಿ ಬೆಂಗಳೂರು ಪೂರ್ವ ನಗರ ಪಾಲಿಕೆ, ಕಟ್ಟಡ ನಿಯಮ ಉಲ್ಲಂಘನೆಗಳ ವಿರುದ್ಧ ಶೂನ್ಯ ಸಹಿಷ್ಣುತೆ ನೀತಿ ಅನುಸರಿಸುತ್ತಿದ್ದು, ಮುಂದೆಯೂ ಇಂತಹ ಅಕ್ರಮ ನಿರ್ಮಾಣಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಮುಂದುವರಿಯಲಿದೆ .
>
> -ಆಯುಕ್ತರು

## ಕೈಗಾರಿಕೆಗಳ ನಿರೀಕ್ಷೆಗೆ ತಕ್ಕಂತೆ ಸಜ್ಜಾಗಿ: ಡಾ.ಆರ್.ಕೆ. ಶ್ರೀನಿವಾಸ್



ಉದಯವಾಹಿನಿ ಚಿತ್ರ

• ಉದಯವಾಹಿನಿ ಬೆಂಗಳೂರು

ಕೈಗಾರಿಕೆಗಳ ನಿರೀಕ್ಷೆಗೆ ವಿದ್ಯಾರ್ಥಿಗಳು ತಕ್ಕಂತೆ ಸಿದ್ದಗೊಳ್ಳುವುದರ ಜತೆಗೆ ನವ ಭಾರತ ನಿರ್ಮಾಣಕ್ಕೆ ಶಕ್ತಿಯಾಗಿ ನಿಲ್ಲಬೇಕು ಎಂದು ಕ್ವಾಲ್ಕಾಮ್ ಇಂಡಿಯಾದ ಇಂಜಿನಿಯರ್ ಡಾ.ಆರ್.ಕೆ. ಶ್ರೀನಿವಾಸ್ ತಿಳಿಸಿದರು.

ಬಿಎನ್‌ಎಂಐಟಿ ಕಾಲೇಜು, ಸಹಯೋಗದೊಂದಿಗೆ ಕಂಪ್ಯೂಟಿಂಗ್, ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್‌ನಲ್ಲಿ ಬುದ್ಧಿವಂತಿಕೆ ಮತ್ತು ನವೋದ್ಯಮ ತಂತ್ರಜ್ಞಾನ ಕುರಿತ ವಿಚಾರಸಂಕಿರಣದಲ್ಲಿ ಅವರು ಮಾತನಾಡಿದರು. ನೀವು ಬರೆಯುವ ಕೋಡ್, ಸೃಷ್ಟಿಸುವ ಪ್ರೋಗ್ರಾಂ. ಮಂಡಿಸುವ ಪ್ರಬಂಧಗಳಿಂದ ಭಾರತವು ಉನ್ನತಿ ಕಾಣಲು ಸಾಧ್ಯವಿದೆ. ನಿಮ್ಮಿಂದ ನವ ಭಾರತದ ಕನಸು ನನಸು ಆಗಲಿದೆ' ಎಂದರು.

ಎಡ್ಜ್ ಎಐ ಬಾಹ್ಯಾಕಾಶದಲ್ಲಿ ಹೊಸ ಸಂಚಲನ ಮೂಡಿಸಲಿದೆ. ಎಐ ಎಲ್ಲಿದೆಯೋ ಹಾಗೂ ಅಲ್ಲಿ ಬುದ್ಧಿಮತ್ತೆ ಇರಲಿದೆ. ಸ್ಮಾರ್ಟ್ ಅಪ್ ಮೇಲೆ ಗಮನ ನೀಡಿ. ಕ್ವಾಲ್ಕಾಮ್ ಒಂದೇ 2025ರಲ್ಲಿ ಎರಡು ಸಾವಿರಕ್ಕೂ ಹೆಚ್ಚು ಹಕ್ಕು ಸ್ವಾಮ್ಯತೆಯನ್ನು ಪಡೆದಿದೆ. ಇದು ಎಲ್ಲಾ ಡೊಮೈನ್‌ನಲ್ಲಿಯೂ ಇದೆ. ಇದೇ ರೀತಿ ಹೆಚ್ಚಿನ ಹಕ್ಕು ಸ್ವಾಮ್ಯತೆಯನ್ನು ಪಡೆಯಬೇಕು ಎಂದರು. ಬಿಎನ್‌ಎಂಐಟಿ ಕಾಲೇಜಿನ ಡೀನ್ ಪ್ರೊ. ಈಶ್ವರ್ ಎನ್.ಮಾನೆ ಮಾತನಾಡಿ, ವಿದ್ಯಾರ್ಥಿಗಳು ಹೊಸ ಆಲೋಚನೆಗಳ ಬಗ್ಗೆ ಯೋಚಿಸಬೇಕು. ವಿದ್ಯಾರ್ಥಿಗಳು ಎಐ ಅನ್ನು ಒಳ್ಳೆಯ ಕೆಲಸಗಳಿಗೆ ಬಳಕೆ ಮಾಡಿಕೊಳ್ಳಬೇಕು.

ಲಭ್ಯವಿರುವ ತಂತ್ರಜ್ಞಾನವನ್ನು ಸದುಪಯೋಗ ಪಡಿಸಿಕೊಳ್ಳಬೇಕು. ವಿದ್ಯಾರ್ಥಿಗಳು ಸಂಶೋಧನೆಯ ಕಡೆ ಹೆಚ್ಚಿನ ಗಮನ ನೀಡಬೇಕು ಎಂದರು.

## ಇಡಿಯಿಂದ ರೂ.20 ಕೋಟಿ ಮೌಲ್ಯದ 10 ಆಸ್ತಿ ಮುಟ್ಟುಗೋಲು!

• ಉದಯವಾಹಿನಿ ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಇತರರು ಭಾಗಿಯಾಗಿರುವ ಮುಡಾ ಹಗರಣದಲ್ಲಿ ಜಾರಿ ನಿರ್ದೇಶನಾಲಯದ (ಇ.ಡಿ) ಬೆಂಗಳೂರು ವಲಯ ಕಚೇರಿ ಹಣ ಅಕ್ರಮ ವರ್ಗಾವಣೆ ತಡೆ ಕಾಯ್ದೆ (ಪಿಎಂಎಲ್‌ಎ) ಅಡಿಯಲ್ಲಿ 10 ಸ್ಥಿರಾಸ್ತಿಗಳನ್ನು ತಾತ್ಕಾಲಿಕವಾಗಿ ಮುಟ್ಟುಗೋಲು ಹಾಕಿಕೊಂಡಿದೆ.

ಈ ಆಸ್ತಿಗಳಲ್ಲಿ ಮುಡಾದಿಂದ ಅಕ್ರಮವಾಗಿ ಹಂಚಿಕೆಯಾದ ಆರು ನಿವೇಶನಗಳು, ಮೂರು ಸ್ಥಿರಾಸ್ತಿಗಳು ಮತ್ತು 20.85 ಕೋಟಿ ರೂ. ಮಾರುಕಟ್ಟೆ ಮೌಲ್ಯದ ಒಂದು ವಾಣಿಜ್ಯ ಕಟ್ಟಡ ಸೇರಿವೆ. ಮೈಸೂರಿನ ಲೋಕಾಯುಕ್ತ ಪೊಲೀಸರು ದಾಖಲಿಸಿದ ಎಫ್‌ಐಆರ್ ಆಧಾರದ ಮೇಲೆ, ಮುಡಾ ನಿವೇಶನಗಳ ಹಂಚಿಕೆಯಲ್ಲಿ ನಡೆದಿದೆ ಎನ್ನಲಾದ ಹಗರಣದ ಬಗ್ಗೆ ತನಿಖೆ ಆರಂಭಿಸಿದೆ ಎಂದು ಜಾರಿ ನಿರ್ದೇಶನಾಲಯದ ಹೇಳಿಕೆ ತಿಳಿಸಿದೆ. 2024ರ ಅಕ್ಟೋಬರ್ 18 ಮತ್ತು 28 ರಂದು ಇಡಿ ನಡೆಸಿದ ದಾಳಿಯಲ್ಲಿ ಸರ್ಕಾರಿ ಆದೇಶಗಳು ಮತ್ತು ಇತರ ಹಲವಾರು ನಿಯಮಗಳನ್ನು ಉಲ್ಲಂಘಿಸಿ ನಿವೇಶನಗಳನ್ನು ಹಂಚಿಕೆ ಮಾಡಿರುವುದು ಪತ್ತೆಯಾಗಿದೆ.

ಈ ಶೋಧದಲ್ಲಿ ಮುಡಾ ಅಧಿಕಾರಿಗಳು ಮತ್ತು ರಿಯಲ್ ಎಸ್ಟೇಟ್ ಉದ್ಯಮಿಗಳ ನಡುವೆ ಆಳವಾದ ಸಂಬಂಧವಿರುವುದು ಪತ್ತೆಯಾಗಿದೆ. ನಿವೇಶನ ಹಂಚಿಕೆಗೆ ಪರಿಹಾರವಾಗಿ ಮತ್ತು ಲೇಔಟ್‌ಗಳ ಅನುಮೋದನೆಗೆ ನಗದು ಪಾವತಿ ಮಾಡಿರುವುದು ಪತ್ತೆಯಾಗಿದೆ ಎಂದು ಸಂಸ್ಥೆ ತಿಳಿಸಿದೆ. ಈ ಹಿಂದೆ, ತನಿಖಾ ಸಂಸ್ಥೆಯು ಅಕ್ರಮವಾಗಿ ಹಂಚಿಕೆ ಮಾಡಲಾದ ಮುಡಾದ 283 ನಿವೇಶನಗಳು, ಮೂರು ವೈಯಕ್ತಿಕ ಆಸ್ತಿಗಳನ್ನು ತಾತ್ಕಾಲಿಕವಾಗಿ ಮುಟ್ಟುಗೋಲು ಹಾಕಿಕೊಂಡಿತ್ತು.

ಮುಡಾ ನಿವೇಶನಗಳನ್ನು ದೊಡ್ಡ ಪ್ರಮಾಣದಲ್ಲಿ ಅಕ್ರಮವಾಗಿ ಹಂಚಿಕೆ ಮಾಡಿದ್ದ ಮಾಜಿ ಮುಡಾ ಆಯುಕ್ತ ಜಿಟಿ ದಿನೇಶ್ ಕುಮಾರ್ ಅವರನ್ನು ಕಳೆದ ವರ್ಷ ಸೆಪ್ಟೆಂಬರ್ 16 ರಂದು ಪಿಎಂಎಲ್‌ಎ ನಿಬಂಧನೆಗಳ ಅಡಿಯಲ್ಲಿ ಬಂಧಿಸಲಾಯಿತು. ತನಿಖೆಯಲ್ಲಿ ಅಪರಾಧದಿಂದ ಬಂದ ಆದಾಯವನ್ನು ಅವರ ಸಂಬಂಧಿಕರು/ಸಹವರ್ತಿಗಳ ಹೆಸರಿನಲ್ಲಿ ಸ್ಥಿರಾಸ್ತಿಗಳನ್ನು ಖರೀದಿಸಲು ಮತ್ತು ವಾಣಿಜ್ಯ ಕಟ್ಟಡ ನಿರ್ಮಾಣಕ್ಕೆ ಬಳಸಲಾಗಿದೆ.

## 6 ರೂ. ಬದಲು 60 ಸಾವಿರ ರೂ. ಪಾವತಿಸಿದ ಪ್ರಯಾಣಿಕ!

### ಹಣ ವಾಪಸ್ ಪಡೆಯಲು ಡಿಪೋ ಮ್ಯಾನೇಜರ್ ಸಂಪರ್ಕಿಸಲು ಸೂಚನೆ

• ಉದಯವಾಹಿನಿ ಬೆಂಗಳೂರು

ಇತ್ತೀಚಿನ ದಿನಗಳಲ್ಲಿ ಸಣ್ಣ ವಸ್ತು ಖರೀದಿ ಮಾಡಿದರೂ ಸಹ ಆನ್‌ಲೈನ್ ಪಾವತಿಗಳನ್ನು ಬಳಕೆ ಮಾಡುವುದು ಮಾಮೂಲಿಯಾಗಿದೆ. ಅದರಂತೆ, ಯುಪಿಐಗೆ ಎಷ್ಟು ಒಗ್ಗಿಕೊಂಡಿದ್ದೇವೆ ಎಂದರೇ, ನಗದು ಇಟ್ಟುಕೊಳ್ಳುವ ವ್ಯವಧಾನವನ್ನೇ ಮರೆತು ಬಿಟ್ಟಿದ್ದೇವೆ. ಆದರೆ, ಇದು ಕೆಲವೊಮ್ಮೆ ಅಪಾಯಕಾರಿಯೂ ಹೌದು.

ಕೆಲವೊಮ್ಮೆ ಯಾರಿಗೋ ಹಣ ಪಾವತಿ ಮಾಡಲು ಹೋಗಿ ಮತ್ಯಾರಿಗೋ ಪಾವತಿಸಿ ಬಿಡುತ್ತೇವೆ. ಹತ್ತು ರೂಪಾಯಿ ಹಾಕಲು ಹೋಗಿ ಹತ್ತು ಸಾವಿರ ಹಾಕಿಬಿಡುತ್ತೇವೆ. ಇಂತಹ ಸಮಯದಲ್ಲಂತೂ ನಗದು ಬೆಸ್ಟ್. ಇಂತದ್ದೇ ಒಂದು ಪೇಚಾಟಕ್ಕೆ ಪ್ರಯಾಣಿಕರೊಬ್ಬರು ಸಿಲುಕಿಕೊಂಡಿದ್ದಾರೆ

ಬನಶಂಕರಿಯಲ್ಲೊಬ್ಬ ಪ್ರಯಾಣಿಕ ಜನವರಿ 14ರ ರಾತ್ರಿ ಕದಿರೇನಹಳ್ಳಿಗೆ ಹೋಗಲು ಬಿಎಂಟಿಸಿ ಬಸ್ ಹತ್ತಿದ್ದ. ಆರು ರೂಪಾಯಿ ಪಾವತಿಸುವಂತೆ ಕಂಡಕ್ಟರ್ ಹೇಳಿದರು. ಚಿಲ್ಲರೆ ಇಲ್ಲದ ಕಾರಣ ಆತ ಆನ್‌ಲೈನ್ ಪೇ ಮಾಡಲು ಮುಂದಾದ. ಆದರೆ, ಮುಂದಾಗಿದ್ದೇ ಆತನಿಗೆ ಆತಂಕಕ್ಕೆ ಒಳಗಾಗುವಂತೆ ಮಾಡಿದ್ದು. ಸಂತ್ರಸ್ತ ವ್ಯಕ್ತಿಗೆ ಡಿಪೋಗೆ ಬಂದು ಹಣ ಪಡೆಯುವಂತೆ ಸಲಹೆ ನೀಡಿದ್ದಾರೆ.

ಸದ್ಯಕ್ಕೆ ಪ್ರಯಾಣಿಕನಿಗೆ ಹಣವಿನ್ನು ಕೊಟ್ಟಿಲ್ಲ. ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದು, ಇಂದು ಅಥವಾ ನಾಳೆಯೊಳಗೆ ಹಣವನ್ನು ಪಾವತಿ ಮಾಡಲಾಗುವುದು ಎಂದು ಭರವಸೆ ನೀಡಿದ್ದಾರೆ.



**ಆನ್‌ಲೈನ್ ಪಾವತಿ ಮಾಮೂಲಿ**

> ನಾನು ಕೇವಲ 6 ರೂಪಾಯಿ ಕೇಳಿದ್ದು, ನೀವ್ಯಾಕೆ ಇಷ್ಟೊಂದು ಹಣ ಪಾವತಿ ಮಾಡಿದಿರಿ ಎಂದು ಹೇಳಿದ್ದಾರೆ. ಮುಂದೇನು ಮಾಡಬೇಕೆಂದು ತೋಚದ ಆತನಿಗೆ ಅವರೇ ಮೇಲಧಿಕಾರಿಗಳ ನಂಬರ್ ಕೊಟ್ಟಿದ್ದಾರೆ. ಜೊತೆಗೆ ಮೇಲಾಧಿಕಾರಿಗಳಿಗೆ ಕಂಡಕ್ಟರ್ ಸಹ ಮಾಹಿತಿ ನೀಡಿದ್ದಾರೆ. ಅಷ್ಟು ದೊಡ್ಡ ಮೊತ್ತವನ್ನು ಮರಳಿಸಲು ಸಾಧ್ಯವಾಗದ ಕಾರಣ, ಬಸ್ ನಿರ್ವಾಹಕರು ಪ್ರಯಾಣಿಕನಿಗೆ ಡಿಪೋ ಮ್ಯಾನೇಜರ್ ಅವರ ಫೋನ್ ನಂಬರ್ ನೀಡಿದರು.

**6 ರೂ. ಬದಲು ಅರವತ್ತು ಸಾವಿರ ಹೋಯ್ತು**


ಕೆಲಸದ ಒತ್ತಡ, ಮಾನಸಿಕ ಒತ್ತಡದಲ್ಲಿದ್ದ ಹಾಗೂ ಬಸ್ ರಶ್‌ನಿಂದ ನಿಲ್ಲಲೂ ಜಾಗವಿಲ್ಲದಿದ್ದ ಕಾರಣ, ಆತ ಫೋನ್ ಪೇ ಮೂಲಕ ಹಣ ಪಾವತಿಸುವ ವೇಳೆ ಗೊತ್ತಿಲ್ಲದೆ 62,316 ರೂಪಾಯಿ ಕಡಿತವಾಗಿ ಕಂಡಕ್ಟರ್‌ಗೆ ಖಾತೆಗೆ ಜಮೆಯಾಗಿದೆ. ಪ್ರಯಾಣಿಕನಿಗೆ ಬಂದ ಮೆಸೇಜ್ ಕಂಡು ಆತ ಶಾಕ್ ಆಗಿದ್ದಾನೆ ಕೂಡಲೇ ಆತ ಪಾವತಿಸಿದ ಮೊತ್ತವನ್ನು ಕಂಡಕ್ಟರ್ ತಿಳಿಸಿದ್ದಾನೆ ಅವರು ಪರಿಶೀಲನೆ ನಡೆಸಿದಾಗ ಬಹು ಮೊತ್ತದ ಹಣ ಕಂಡು ಅವಕ್ಕಾಗಿದ್ದಾರೆ.

# ಏನಾಯ್ತು ರಾಮನಗರದ ಸಾವಿರ ಬೆಡ್ ಆಸ್ಪತ್ರೆ?

## ಕ್ಯಾಂಪಸ್‌ನಲ್ಲಿ ಆಸ್ಪತ್ರೆಯ ನಿರ್ಮಾಣ ಕಾಮಗಾರಿಯನ್ನು ಸೇರಿಸದೆ ಹೋದರೆ ಆರೋಗ್ಯ ವಿವಿ ನಿರ್ಮಾಣ ಕಾರ್ಯ ಪೂರ್ಣವಾಗುವುದಿಲ್ಲ

• **ಉದಯವಾಹಿನಿ, ರಾಮನಗರ**

ರಾಮನಗರದ ಬಳಿ ನಿರ್ಮಾಣವಾಗುತ್ತಿರುವ ರಾಜೀವ್‌ಗಾಂಧಿ ಆರೋಗ್ಯ ವಿವಿ ಕ್ಯಾಂಪಸ್‌ನಲ್ಲೇ 650 ಹಾಸಿಗೆಯ ಹೈಟೆಕ್ ಆಸ್ಪತ್ರೆ ನಿರ್ಮಿಸುವಂತೆ ಸಂಸದ ಡಾ.ಸಿ.ಎನ್.ಮಂಜುನಾಥ್ ಆಗ್ರಹಿಸಿದ್ದಾರೆ. ಈ ನಡುವೆ ಮೂಲ ಯೋಜನೆಯಂತೆ ಕ್ಯಾಂಪಸ್‌ನಲ್ಲಿ ತಲೆ ಎತ್ತಬೇಕಿದ್ದ 250 ಬೆಡ್ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಹಾಗೂ 750 ಹಾಸಿಗೆ ಸಾಮರ್ಥ್ಯದ ಹೈಟೆಕ್ ಆಸ್ಪತ್ರೆ ಏನಾಗಲಿದೆ ಎಂದು ಪ್ರಶ್ನೆ ಸಾರ್ವಜನಿಕ ವಲಯದಲ್ಲಿ ಕಾಡುತ್ತಿದೆ. ಈ ಸಂಬಂಧ ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣ ಪ್ರಕಾಶ್ ಪಾಟೀಲ್, ರಾಜೀವ್‌ಗಾಂಧಿ ಆರೋಗ್ಯ ವಿವಿ ಉಪಕುಲಪತಿ ಡಾ.ಬಿ.ಸಿ.ಭಗವಾನ್ ಅವರಿಗೆ ಪತ್ರ ಬರೆದಿರುವ ಸಂಸದ ಡಾ.ಸಿ.ಎನ್.ಮಂಜುನಾಥ್ ಅವರು, 600 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಅರ್ಚಕರಹಳ್ಳಿ ಬಳಿ ನಿರ್ಮಾಣವಾಗುತ್ತಿರುವ ರಾಜೀವ್‌ಗಾಂಧಿ ಆರೋಗ್ಯ ವಿವಿ ಕ್ಯಾಂಪಸ್ ಮತ್ತು ಮೆಡಿಕಲ್ ಕಾಲೇಜು ನಿರ್ಮಾಣ ಕಾಮಗಾರಿಯ ನೀಲನಕ್ಷೆಯಲ್ಲಿ ಕಾಲೇಜಿನ ಕ್ಯಾಂಪಸ್‌ನಲ್ಲಿ ಆಸ್ಪತ್ರೆ ನಿರ್ಮಾಣದ ಬಗ್ಗೆ ತಿಳಿಸಿಲ್ಲ. ಈ ಕ್ಯಾಂಪಸ್‌ನಲ್ಲಿ ಆಸ್ಪತ್ರೆಯ ನಿರ್ಮಾಣ ಕಾಮಗಾರಿಯನ್ನು ಸೇರಿಸದೆ ಹೋದರೆ ಆರೋಗ್ಯ ವಿವಿ ನಿರ್ಮಾಣ ಕಾರ್ಯ ಪೂರ್ಣವಾಗುವುದಿಲ್ಲ ಎಂದು ಅವರು ಪತ್ರದಲ್ಲಿ ತಿಳಿಸಿದ್ದಾರೆ.



ರಾಷ್ಟ್ರೀಯ ವೈದ್ಯಕೀಯ ಆಯೋಗದ ಸೂಚನೆಯಂತೆ ಮೆಡಿಕಲ್ ಕಾಲೇಜಿಗೆ ಪ್ರತ್ಯೇಕವಾಗಿ ಆಸ್ಪತ್ರೆಯ ಅಗತ್ಯ ಇದೆ. ಇನ್ನು ರಾಮನಗರ ಜಿಲ್ಲಾಕೇಂದ್ರವಾಗಿರುವ ಕಾರಣ ಗ್ರಾಮೀಣ ಪ್ರದೇಶದ ಜನತೆಗೆ ತೃತೀಯ ಹಂತದ ಚಿಕಿತ್ಸೆ ನೀಡಲು ಸುಸಜ್ಜಿತ ಆಸ್ಪತ್ರೆ ಅತ್ಯವಶ್ಯಕವಾಗಿದೆ. ಈ ಕಾರಣದಿಂದಾಗಿ ಕ್ಯಾಂಪಸ್ ಆವರಣದಲ್ಲಿ ಎನ್‌ಎಂಸಿಯ ಕ್ಲೀನಿಕಲ್ ಮಾನದಂಡಗಳನ್ನು ಪೂರೈಸುವ ಜತೆಗೆ ಜಿಲ್ಲೆಯ ಜನತೆಗೆ ದ್ವಿತೀಯ ಮತ್ತು ತೃತೀಯ ಹಂತದಲ್ಲಿ ಗುಣಮಟ್ಟದ ಚಿಕಿತ್ಸೆ ನೀಡುವ ಆಸ್ಪತ್ರೆ ಲಭ್ಯವಾಗುತ್ತದೆ.



ಇದರಿಂದಾಗಿ ಬಡ ರೋಗಿಗಳಿಗೆ ಸಾಕಷ್ಟು ಅನುಕೂಲವಾಗಲಿದೆ ಎಂದು ಪತ್ರದಲ್ಲಿ ಗಮನ ಸೆಳೆದಿದ್ದಾರೆ. ಪ್ರಸ್ತುತ ರಾಮನಗರದಲ್ಲಿ 250 ಹಾಸಿಗೆ ಸಾಮರ್ಥ್ಯದ ಜಿಲ್ಲಾಸ್ಪತ್ರೆ ಇದ್ದು, ಇದು ಮೆಡಿಕಲ್ ಕಾಲೇಜಿನಿಂದ 3 ಕಿಮೀ ದೂರದಲ್ಲಿದೆ. ಈ ಆಸ್ಪತ್ರೆಯನ್ನು ಮೆಡಿಕಲ್ ಕಾಲೇಜಿನ ರೆಫರಲ್ ಆಸ್ಪತ್ರೆಯಾಗಿ ಸೇರಿದಲ್ಲಿ ಶೈಕ್ಷಣಿಕ ಸಮನ್ವಯ, ರೋಗಿಗಳ ಆರೈಕೆ, ತುರ್ತು ಸೇವೆಗಳ ಕಾರ್ಯಾಚರಣೆಗೆ ಸಾಕಷ್ಟು ಅನಾನುಕೂಲವಾಗಲಿದೆ.

> ರಾಮನಗರದಲ್ಲಿ ನಿರ್ಮಾಣ ಆಗುತ್ತಿರುವ ಆರೋಗ್ಯ ವಿವಿ ಅಂಗಳದಲ್ಲಿ 650 ಹಾಸಿಗೆಯ ಸುಸಜ್ಜಿತ ಆಸ್ಪತ್ರೆ ನಿರ್ಮಾಣ ಮಾಡಿದರೆ ಸಾರ್ವಜನಿಕರಿಗೆ ಸಾಕಷ್ಟು ಅನುಕೂಲವಾಗಲಿದೆ. ಜಿಲ್ಲಾಸ್ಪತ್ರೆಯನ್ನು ಮೆಡಿಕಲ್ ಕಾಲೇಜು ಆಸ್ಪತ್ರೆಯಾಗಿಸುವ ಬದಲು ಕ್ಯಾಂಪಸ್‌ನಲ್ಲೇ ಪ್ರತ್ಯೇಕ ಆಸ್ಪತ್ರೆ ನಿರ್ಮಾಣ ಮಾಡುವಂತೆ ವೈದ್ಯಕೀಯ ಶಿಕ್ಷಣ ಸಚಿವರು, ಆರೋಗ್ಯ ವಿವಿ ಉಪಕುಲಪತಿಗೆ ಮನವಿ ಮಾಡಿದ್ದೇನೆ.
> –ಡಾ.ಸಿ.ಎನ್.ಮಂಜುನಾಥ್, ಸಂಸದ

ಇನ್ನು ವೈದ್ಯಕೀಯ ಕಾಲೇಜಿನ ಪ್ರಾಧ್ಯಾಪಕರು, ವಿದ್ಯಾರ್ಥಿಗಳು, ಸಿಬ್ಬಂದಿಗಳು ಅಲ್ಲಿಂದ ಇಲ್ಲಿಗೆ ಇಲ್ಲಿಂದ ಅಲ್ಲಿಗೆ ತಿರುಗಾಡುವುದರಿಂದ ಸಮಸ್ಯೆ ಹೆಚ್ಚಾಗುತ್ತದೆ. ಈ ಕಾರಣದಿಂದಾಗಿ ಕ್ಯಾಂಪಸ್‌ನಲ್ಲೇ ಸಸಜ್ಜಿತ ಆಸ್ಪತ್ರೆ ನಿರ್ಮಾಣವಾಗಬೇಕು. ಇದರಿಂದಾಗಿ ಮೆಡಿಕಲ್ ಕಾಲೇಜು ನಿರ್ಮಾಣದ ಉದ್ದೇಶವೂ ಈಡೇರಿದಂತಾಗುತ್ತದೆ ಎಂದು ಸಂಸದ ಡಾ.ಸಿ.ಎನ್.ಮಂಜುನಾಥ್ ಸಚಿವರು, ಕುಲಪತಿಗೆ ತಿಳಿಸಿದ್ದಾರೆ.

**ಕಾಯ್ದೆ ಪ್ರಕಾರ ವಿವಿ ಸಂಕೀರ್ಣದಲ್ಲಿ ಏನಿರಬೇಕು?:** 1994 ರಾಜೀವ್ ಗಾಂಧಿ ಆರೋಗ್ಯ, ಆರೋಗ್ಯ ವಿವಿ ಕಾಯ್ದೆಗೆ 2007ರಲ್ಲಿ ಬಿಜೆಪಿ–ಜೆಡಿಎಸ್ ಸಮ್ಮಿಶ್ರ ಸರಕಾರದ ಅವಧಿಯಲ್ಲಿ ತಿದ್ದುಪಡಿ ಕಾಯ್ದೆ ಮಂಡಿಸಿದ್ದ ಅಂದಿನ ಸಿಎಂ ಎಚ್.ಡಿ.ಕುಮಾರಸ್ವಾಮಿ ಅವರು ರಾಮನಗರದಲ್ಲಿ ಆರೋಗ್ಯ ವಿವಿ ಸಂಕೀರ್ಣ ನಿರ್ಮಿಸುವ ನಿರ್ಣಯ ಕೈಗೊಂಡಿದ್ದರು.

**ಕಾಲೇಜು ಆರಂಭಕ್ಕೆ ಸಿದ್ಧತೆ**

ರಾಮನಗರದ ರಾಜೀವ್‌ಗಾಂಧಿ ಆರೋಗ್ಯ ವಿವಿ ಆವರಣದಲ್ಲಿ ಮತ್ತು ಕನಕಪುರದಲ್ಲಿ ಮೆಡಿಕಲ್ ಕಾಲೇಜು ನಿರ್ಮಾಣಕ್ಕೆ ಸಂಬಂಧಿಸಿದಂತೆ ರಾಜ್ಯ ವೈದ್ಯಕೀಯ ಶಿಕ್ಷಣ ಇಲಾಖೆ ರಾಷ್ಟ್ರೀಯ ವೈದ್ಯಕೀಯ ಆಯೋಗಕ್ಕೆ ಕಳೆದ ವರ್ಷ ಪ್ರಸ್ತಾವನೆ ಸಲ್ಲಿಸಿತ್ತು. ಆದರೆ, ಮೂಲ ಸೌಕರ್ಯಗಳು ಇನ್ನೂ ಅಭಿವೃದ್ಧಿ ಪಡಿಸಿಲ್ಲವೆಂಬ ಕಾರಣಕ್ಕೆ ಎನ್‌ಎಂಸಿ ಇದನ್ನು ನಿರಾಕರಿಸಿತ್ತು. ರಾಮನಗರದಲ್ಲಿ ರಾಜೀವ್ ಗಾಂಧಿ ಆರೋಗ್ಯ ವಿವಿ ಆವರಣದಲ್ಲಿ ನಡೆಯುತ್ತಿರುವ ಕಟ್ಟಡ ನಿರ್ಮಾಣ ಕಾಮಗಾರಿ ಭಾಗಶಃ ಪೂರ್ಣಗೊಂಡಿರುವ ಹಿನ್ನೆಲೆಯಲ್ಲಿ ರಾಜ್ಯ ವೈದ್ಯಕೀಯ ಶಿಕ್ಷಣ ಇಲಾಖೆ ಈ ವರ್ಷದಿಂದ ರಾಮನಗರದಲ್ಲಿ ಮೆಡಿಕಲ್ ಕಾಲೇಜು ಆರಂಭಿಸಲು ಪ್ರಸ್ತಾವನೆ ಸಲ್ಲಿಸಿದೆ. ಕನಕಪುರದಲ್ಲಿ ಇನ್ನೂ ಮೂಲಸೌಕರ್ಯ ಇಲ್ಲದ ಕಾರಣ ಪ್ರಸ್ತಾವನೆ ಸಲ್ಲಿಸಿಲ್ಲ.

## ಮಿನಿ ನ್ಯೂಸ್

### ಜಾನಪದ ನೃತ್ಯ ಸ್ಪರ್ಧೆಯಲ್ಲಿ ರಾಜ್ಯಮಟ್ಟಕ್ಕೆ ಆಯ್ಕೆ



ಉದಯವಾಹಿನಿ ಚಿತ್ರ

• **ಉದಯವಾಹಿನಿ, ಗುಂಡ್ಲುಪೇಟೆ**

ರಾಜ್ಯ ಸರ್ಕಾರಿ ನೌಕರರ ಜಿಲ್ಲಾ ಮಟ್ಟದ ಕ್ರೀಡಾಕೂಟ, ಸಾಂಸ್ಕೃತಿಕ ಕಾರ್ಯಕ್ರಮದ ಜಾನಪದ ನೃತ್ಯ ಸ್ಪರ್ಧೆಯಲ್ಲಿ ಶಿಕ್ಷಕ ರವಿ ಬೈಲೂರು ತಂಡ ಜಿಲ್ಲಾಮಟ್ಟದಿಂದ ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದೆ.

ಸತತವಾಗಿ ಹನ್ನೆರಡು ಬಾರಿ ಜಿಲ್ಲಾ ಮಟ್ಟದಲ್ಲಿ ಜಯಗಳಿಸಿ ರಾಜ್ಯ ಮಟ್ಟಕ್ಕೆ ಆಯ್ಕೆಯಾದ ರವಿ ಬೈಲೂರು, ಸಿದ್ಧಶೆಟ್ಟಿ, ಪ್ರದೀಪ್, ರಮೇಶ್, ಜ್ಯೋತಿಪ್ರಸಾದ್, ಕೆಂಚಪ್ಪ ಅವರನ್ನ ಶಿಕ್ಷಣ ಇಲಾಖೆ ಉಪನಿರ್ದೇಶಕ ಚಂದ್ರಪಾಟೀಲ್, ಸರ್ಕಾರಿ ನೌಕರ ಸಂಘದ ಜಿಲ್ಲಾಧ್ಯಕ್ಷೆ ರೇಣುಕಾದೇವಿ, ಕಾರ್ಯದರ್ಶಿ ಮಹದೇವಸ್ವಾಮಿ, ತಾ.ಅದ್ಯಕ್ಷ ಪ್ರಸಾಸ್ ಸೇರಿದಂತೆ ಸಂಘದ ಪದಾಧಿಕಾರಿಗಳು ಶಿಕ್ಷಕ ವೃಂದದವರು ಅಭಿನಂದನೆ ಸಲ್ಲಿಸಿದ್ದಾರೆ.

### ದೊಡ್ಡನೇರಳೆ ಸರ್ಕಾರಿ ಪ್ರಾಥಮಿಕ ಶಾಲೆಗೆ ಎಲ್‌ಇಡಿ ಟಿವಿ ಕೊಡುಗೆ

• **ಉದಯವಾಹಿನಿ, ಬೆಟ್ಟದಪುರ**

ಮಕ್ಕಳು ವಿದ್ಯೆಯನ್ನು ಕಷ್ಟಪಟ್ಟು ಕಲಿಯದೆ ಇಷ್ಟಪಟ್ಟು ಕಲಿತು ಉತ್ತಮ ಪ್ರಜೆಗಳಾಗಿ ರೂಪುಗೊಳ್ಳಬೇಕು. ವಿದ್ಯೆ ಕಲಿತ ಶಾಲೆಗೆ ಮತ್ತು ಶಿಕ್ಷಕರಿಗೆ ಗೌರವ ತರುವಂತಹ ಕೆಲಸ ಮಾಡಬೇಕೆಂದು ಒಕ್ಕಲಿಗ ಯುವ ಬ್ರಿಗೇಡ್ ಸಂಸ್ಥಾಪಕ ಅಧ್ಯಕ್ಷ ನಂಜೇಗೌಡ ನಂಜುಂಡ ಹೇಳಿದರು. ಸಮೀಪದ ದೊಡ್ಡನೇರಳೆ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಗೆ ವೈಯಕ್ತಿಕವಾಗಿ ಎಲ್.ಇ.ಡಿ ಟಿವಿ ನೀಡಿ ಮಾತನಾಡಿದ ಅವರು, ಸರ್ಕಾರಿ ಶಾಲೆಗಳು ಉಳಿದರೆ ಮಾತ್ರ ಬಡಮಕ್ಕಳಿಗೆ ಶಿಕ್ಷಣ ಕೊಡಲು ಸಾಧ್ಯ. ಖಾಸಗೀಕರಣದಿಂದ, ಅಧಿಕಾರಿಗಳ ನಿರ್ಲಕ್ಷ್ಯತನದಿಂದ ಸರ್ಕಾರಿ ಶಾಲೆಗಳು ಅವನತಿಯ ಅಂಚಿನಲ್ಲಿವೆ. ಸರ್ಕಾರ, ಅಧಿಕಾರಿಗಳು, ಶಿಕ್ಷಕರು, ಪಾಲಕರು ಜಾಗೃತಿ ವಹಿಸಿದರೆ ಸರ್ಕಾರಿ ಶಾಲೆ ಉಳಿಸಬಹುದು. ಖಾಸಗಿ ಶಾಲೆಗೆ ಹೋಲಿಕೆ ಮಾಡಿದರೆ ಸರ್ಕಾರಿ ಶಾಲೆಯಲ್ಲಿ ಉತ್ತಮ ಬೋಧಕರು ಇದ್ದಾರೆ. ಹಾಗಾಗಿ ಸರ್ಕಾರಿ ಶಾಲೆಯನ್ನು ಉಳಿಸಲು ಪ್ರತಿಯೊಬ್ಬರ ಸಹಕಾರ ಪ್ರಮುಖವಾಗಿದೆ ಎಂದರು.

### ಕುಡಿದ ಅಮಲಿನಲ್ಲಿ ಕತ್ತು ಕೊಯ್ದುಕೊಂಡ ವ್ಯಕ್ತಿ

• **ಉದಯವಾಹಿನಿ, ಕೊಳ್ಳೇಗಾಲ**

ತಾಲ್ಲೂಕಿನ ಕಾಮಗೆರೆ ಗ್ರಾಮದ ನಿವಾಸಿ ಲೋಕೇಶ್ ಪಾನಮತ್ತನಾಗಿ ಮತ್ತಿನಲ್ಲಿ ಕತ್ತು ಕೊಯ್ದುಕೊಂಡಿದ್ದು, ನಗರದ ಸರ್ಕಾರಿ ಉಪ ವಿಭಾಗ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಹೆಂಡತಿಯ ಜೊತೆ ಜಗಳವಾಡಿ ಅವರು ಕೊಂಡು ಕತ್ತು ಕೊಯ್ದುಕೊಂಡಿದ್ದರು. ಮಧುವನಹಳ್ಳಿ ಗ್ರಾಮ ನಿವಾಸಿ ಲೋಕೇಶ್ ಪತ್ನಿ, ಇಬ್ಬರು ಮಕ್ಕಳೊಂದಿಗೆ ಹೆಂಡತಿಮನೆ ಕಾಮಗೆರೆಯಲ್ಲಿ ವಾಸವಾಗಿದ್ದು, ಮದ್ಯ ವ್ಯಸನಿಯಾಗಿದ್ದು ದಿನನಿತ್ಯ ಹೆಂಡತಿಯ ಜೊತೆ ಜಗಳವಾಡಿ ಚಿತ್ರ ಹಿಂಸೆ ನೀಡುತ್ತಿದ್ದು. ಸಹಿಸಲಾಗದ ಹೆಂಡತಿ 112 ವಾಹನದ ಪೊಲೀಸರಿಗೆ ಕರೆ ಮಾಡಿದ್ದರು.

ಎಎಸ್‌ಐ ರಂಗರಾಜ್ ಸಿಬ್ಬಂದಿ ಮೊಹಮ್ಮದ್ ಜಾಫರ್ ಸ್ಥಳಕಾಗಮಿಸಿದ ಲೋಕೇಶ್‌ಗೆ ಬುದ್ಧಿ ಹೇಳಿ ಸಮಾಧಾನ ಪಡಿಸಿದ್ದರು. ಬಳಿ, ಮಧುವನಹಳ್ಳಿ ಗ್ರಾಮಕ್ಕೆ ಹೋಗುತ್ತೇನೆ ಎಂದು ರಸ್ತೆಗೆ ಬಂದು ಬೇಡಿನಿಂದ ಕತ್ತನ್ನು ಕೊಯ್ದುಕೊಂಡಿದ್ದನು. ತೀವ್ರ ರಕ್ತಸ್ರಾವವಾಗಿ ಒದ್ದಾಡುತ್ತಿದ್ದನ್ನು ಗಮನಿಸಿದ ಗಸ್ತು ಪೊಲೀಸರು ತಕ್ಷಣ ನಗರದ ಸರ್ಕಾರಿ ಆಸ್ಪತ್ರೆಗೆ ದಾಖಲು ಮಾಡಿದ್ದರು. ವೈದ್ಯರು ಆಸ್ಪತ್ರೆಯಲ್ಲಿ ದಾಖಲು ಚಿಕಿತ್ಸೆ ನೀಡಿದ್ದಾರೆ. ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಕಬ್ಬಿನಗದ್ದೆಯಲ್ಲಿ ಕಾಡಾನೆಗಳು ಗೋಚರ ಉಪ್ಪಿನಕೆರೆ ಗ್ರಾಮಸ್ಥರಲ್ಲಿ ಆತಂಕ

• **ಉದಯವಾಹಿನಿ, ಮದ್ದೂರು**

ತಾಲ್ಲೂಕಿನ ಉಪ್ಪಿನಕೆರೆ ಬಳಿ ಶುಕ್ರವಾರ ಬೆಳಿಗ್ಗೆ ಐದು ಕಾಡಾನೆಗಳು ಗೋಚರವಾಗಿ ಗ್ರಾಮಸ್ಥರಲ್ಲಿ ಆತಂಕ ಮೂಡಿಸಿದವು. ಚನ್ನಪಟ್ಟಣದ ಅರಣ್ಯ ಪ್ರದೇಶದ ಕಡೆಯಿಂದ ಬಂದಿರಬಹುದೆನ್ನಲಾದ ಕಾಡಾನೆಗಳು ಗ್ರಾಮದ ಕಬ್ಬಿನಗದ್ದೆಗಳಲ್ಲಿ ಕಬ್ಬನ್ನು ತಿನ್ನುತ್ತಿದ್ದವು.



ಕಬ್ಬಿನ ಜಮೀನುಗಳಲ್ಲಿ ಆನೆಗಳನ್ನು ನೋಡಿ ಭಯಭೀತರಾದ ಗ್ರಾಮಸ್ಥರು ಕೂಡಲೇ ಅರಣ್ಯ ಇಲಾಖೆಯ ಅಧಿಕಾರಿಗಳ ಗಮನಕ್ಕೆ ತಂದಿದ್ದಾರೆ. ಬಳಿಕ ಸ್ಥಳಕ್ಕೆ ವಲಯ ಅರಣ್ಯಾಧಿಕಾರಿ ಗವಿಯಪ್ಪ ಹಾಗೂ ಸಿಬ್ಬಂದಿ ಆಗಮಿಸಿ ಆನೆಗಳು ಗ್ರಾಮದ ಪರಿಮಿತಿಗೆ ಹೋಗದಂತೆ ಕಾವಲು ಕಾಯ್ದರು. ಸಂಜೆಯ ನಂತರ ಕಾಡಾನೆಗಳನ್ನು ಅರಣ್ಯದತ್ತ ಓಡಿಸಲಾಗುತ್ತದೆ ಎಂದು ವಲಯ ಅರಣ್ಯಾಧಿಕಾರಿ ಗವಿಯಪ್ಪ ಪ್ರತಿಕ್ರಿಯಿಸಿದರು.

## ಅಪಘಾತ ತಪ್ಪಿಸಲು ಸಂಚಾರಿ ನಿಯಮ ಪಾಲಿಸಿ : ಡಿವೈಎಸ್ಪಿ

• **ಉದಯವಾಹಿನಿ, ಗುಂಡ್ಲುಪೇಟೆ**

ರಸ್ತೆ ಅಪಘಾತಗಳನ್ನ ತಪ್ಪಿಸಲು ಕಡ್ಡಾಯವಾಗಿ ಸಂಚಾರಿ ನಿಯಮಗಳನ್ನ ಪಾಲಿಸಿ ಡಿವೈಎಸ್ಪಿ ಸ್ನೇಹಾರಾಜ್ ತಿಳಿಸಿದರು. ಪಟ್ಟಣ ಪೊಲೀಸ್ ಠಾಣಾ ಆವರಣದಲ್ಲಿ ರಸ್ತೆ ಸುರಕ್ಷಿತಾ ಜಾಗೃತಿ ಜಾಥಾಗೆ ಚಾಲನೆ ನೀಡಿ ಅವರು ಮಾತನಾಡಿದರು. ವಾಹನ ಚಾಲನೆ ಸಮಯದಲ್ಲಿ ಸಂಚಾರಿ ನಿಯಮ ಪಾಲಿಸದ ಕಾರಣ ಸಾಕಷ್ಟು ಅಪಘಾತವಾಗುತ್ತಿದೆ. ಜನರ ಜೀವಗಳ ರಕ್ಷಣೆಗಾಗಿಯೇ ನಿಯಮ ರೂಪಿಸಲಾಗಿದೆ ಆದುದರಿಂದ ಎಲ್ಲರೂ ಕಡ್ಡಾಯವಾಗಿ ರಸ್ತೆ ಸುರಕ್ಷತಾ ನಿಯಮ ಪಾಲಿಸಬೇಕು ಎಂದರು.

**ಠಾಣೆಯಲ್ಲಿ ತೆರೆದ ಮನೆ ಕಾರ್ಯಕ್ರಮ :** ಠಾಣೆಯಲ್ಲಿನ ದೈನಂದಿನ ಕರ್ತವ್ಯ, ಸೈಬರ್ ಅಪರಾಧ, ಮಾಧಕ ವಸ್ತುಗಳ ಬಳಕೆಯಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ಪಿಐ ಜಯಕುಮಾರ್ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಿದರು. ಪೊಲೀಸರೆಂದರೆ ಭಯ ಬೇಡ, ಸಾರ್ವಜನಿಕರ ಸಹಕಾರದಿಂದ ಕಾನೂನು ರಕ್ಷಣೆ ಮಾಡಲು ಸಾಧ್ಯ. ಇದರಲ್ಲಿ ಮಕ್ಕಳು ಹೊರತಾಗಿಲ್ಲ, ಅನಾವಶ್ಯಕವಾಗಿ ಪೊಲೀಸರ ಮೇಲೆ ಭಯದ ಮನೋಭಾವನೆ ಇರಬಾರದು ಎಂದರು.

ಪೊಲೀಸರೆಂದರೆ ಸಾಮಾನ್ಯವಾಗಿ ಭಯವಿರುತ್ತದೆ ಇಂಥದ್ದನ್ನ ಹೋಗಲಾಡಿಸಿ, ಮಕ್ಕಳ ಹಕ್ಕುಗಳಿಗೆ ಚ್ಯುತಿ ಬಂದಾಗ ಅಥವಾ ರಕ್ಷಣೆಯ ಅವಶ್ಯಕತೆ ಇದ್ದಾಗ ಪೊಲೀಸರ ಸಹಾಯಪಡೆಯಲು ಮಕ್ಕಳ ಸ್ನೇಹಿಯಾಗಿ ಕರ್ತವ್ಯ ನಿರ್ವಹಿಸಲು ಇಲಾಖೆ ಸದಾ ಕಾಲ ಸನ್ನದ್ಧವಾಗಿರುತ್ತದೆ ಎಂದು ಹೇಳಿದರು. ಬೇಗೂರು ವೃತ್ತ ನಿರೀಕ್ಷಕ ಮೋಹಿತ್‌ಸಹದೇವ್, ಸಬ್ ಇನ್ಸ್‌ಪೆಕ್ಟರ್ ನವೀನ್ ಗೌಡ , ತೆರಕಣಾಂಬಿ ಪೊಲೀಸ್ ಠಾಣೆ ಸಬ್ ಇನ್ಸ್‌ಪೆಕ್ಟರ್ ಮಹೇಶ್, ಸಬ್‌ಇನ್ಸ್‌ಪೆಕ್ಟರ್ ನರೇಶ್ ಕುಮಾರ್, ಎಎಸ್‌ಐ ಮಹೇಶ್, ಮುಖ್ಯಪೇದೆ ಮಾದಲಾಂಭಿಕ, ಗುಪ್ತಮಾಹಿತಿ ಸಿಬ್ಬಂದಿ ನಟೇಶ್, ಸಿದ್ದೇಶ್ ಸೇರಿದಂತೆ ಹಲವರು ಇದ್ದರು.

**ಮಕ್ಕಳಲ್ಲಿ ಕಾನೂನು ಅರಿವು**

ಸಂಚಾರ ನಿಯಮಗಳ ಪಾಲನೆ, ಅವುಗಳ ಉಲ್ಲಂಘನೆಯಿಂದ ಎದುರಿಸಬೇಕಾದ ದಂಡ ಹಾಗೂ ಶಿಕ್ಷೆಯ ಬಗ್ಗೆ ಮಾಹಿತಿ ನೀಡಿಲಾಯಿತು, ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ, ಬಾಲಕಾರ್ಮಿಕ ಪದ್ಧತಿ, ಬಾಲ್ಯವಿವಾಹ, ಸರಗಳವು, ಸೈಬರ್ ಅಪರಾಧ ಮತ್ತಿತರ ವಿಚಾರಗಳ ಬಗ್ಗೆ ಜಾಗೃತಿ ಮೂಡಿಸಿದರು. ಯಾವುದೇ ಅಪಾಯಕಾರಿ ಸಂದರ್ಭದಲ್ಲಿ ಪೊಲೀಸ್ ಸಹಾಯವಾಣಿಗೆ ಕರೆ ಮಾಡಬಹುದು. ವಿದ್ಯಾರ್ಥಿ ದಿಸೆಯಲ್ಲಿ ಉತ್ತಮ ಗುರಿಯಿಟ್ಟುಕೊಂಡು ಮುನ್ನಡೆದರೆ ಉಜ್ವಲ ಭವಿಷ್ಯ ರೂಪಿಸಿಕೊಳ್ಳಬಹುದು, ಕಾನೂನಿನ ಬಗ್ಗೆ ವಿದ್ಯಾರ್ಥಿಗಳು ಹೆಚ್ಚು ಅರಿವು ಮೂಡಿಸಿಕೊಳ್ಳಬೇಕು ತಮ್ಮ ಪಾಲಕರಿಗೂ ಈ ಬಗ್ಗೆ ತಿಳಿಸಿಕೊಡಬೇಕು ಎಂದು ಸಲಹೆ ನೀಡಿದರು.

## ಶತಮಾನದ ಶಾಲೆಗಳಿಗೆ ಆಧುನಿಕ ಸ್ಪರ್ಶ: ಸ್ವಯಂಸೇವಾ ಸಂಘದ ವಿಭಿನ್ನ ಪ್ರಯತ್ನ

• **ಉದಯವಾಹಿನಿ, ಮಾಗಡಿ**

ಸರ್ಕಾರಿ ಶಾಲೆ ಉಳಿಸುವ ನಿಟ್ಟಿನಲ್ಲಿ ಕನ್ನಡ ಸ್ವಯಂಸೇವಾ ಸಂಘದ ಯುವಕರು ವಿಭಿನ್ನ ಪ್ರಯತ್ನಯದಲ್ಲಿ ತೊಡಗಿದ್ದಾರೆ. ದುಡಿಮೆ ಸ್ವಂತ ಹಣ, ದಾನಿಗಳ ಸಹಾಯದಿಂದ ಶಿಥಿಲಾವಸ್ಥೆಯಲ್ಲಿರುವ ಶತಮಾನದ ಶಾಲೆಗಳಿಗೆ ಆಧುನಿಕ ಸ್ಪರ್ಶ ನೀಡಿ ಮೂಲ ಸೌಲಭ್ಯ ಕೊಡುವ ಕೆಲಸವನ್ನು ಸ್ವಯಂಸೇವಾ ಸಂಘ ಮಾಡುತ್ತಿದೆ. ಇದು ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಗಿದೆ. ಸರ್ಕಾರಿ ಶಾಲೆಗಳನ್ನು ಉಳಿಯುವ ನಿಟ್ಟಿನಲ್ಲಿ ಕನ್ನಡ ಸ್ವಯಂಸೇವಾ ಸಂಘದ 25ಕ್ಕೂ ಹೆಚ್ಚು ಯುವಕರ ತಂಡ ರಾಜ್ಯದಾದ್ಯಂತ ಇಲ್ಲಿವರೆಗೂ 18ಕ್ಕೂ ಹೆಚ್ಚು ಸರ್ಕಾರಿ ಶಾಲೆಗಳಿಗೆ ಸುಣ್ಣ ಬಣ್ಣದ ಜೊತೆಗೆ ಮಕ್ಕಳಿಗೆ ಆಕರ್ಷಣೀಯವಾಗಿ ಕಾಣುವ ನಿಟ್ಟಿನಲ್ಲಿ ಕನ್ನಡ ಕವಿಗಳು, ಪ್ರಖ್ಯಾತ ವ್ಯಕ್ತಿಗಳ ಭಾವಚಿತ್ರವನ್ನು ಗೋಡೆಗಳ ಮೇಲೆ ಚಿತ್ತಾರ ಬಿಡಿಸಿ ಮಕ್ಕಳು ಶಾಲೆಯಲ್ಲಿ ಕಲಿಯಲು ಉತ್ತಮ ವಾತಾವರಣ ನಿರ್ಮಾಣ ಮಾಡಲಾಗಿದೆ.




ಉದಯವಾಹಿನಿ ಚಿತ್ರ

ಜೊತೆಗೆ ಮೂಲ ಸೌಲಭ್ಯಗಳಾದ ಶೌಚಾಲಯ, ಗ್ರಂಥಾಲಯಕ್ಕೆ ಪುಸ್ತಕ ಹಾಗೂ ಕ್ರೀಡಾ ಸಾಮಗ್ರಿ ಶಾಲೆಗೆ ಕೊಡುವ ಮೂಲಕ ಖಾಸಗಿ ಶಾಲೆಗೆ ಪೈಪೋಟಿ ಕೊಡುವ ಕೆಲಸವನ್ನು ಸ್ವಯಂಸೇವಾ ಸಂಘ ಮಾಡುತ್ತಿದೆ. ಮಾಗಡಿಯಲ್ಲಿ ಎರಡನೇ ಶಾಲೆಯಾಗಿ ತಾಲ್ಲೂಕಿನ ಮಾಡಬಾಳ್ ಪ್ರೌಢಶಾಲೆಗೆ ಸ್ವಯಂಸೇವಾ ಸಂಘ ಅಧುನಿಕ ಸ್ಪರ್ಶ ನೀಡಿದೆ. ಸರ್ಕಾರ ಮಾಡಬೇಕಾದ ಕೆಲಸವನ್ನು ಸ್ವಯಂಸೇವಾ ಸಂಘ ಮಾಡುವ ಮೂಲಕ ಮಾದರಿ ನಡೆಯನ್ನು ಅನುಸರಿಸಿದೆ.

**ಒಂದು ಲಕ್ಷ ವೆಚ್ಚದಲ್ಲಿ ಶಾಲೆಗೆ ಸುಣ್ಣ-ಬಣ್ಣ:** ತಾಲ್ಲೂಕಿನ ಮಾಡಬಾಳ್ ಶತಮಾನ ಪೂರೈಸಿರುವ ಸರ್ಕಾರಿ ಪ್ರೌಢಶಾಲೆಗೆ ಸ್ವಯಂಸೇವಾ ಸಂಘದ ಯುವಕರು ತಾವು ದುಡಿದ ದುಡಿಮೆಯಲ್ಲಿ ಶೇ25ರಷ್ಟು ಹಣವನ್ನು ಖರ್ಚು ಮಾಡಿದ್ದಾರೆ. ಇದರ ಜತೆಗೆ ಹಳೆ ವಿದ್ಯಾರ್ಥಿಗಳು ಹಾಗೂ ದಾನಿಗಳ ಸಹಾಯದಿಂದ 1ವೆಚ್ಚದಲ್ಲಿ ಸುಣ್ಣ ಬಣ್ಣ ಖರೀದಿ ಮಾಡಿ ಶಾಲೆ ಎಲ್ಲಾ ಕೊಠಡಿಗಳಿಗೂ ಬಣ್ಣ ಬಳೆದು ಆಧುನಿಕ ಸ್ಪರ್ಶ ನೀಡಲಾಗಿದೆ. ಸಾಕಷ್ಟು ಶಿಥಿಲಾವಸ್ಥೆಯಲ್ಲಿದ್ದ ಕಟ್ಟಡ ಈಗ ಆಧುನಿಕ ಸ್ಪರ್ಶ ಸಿಕ್ಕಿದೆ. ಮಕ್ಕಳಿಗೆ ಉತ್ತಮ ವಾತಾವರಣವನ್ನು ನಿರ್ಮಾಣ ಮಾಡಿ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ.

ನೂರಾರು ಕನ್ನಡ ಸ್ವಯಂ ಸೇವಕರ ಟೀಂ ಕಟ್ಟಲಾಗಿದೆ. ಎರಡು ದಿನ ಶಾಖೆಯಲ್ಲೇ ಉಳಿದುಕೊಂಡು ಕನ್ನಡ ಶಾಲೆಗಳಿಗೆ ಅವಶ್ಯ ಇರುವ ಮೂಲ ಸೌಕರ್ಯಗಳಾದ ಕ್ರೀಡಾ ಸಾಮಗ್ರಿ, ಪುಸ್ತಕಗಳನ್ನು ನೀಡಲಾಗಿದೆ ಮಾಸಿ ಹೋಗಿರುವ ಹಳೆ ಕಟ್ಟಡಗಳಿಗೆ ಸುಣ್ಣ ಬಣ್ಣ ಮಾಡಲಾಗಿದೆ. ಶಾಲೆ ಗೋಡೆಗಳ ಮೇಲೆ ಕನ್ನಡ ನಾಡಿನ ಮಹನೀಯರ ಚಿತ್ರಗಳನ್ನು ಬಿಡಿಸಿ ಶಾಲೆಗೆ ಹೊಸ ರೂಪ ನೀಡಲಾಗಿದೆ. ಇನ್ನು ಮುಂದೆ ಮಾಗಡಿ ಕೆಂಪೇಗೌಡರ ನಾಡಿನಲ್ಲಿ ಅವಶ್ಯ ಇರುವ ಎಲ್ಲಾ ಶಾಲೆಗಳನ್ನು ಭೇಟಿ ಮಾಡಿ ಅವಶ್ಯ ಇರುವ ಶಾಲೆಗಳನ್ನು ಆಯ್ಕೆ ಮಾಡಿಕೊಂಡು ಈ ಅಭಿಯಾನ ವಿಸ್ತರಿಸಲು ಯೋಜನೆ ರೂಪಿಸಿಕೊಂಡಿದೆ.

## ಸರ್ವರ್ ಸಮಸ್ಯೆ : ಪಡಿತರ ಪಡೆಯಲು ಪರದಾಟ ದಿನವಿಡೀ ಕಾಯುವ ಸ್ಥಿತಿ

• **ಉದಯವಾಹಿನಿ, ಚೇಳೂರು**

ತಾಲ್ಲೂಕಿನಾದ್ಯಂತ ಪಡಿತರ ಪಡೆಯಲು ಸರ್ವರ್ ಸಮಸ್ಯೆ ಬಹುದೊಡ್ಡ ಸವಾಲಾಗಿದೆ. ಮಾಸಿಕ ಪಡಿತರ ಪಡೆಯಲು ಪಡಿತರ ಚೀಟಿಯಲ್ಲಿರುವ ಯಾರಾದರೂ ಒಬ್ಬ ಸದಸ್ಯರು ಬೆರಳಚ್ಚು ನೀಡಬೇಕು. ಆ ನಂತರ ಮಾತ್ರ ಪಡಿತರ ಪಡೆಯಲು ಸಾಧ್ಯವಾಗಲಿದೆ. ಸರ್ಕಾರವು ಸಾರ್ವಜನಿಕ ಪಡಿತರ ವಿತರಣಾ ವ್ಯವಸ್ಥೆ ಪಾರದರ್ಶಕವಾಗಿರಲು ಬಯೊಮೆಟ್ರಿಕ್ ವ್ಯವಸ್ಥೆ ಜಾರಿಗೊಳಿಸಿದೆ. ನಂತರ ಇನ್ನಷ್ಟು ಸುಲಭ ಹಾಗೂ ಜನಸ್ನೇಹಿಯಾಗಲು ಒನ್ ಟೈಮ್ ಪಾಸ್ವರ್ಡ್ ಆಧಾರಿತ ವ್ಯವಸ್ಥೆ ಜಾರಿಗೊಳಿಸಿದೆ. ಕಾಲ ಕ್ರಮೇಣ ಒಟಿಪಿ ಆಧಾರಿತ ವ್ಯವಸ್ಥೆ ನಿಲ್ಲಿಸಿ, ಕೇವಲ ಬಯೊಮೆಟ್ರಿಕ್ ಸೌಲಭ್ಯ ಮಾತ್ರ ಬಳಸಲು ತೀರ್ಮಾನಿಸಿದೆ. ಒಟಿಪಿ ವ್ಯವಸ್ಥೆಯಡಿ ಫಲಾನುಭವಿಯ ನೋಂದಾಯಿತ ಮೊಬೈಲ್ ಸಂಖ್ಯೆಗೆ ಒನ್ ಟೈಮ್ ಪಾಸ್‌ವರ್ಡ್ ಕಳುಹಿಸಿ, ಆ ಒಟಿಪಿ ಅನ್ನು ನ್ಯಾಯಬೆಲೆ ಅಂಗಡಿಯಲ್ಲಿ ನೋಂದಾಯಿಸುವುದರ ಮೂಲಕ ಪಡಿತರ ಪಡೆಯಬಹುದಾಗಿತ್ತು. ಇದರಿಂದಾಗಿ ಪಡಿತರ ವಿತರಣೆಯಲ್ಲಿ ವಿಳಂಬ ಮತ್ತು ತೊಂದರೆಗಳು ಕಡಿಮೆಯಾಗಿತ್ತು. ವಿಶೇಷವಾಗಿ ವೃದ್ಧರು, ಅಂಗವಿಕಲರು ಈ ವ್ಯವಸ್ಥೆಯಿಂದ ಹೆಚ್ಚು ಪ್ರಯೋಜನ ಪಡೆಯುತ್ತಿದ್ದರು.



ಉದಯವಾಹಿನಿ ಚಿತ್ರ

ಆದರೆ ಬಯೋಮೆಟ್ರಿಕ್ ಕಡ್ಡಾಯ ವ್ಯವಸ್ಥೆ ಇಂದಾಗಿ ಪಡಿತರ ಪಡೆಯಲು ಈಗ ಬಹುದೊಡ್ಡ ಸವಾಲಾಗಿದೆ. ಹಲವು ಗ್ರಾಮೀಣ ಪ್ರದೇಶಗಳಲ್ಲಿ ಇಂಟರ್‌ನೆಟ್ ಸಂಪರ್ಕ ಸರಿಯಾಗಿ ಲಭ್ಯವಿಲ್ಲ. ಆಹಾರ ಇಲಾಖೆಯ ಅಂತರ್ಜಾಲ ತಾಣ ಸಹ ಸರಿಯಾಗಿ ಕಾರ್ಯ ನಿರ್ವಹಿಸುತ್ತಿಲ್ಲ. ಇದರಿಂದ ಬಯೊಮೆಟ್ರಿಕ್ ಯಂತ್ರಗಳು ಕೆಲಸ ಮಾಡದೆ ಫಲಾನುಭವಿಗಳು ಪಡಿತರ ಪಡೆಯಲು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ.

ಜೊತೆಗೆ ಸರ್ವರ್ ಸಿಗುವ ಸಂದರ್ಭದಲ್ಲೂ ವೃದ್ಧರು, ಕೂಲಿ ಕಾರ್ಮಿಕರು ಹಾಗೂ ಶಾರೀರಿಕ ಶ್ರಮ ಮಾಡುವವರ ಬೆರಳಚ್ಚು ಸ್ಪಷ್ಟವಾಗಿ ತಾಳೆಯಾಗದೆ ಇನ್ನಷ್ಟು ಸಮಸ್ಯೆ ಎದುರಿಸುವಂತಾಗಿದೆ.

ವಿನಾಕಾರಣ ಸಾರ್ವಜನಿಕರು ತಮ್ಮ ಕೆಲಸಗಳನ್ನು ಬಿಟ್ಟು ಬೆಳಿಗ್ಗೆಯಿಂದಲೇ ಪಡಿತರ ಅಂಗಡಿಗಳ ಮುಂದೆ ಸಾಲುಗಟ್ಟಿ ನಿಂತು ದಿನವಿಡೀ ಕಾಯಬೇಕಾದ ಪರಿಸ್ಥಿತಿ ಇದೆ. ಕೂಲಿಯೂ ಇಲ್ಲ ಪಡಿತರವೂ ಇಲ್ಲದಂತಾಗಿದೆ. ನರಸಮ್ಮ ಶಿವಪುರ ನಿವಾಸಿ

**20ರ ನಂತರ ಸಮಸ್ಯೆ**

> ರಾಜ್ಯಮಟ್ಟದ ಸಮಸ್ಯೆ ಇದೆ. ತಿಂಗಳ 19ನೇ ತಾರೀಕಿನೊಳಗೆ ಸರ್ವರ್ ಸಮಸ್ಯೆ ಇರುವುದಿಲ್ಲ. 20ನೇ ತಾರೀಕಿನ ಮೇಲೆ ಸಮಸ್ಯೆ ಹೆಚ್ಚಾಗಿ ಕಂಡುಬರುತ್ತಿದೆ. ಸರಿಪಡಿಸುವ ಕೆಲಸವೂ ಆಗುತ್ತಿದೆ. ನಿಯಮ ಉಲ್ಲಂಘನೆಗೆ ಮಾಡಿ ಪಡಿತರ ವಿತರಿಸುವ ನ್ಯಾಯಬೆಲೆ ಅಂಗಡಿ ಡೀಲರ್‌ಗಳಿಗೆ ನೋಟಿಸ್ ಜಾರಿ ಮಾಡಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು.
> –ಪುಷ್ಪಾ ಆಹಾರ ನಿರೀಕ್ಷಕರು

## ರಾಜ್ಯವೇ ನನ್ನ ಪರಿಮಿತಿ, ಜನ ಬಯಸುವ ಕಡೆ ಸ್ಪರ್ಧೆ

• **ಉದಯವಾಹಿನಿ, ಮಂಡ್ಯ**

ಕರ್ನಾಟಕ ರಾಜ್ಯವೇ ನನ್ನ ಪರಿಮಿತಿ. ಜನರು ಎಲ್ಲಿ ಅಪೇಕ್ಷೆ ಮಾಡುತ್ತಾರೆ ಅಲ್ಲಿಂದ ನನ್ನ ಸ್ಪರ್ಧೆ ಮಾಡುತ್ತೇನೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಹೇಳಿದರು. ಆ ಮೂಲಕ ಅವರು, ರಾಜ್ಯ ರಾಜಕಾರಣಕ್ಕೆ ಮರಳುವ ಸ್ಪಷ್ಟ ಸೂಚನೆ ನೀಡಿದರು. ಮೇಲುಕೋಟೆ ವಿಧಾನಸಭಾ ಕ್ಷೇತ್ರದ ಶಿವಳ್ಳಿ ಗ್ರಾಮದಲ್ಲಿ ಶುಕ್ರವಾರ ಮಾರಮ್ಮ ದೇವಿ ದೇವಾಲಯ ಉದ್ಘಾಟನೆ ನಂತರ ಮಾಧ್ಯಮದವರೊಂದಿಗೆ ಅವರು ಮಾತನಾಡಿದರು. ರಾಜ್ಯ ರಾಜಕಾರಣಕ್ಕೆ ವಾಪಸ್ ಬರುತ್ತೀರಾ ಎನ್ನುವ ಪ್ರಶ್ನೆಗೆ ಅವರು ಪ್ರತಿಕ್ರಿಯಿಸಿದರು. ಮಂಡ್ಯದಿಂದ ಲೋಕಸಭೆ ಚುನಾವಣೆಗೆ ನಿಲ್ಲುವ ಉದ್ದೇಶ ಇರಲಿಲ್ಲ. ಸಿ.ಎಸ್. ಪುಟ್ಟರಾಜು ಅವರನ್ನು ನಿಲ್ಲಿಸಬೇಕು ಎಂದುಕೊಂಡಿದ್ದೆ. ಅವತ್ತು ಅನಿವಾರ್ಯವಾಗಿ ನಾನು ಎಲೆಕ್ಷನ್‌ಗೆ ನಿಂತೆ. ಸಂಸದನಾಗ್ತಿನಿ, ಕೇಂದ್ರ ಮಂತ್ರಿ ಆಗ್ತಿನಿ ಎಂದು ನನಗೆ ಗೊತ್ತಿರಲಿಲ್ಲ. ನಮ್ಮ ಪಕ್ಷದಿಂದ ಬೇರೆ ಪಕ್ಷಕ್ಕೆ ಹೋದವರು ಜೆಡಿಎಸ್ ಕಥೆ ಮುಗಿಯಿತು ಎಂದರು.



**ಮೈತ್ರಿ ಬಗ್ಗೆ ಅಂತಿಮ ತೀರ್ಮಾನ**

ಸ್ಥಳೀಯ ಚುನಾವಣೆಯಲ್ಲಿ ಮೈತ್ರಿ ಇಲ್ಲ ಎಂಬ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರ ಹೇಳಿಕೆ ಬಗ್ಗೆ ಕೇಳಲಾದ ಪ್ರಶ್ನೆಗೆ, 'ಕಾಂಗ್ರೆಸ್ ಕೆಟ್ಟ ಆಡಳಿತವನ್ನು ಕಿತ್ತೊಗೆಯಲು ಜೆಡಿಎಸ್–ಬಿಜೆಪಿ ಒಟ್ಟಾಗಿ ಹೋರಾಟ ನಡೆಸುತ್ತವೆ. ಈ ಹಿನ್ನೆಲೆಯಲ್ಲಿ ಜನರ ನಿರೀಕ್ಷೆಗೆ ತಕ್ಕಂತೆ ನಾವು ಮೈತ್ರಿ ಬಗ್ಗೆ ಅಂತಿಮ ತೀರ್ಮಾನ ಮಾಡುತ್ತೇವೆ ಎಂದರು.

ಆದರೆ, ನಮ್ಮ ಪಕ್ಷ ಯಾವ ರೀತಿಯಲ್ಲಿ ಗಟ್ಟಿಯಾಗುತ್ತಿದೆ ಎನ್ನುವುದು ಅವರಿಗೆ ಗೊತ್ತಿಲ್ಲ ಎಂದರು.

## ಬಳ್ಳಿ ನಾಶ: ಕಾಳು ಮೆಣಸು ಇಳುವರಿ ಕುಸಿತ

• **ಉದಯವಾಹಿನಿ, ಯಳಂದೂರು**

ತಾಲ್ಲೂಕಿನ ಬಿಳಿಗಿರಿಬೆಟ್ಟದ ಕಾಳು ಮೆಣಸು ಬೆಳೆಗಾರರಿಗೆ ಈ ಬಾರಿ ಸೊರಗು ರೋಗದ ಆತಂಕ ಎದುರಾಗಿದೆ. ಇಳುವರಿ ತೀವ್ರವಾಗಿ ಕುಸಿದಿದೆ. ಬಳ್ಳಿಗಳಲ್ಲಿ ಎಲೆ ಉದುರುತ್ತಿದ್ದು, ಬಳ್ಳಿ ಸಂಪೂರ್ಣವಾಗಿ ನಶಿಸುವ ಆತಂಕ ರೈತರಲ್ಲಿದೆ. ಮೆಣಸು ಕಾಳಿಗೆ ಬೆಲೆ ಇದ್ದರೂ, ಫಸಲು ಕೈಸೇರದ್ದರಿಂದ ವರಮಾನ ಕೈತಪ್ಪಲಿದೆ.

ಬಿಆರ್‌ಟಿ ಸುತ್ತ ಮೆಣಸು ಬಳ್ಳಿಗಳನ್ನು ವಿವಿಧ ಮರಗಳಿಗೆ ಹಬ್ಬಿಸಲಾಗಿದೆ. ನಾಟಿ ಮಾಡಿದ ನಾಲ್ಕು ವರ್ಷಗಳ ನಂತರ ಗಿಡದಿಂದ ಮೆಣಸು ಫಲ ಕೊಡುತ್ತದೆ. ಉತ್ತಮ ಮಳೆ ಹಾಗೂ ರೋಗದ ಹಾವಳಿ ಇಲ್ಲದಿದ್ದರೆ, ಮಾತ್ರ ಫಸಲನ್ನು ನಿರೀಕ್ಷೆ ಮಾಡಬಹುದು. ಅತಿಯಾದ ಚಳಿಯಿಂದ ಸೊರಗು ರೋಗ ಹಾವಳಿಯಿಂದ ಫಸಲು ಕುಸಿಯಲಿದೆ ಎನ್ನುತ್ತಾರೆ ಬೆಳೆಗಾರರು. ಪ್ರತಿವರ್ಷ ಜನವರಿ–ಮಾರ್ಚ್ ನಡುವೆ ಮೆಣಸು ಕೊಯಿಲು ಆರಂಭವಾಗುತ್ತದೆ. ಮೆಣಸು ಹಣ್ಣಾಗುತ್ತಿದ್ದಂತೆ ಫಸಲು ಸಂಗ್ರಹಿಸಲಾಗುತ್ತದೆ. ಬಹುತೇಕ ಕಾಫಿ ಕೃಷಿಕರು ಮಿಶ್ರ ಬೆಳೆಯಾಗಿ ಮೆಣಸು ಅಭಿವೃದ್ಧಿ ಪಡಿಸಿದ್ದಾರೆ. ಅಡಿಕೆ, ಸಿಲ್ವರ್ ಓಕ್ ಮರಗಳಿಗೆ ಮೆಣಸು ಬಳ್ಳಿ ಹಬ್ಬಿಸಿದ್ದಾರೆ. ಈಗ ಬೇಸಿಗೆ ಕಾಲಿಡುತ್ತಿದ್ದು ಬಳ್ಳಿ ಒಣಗಲು ಆರಂಭಿಸಿವೆ. ಶೀಘ್ರ ಸೊರಗು ಬಾಧೆಯಿಂದ ಎಲೆಗಳು ಉದುರುತ್ತಿದ್ದು, ಬಳ್ಳಿ ನಾಶವಾಗಲಿದೆ ಎಂದು ಬಿಳಿಗಿರಿಬೆಟ್ಟದ ವಾಣಿಜ್ಯ ಬೆಳೆಗಾರ ವಾದಿರಾಜು ಕಳವಳ ವ್ಯಕ್ತಪಡಿಸಿದರು.

ಮೂರು ವರ್ಷಗಳಿಂದ ಬೆಟ್ಟದಲ್ಲಿ ಸರಿಯಾಗಿ ಮಳೆ ಬಂದಿಲ್ಲ, ಹವಾಮಾನ ವೈಪರಿತ್ಯವೂ ಕಾಡುತ್ತಿದೆ. ಒಮ್ಮೆ ಹೆಚ್ಚಾದರೆ, ಮುಂದಿನ ಮಳೆ ಕೈತಪ್ಪುತ್ತದೆ. ಅಕಾಲಿಕ ಹಾಗೂ



ಅನಿರೀಕ್ಷಿತ ಮಳೆ ವೈಪರಿತ್ಯ, ಹಾಗೂ ಔಷಧಿ ಸಿಂಪಡಿಸಲು ಶ್ರಮಿಕರ ಕೊರತೆ ಮೊದಲಾದ ಕಾರಣಗಳಿಂದ ಬೆಳೆ ಉಳಿಸಿಕೊಳ್ಳುವುದು ಸವಾಲಾಗಿದೆ ಎನ್ನುತ್ತಾರೆ ಜಿಲ್ಲಾ ಬುಟಕಟ್ಟು ಸಂಘದ ಕಾರ್ಯದರ್ಶಿ ಮಾದೇಗೌಡ.

ಬೆಟ್ಟದಲ್ಲಿ ಬೆಳೆಯುವ ಕಾಳು ಮೆಣಸಿಗೆ ಬಹು ಬೇಡಿಕೆ ಇದೆ. ಇಲ್ಲಿನ ಬಹುವಾರ್ಷಿಕ ಬಳ್ಳಿ ಮೆಣಸು ಕಾಳಿನ ಉತ್ಪಾದನೆ, ಬಳಕೆ ಮತ್ತು ರಫ್ತಿಗೆ ಬಹು ಬೇಡಿಕೆ ಇದೆ. ಕೆಜಿಗೆ 700 ಧಾರಣೆ ಇದೆ. ಚಿಕ್ಕಟ ದುಂಬಿ, ಹಿಟ್ಟು ತಿಗಣೆ, ಡ್ರಿಪ್ಸ್ ನುಸಿ, ಶೀಘ್ರ ಸೊರಗು, ಶೀತದಿಂದ ಹೆಚ್ಚಾಗುವ ಕೀಟ ಬಾಧೆಯಿಂದ ಗಿಡದಲ್ಲಿ ಈ ಸಲ ಹೂವು ಕಳಚಿದೆ, ಶೇ 90 ಭಾಗದ ಮೆಣಸು ಇಳುವರಿ ಕೈತಪ್ಪಿದೆ. ಇದರಿಂದ 200ಕ್ಕೂ ಹೆಚ್ಚಿನ ಅಂಚಿನ ಕೃಷಿಕರು ಕರಿ ಮೆಣಸು ಕೃಷಿಯಿಂದ ಕಂಗೆಟ್ಟಿದ್ದಾರೆ ಎಂದು ಬೆಳೆಗಾರ ವಾಸು ಹೇಳಿದರು.

**ಬೋರ್ಡೋ ದ್ರಾವಣ ಬಳಸಿ:** ಮಣ್ಣಿನಲ್ಲಿ ತೇವಾಂಶ ಹೆಚ್ಚಾದರೆ ಸೊರಗು ರೋಗ ಕಾಣಿಸಿಕೊಳ್ಳುತ್ತದೆ. ಒಂದೂವರೆ ತಿಂಗಳಲ್ಲಿ ಎಲ್ಲಾ ಸಸಿಗಳಿಗೆ ಆವರಿಸುತ್ತದೆ. ಇದನ್ನು ತಪ್ಪಿಸಲು ಬಳ್ಳಿಗೆ ಬೋರ್ಡೋ ದ್ರಾವಣ ಸಿಂಪಡಿಸಬೇಕು. ಮಳೆಗಾಲಕ್ಕೂ ಮೊದಲು ಕಾಂಪೋಸ್ಟ್ ಗೊಬ್ಬರ ಜೊತೆಗೆ ಟ್ರೈಕೋಡರ್ಮ ಸಿಂಪಡಿಸಿದರೆ ಕಾಳು ಮೆಣಸು ಬಳ್ಳಿಗಳ ರೋಗನಿರೋಧಕ ಶಕ್ತಿ ಹೆಚ್ಚಾಗಲಿದೆ ಎಂದು ತೋಟಗಾರಿಕಾ ಇಲಾಖೆಯ ಸಹಾಯಕ ನಿರ್ದೇಶಕ ಜಿ.ಎಸ್.ರಾಜು ಸಲಹೆ ನೀಡಿದರು.


# ಕೋಲಾರ ಇತಿಹಾಸದ ಮ್ಯೂಸಿಯಂಗೆ ಐದು ಎಕರೆ ಜಾಗ : ಡಿಸಿ

## ಅಗತ್ಯವಾಗಿ ಬೇಕಾಗಿರುವ ಐದು ಎಕರೆ ಜಾಗವನ್ನು ಅತಿ ಶೀಘ್ರದಲ್ಲೇ ಗುರುತಿಸಿ ಕೊಡಲಾಗುವುದು ಎಂದು ಭರವಸೆ

• **ಉದಯವಾಹಿನಿ, ಕೋಲಾರ**

ಜಿಲ್ಲೆಯ ಸಮೃದ್ಧ ಪರಂಪರೆ ಸಾರುವ ಶಾಸನ, ವೀರಗಲ್ಲು, ಸ್ಮಾರಕಗಳನ್ನು ವೈಜ್ಞಾನಿಕವಾಗಿ ಸಂರಕ್ಷಿಸಿ ಮುಂದಿನ ಪೀಳಿಗೆಗೆ ಅರಿವು ಮೂಡಿಸುವ ಅಗತ್ಯವಿದ್ದು, ಇತಿಹಾಸದ ಮ್ಯೂಸಿಯಂ ನಿರ್ಮಾಣಕ್ಕೆ ಜಾಗ ಕಲ್ಪಿಸಲಾಗುವುದು ಎಂದು ಜಿಲ್ಲಾಧಿಕಾರಿ ಎಂ.ಆರ್.ರವಿ ಹೇಳಿದರು. ಜಿಲ್ಲಾಡಳಿತ ಭವನದಲ್ಲಿ ಸ್ಮಾರಕ, ವೀರಗಲ್ಲು, ಶಾಸನಗಳ ರಕ್ಷಣೆ ಕುರಿತು ನಡೆದ ಪುರಾತತ್ವ ಇಲಾಖೆ, ಮುಜರಾಯಿ, ಪ್ರವಾಸೋದ್ಯಮ ಹಾಗೂ ವಿವಿಧ ಸಂಘ ಸಂಸ್ಥೆಗಳ ಮುಖಂಡರ ಸಭೆಯಲ್ಲಿ ಅವರು ಮಾತನಾಡಿದರು.

ಜಿಲ್ಲೆಗೆ ತನ್ನದೆ ಆದ ಐತಿಹಾಸಿಕ, ಸಾಂಸ್ಕೃತಿಕ, ಪಾರಂಪರಿಕ ಇತಿಹಾಸವಿದೆ. ರಾಜ ಮನೆತನದವರು ಆಳ್ವಿಕೆ ನಡೆಸಿದ್ದಾರೆ ಎಂಬುದಕ್ಕೆ ಸಾಕಷ್ಟು ಕುರುಹುಗಳು ಈಗಲೂ ಇವೆ. ಅವೆಲ್ಲ ನಶಿಸಿ ಹೋಗುವ ಮೊದಲೇ ಪತ್ತೆ ಹಚ್ಚಿ ರಕ್ಷಣೆ ಮಾಡಬೇಕಾಗಿದೆ ಎಂದರು. ತಹಶೀಲ್ದಾರ್, ತಾ.ಪಂ. ಇಒ, ಪ್ರವಾಸೋದ್ಯಮ ಇಲಾಖೆಯ ಅಧಿಕಾರಿಗಳು ತಂಡವಾಗಿ ತಮ್ಮ ತಾಲ್ಲೂಕು ವ್ಯಾಪ್ತಿಯಲ್ಲಿರುವ ಪಾರಂಪರಿಕಾ ಸ್ಥಳಗಳ ಸ್ಥಿತಿಗತಿ ಬಗ್ಗೆ ವರದಿ ನೀಡಬೇಕು ಎಂದು ಸೂಚಿಸಿದರು.



ಉದಯವಾಹಿನಿ ಚಿತ್ರ

ಸಮಿತಿ ರಚನೆ ಮಾಡಿದ ನಂತರ ಸಭೆಗಳನ್ನು ನಡೆಸಲಾಗುವುದು. ಆ ಮೂಲಕ ಮ್ಯೂಸಿಯಂ, ಪಾರ್ಕ್ ನಿರ್ಮಾಣ ಮಾಡಿ ಅದರಲ್ಲಿ ವೀರಗಲ್ಲು, ಸ್ಮಾರಕ, ಶಾಸನಗಳನ್ನು ಇರಿಸಲಾಗುವುದು. ಅದರ ಕುರಿತು ವಿದ್ಯಾರ್ಥಿಗಳಿಗೆ, ಸಾರ್ವಜನಿಕರಿಗೆ ಮಾಹಿತಿ ನೀಡಲು ಪ್ರತ್ಯೇಕ ಸಿಬ್ಬಂದಿಯನ್ನು ನೇಮಿಸಲಾಗುವುದು. ಇದಕ್ಕೆ ಅಗತ್ಯವಾಗಿ ಬೇಕಾಗಿರುವ ಐದು ಎಕರೆ ಜಾಗವನ್ನು ಅತಿ ಶೀಘ್ರದಲ್ಲೇ ಗುರುತಿಸಿ ಕೊಡಲಾಗುವುದು ಎಂದು ಭರವಸೆ ನೀಡಿದರು.

**ಸರ್ಕಾರ ಪ್ರಸ್ತಾವ ಕಳುಹಿಸಿಕೊಡಲು ಸೂಚನೆ:** ಜಿಲ್ಲೆಯಲ್ಲಿ ರಾಜ್ಯ ಪುರಾತತ್ವ ಇಲಾಖೆ ವ್ಯಾಪ್ತಿಗೆ 19 ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ ವ್ಯಾಪ್ತಿಗೆ 5 ಸ್ಮಾರಕಗಳನ್ನು ಗುರುತಿಸಲಾಗಿದೆ. ಇವುಗಳಿಗೆ ಸರ್ಕಾರದಿಂದ ಅಧಿಸೂಚನೆ ದೊರೆತಿಲ್ಲ ಎಂದು ಪುರಾತತ್ವ ಇಲಾಖೆ ಅಧಿಕಾರಿ ಕಾವ್ಯಶ್ರೀ ತಿಳಿಸಿದರು. ರಾಜ್ಯ ಪುರಾತತ್ವ ಇಲಾಖೆ ಈಗಾಗಲೇ ಗುರುತಿಸಿರುವ ಸ್ಮಾರಕಗಳನ್ನು ಸಂರಕ್ಷಿಸಲು ಅಧಿಕೃತವಾಗಿ ಅಧಿಸೂಚನೆ ಹೊರಡಿಸಿದ್ದು. ಈ ಕುರಿತು ಸರ್ಕಾರಕ್ಕೆ ಪ್ರಸ್ತಾವ ಕಳುಹಿಸಿ ಅನುಮೋದನೆ ಪಡೆಯಲು ಕ್ರಮ ವಹಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲೆಯ ಹೊಸ ಐತಿಹಾಸಿಕ ತಾಣಗಳನ್ನು ಗುರುತಿಸಿ ಆಕ್ಷೇಪಣೆಗಳನ್ನು ಆಹ್ವಾನಿಸಿದ ನಂತರ ಅವುಗಳನ್ನು ಪಟ್ಟಿಗೆ ಸೇರಿಸಬೇಕು. ಇತಿಹಾಸ ತಜ್ಞರು ಕಾಲೇಜು ವಿದ್ಯಾರ್ಥಿಗಳನ್ನು ಒಳಗೊಂಡಂತೆ ಸ್ಮಾರಕಗಳ ಸಂರಕ್ಷಣೆ ಕುರಿತು ಶೀಘ್ರದಲ್ಲೇ ಜಿಲ್ಲಾ ಮಟ್ಟದ ಸಮಿತಿಯೊಂದನ್ನು ರಚಿಸಲಾಗುವುದು ಎಂದು ಎಂ.ಆರ್.ರವಿ ತಿಳಿಸಿದರು.

> ಜಿಲ್ಲೆಯ ಎಲ್ಲಾ ಕಾಲೇಜು ಮತ್ತು ವಿಶ್ವವಿದ್ಯಾಲಯಗಳಲ್ಲಿರುವ ಹೆರಿಟೇಜ್ ಕ್ಲಬ್‌ಗಳಿಗೆ ಮರುಜೀವ ನೀಡಬೇಕು. ವಿದ್ಯಾರ್ಥಿಗಳಲ್ಲಿ ಐತಿಹಾಸಿಕ ಪ್ರಜ್ಞೆ ಮೂಡಿಸಲು ಕ್ರಮ ಕೈಗೊಳ್ಳಬೇಕು. ದೇವಾಲಯದ ಆವರಣದಲ್ಲಿ ಅಥವಾ ಅಸುಪಾಸಿನಲ್ಲಿ ಅಸುರಕ್ಷಿತವಾಗಿರುವ ವೀರಗಲ್ಲು ಹಾಗೂ ಶಾಸನಗಳನ್ನು ಗುರುತಿಸಿ ಅವುಗಳಿಗೆ ಹಾನಿಯಾಗದಂತೆ ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲು ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು ಮುಂದಾಗಬೇಕು.
> – ಎಂ.ಆರ್.ರವಿ, ಜಿಲ್ಲಾಧಿಕಾರಿ

**ನಶಿಸಿ ಹೋಗುವ ಮುನ್ನ ಸಂರಕ್ಷಿಸಬೇಕು**

ಜಿಲ್ಲೆಯ ಆರು ತಾಲ್ಲೂಕುಗಳಲ್ಲಿ 169 ನ್ಯೂತಲಿಕ್ ಸ್ಥಳಗಳಿವೆ. ಇದಕ್ಕೆ ಸಾಕ್ಷಿಗಳಿದ್ದು ನಶಿಸಿ ಹೋಗುತ್ತಿವೆ ಎಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಇತಿಹಾಸ ವಿಭಾಗದ ಮುಖ್ಯಸ್ಥ ಶಿವಪ್ಪ ಅರಿವು ಬೇಸರ ವ್ಯಕ್ತಪಡಿಸಿದರು. ಇತಿಹಾಸ ಸಾರುವ ಕುರುಹುಗಳು ಇರುವ ಸ್ಥಳಗಳಿಗೆ ಅರಿವು ಭಾರತ ತಂಡ ಭೇಟಿ ನೀಡಿ ಮಾಹಿತಿ ಸಂಗ್ರಹಿ ಅವುಗಳನ್ನೆಲ್ಲ ಸಂಗ್ರಹಿಸಿ ಜನರಿಗೆ ಜಾಗೃತಿ ಮೂಡಿಸಲು ಜಿಲ್ಲಾ ಮ್ಯೂಸಿಯಂ ಅಗತ್ಯವಿದೆ ಎಂದರು. ಇರುವ ದೇವಾಲಯಗಳ ಬಗ್ಗೆ ತಿಳಿಸಲು ಟೂರಿಸ್ಟ್ ಸರ್ಕಿಟ್ ಮಾಡಬೇಕು. ಸಾಹಿತಿ ಸ್ವಾತಂತ್ರ್ಯ ಹೋರಾಟಗಾರರ ಹೆಸರಿನಲ್ಲಿ ಸ್ಮಾರಕ ಸ್ಥಳಗಳ ಕುರಿತು ಮಾಹಿತಿ ತಿಳಿಸುವ ಬೋರ್ಡ್‌ಗಳನ್ನು ಅಲ್ಲಲ್ಲಿ ಅಳವಡಿಸಬೇಕು ಎಂದು ತಿಳಿಸಿದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 09:00 ರಿಂದ 10:30 |
| ಗುಳಿಕ ಕಾಲ | ಬೆಳಿಗ್ಗೆ | 06:00 ರಿಂದ 07:30 |
| ಯಮಗಂಡ ಕಾಲ | ಮಧ್ಯಾಹ್ನ | 01:30 ರಿಂದ 03:00 |

**ಮೇಷ** ಮಕ್ಕಳ ಅವರ ಸಾಧನೆಗಳಿಂದ ನೀವು ಹೆಮ್ಮೆ ಪಡುವಂತೆ ಮಾಡಬಹುದು. ಇದನ್ನು ಒಂದು ವಿಶೇಷ ದಿನವಾಗಿಸಲು ದಯೆ ಮತ್ತು ಪ್ರೀತಿಯ ಸಣ್ಣ ತುಣುಕುಗಳನ್ನು ನೀಡಿ.

**ವೃಷಭ** ಜನರನ್ನು ನಿಮ್ಮಿಷ್ಟದಂತೆ ನಡೆದುಕೊಳ್ಳುವಂತೆ ಒತ್ತಾಯಿಸಬೇಡಿ. ಇತರರ ಬಯಕೆ ಮತ್ತು ಆಸಕ್ತಿಯ ಬಗ್ಗೆ ಯೋಚಿಸಿದಲ್ಲಿ ನಿಮಗೆ ಅನಿಯಮಿತ ಸಂತೋಷ ಬರುತ್ತದೆ.

**ಮಿಥುನ** ವಿಶ್ರಾಂತಿಯ ಸಲುವಾಗಿ ನಿಕಟ ಸ್ನೇಹಿತರೊಂದಿಗೆ ಸ್ವಲ್ಪ ಸಮಯ ಕಳೆಯಿರಿ. ಆಪ್ತ ಸ್ನೇಹಿತನ ಸಹಾಯದಿಂದ ಇಂದು ಕೆಲವು ವ್ಯಾಪಾರಿಗಳಿಗೆ ಹಣದ ಲಾಭವಾಗುವ ಸಾಧ್ಯತೆ ಇದೆ.

**ಕರ್ಕಾಟಕ** ಕೆಲವರು ನಿಮಗೆ ಏನನ್ನಾದರೂ ಕಲಿಯಲು ಬಹಳ ವಯಸ್ಸಾಗಿದೆಯೆಂದು ಭಾವಿಸಬಹುದು, ನಿಮ್ಮ ಪ್ರಖರ ಮತ್ತು ಸಕ್ರಿಯ ಮನಸ್ಸಿನಿಂದ ನೀವು ಹೊಸ ವಿಷಯಗಳನ್ನು ಸುಲಭವಾಗಿ ಕಲಿಯುವಿರಿ.

**ಸಿಂಹ** ಸ್ವಲ್ಪ ವ್ಯಾಯಾಮದೊಂದಿಗೆ ನಿಮ್ಮ ದಿನವನ್ನು ಪ್ರಾರಂಭಿಸಿ, ನಿಮ್ಮ ಬಗ್ಗೆ ನೀವೇ ಒಳ್ಳೆಯ ಅಭಿಪ್ರಾಯ ಇಟ್ಟುಕೊಳ್ಳುವುದು ಮುಖ್ಯ, ಇದನ್ನು ದಿನವೂ ಮಾಡುವುದನ್ನು ರೂಢಿ ಮಾಡಿಕೊಳ್ಳಿ.

**ಕನ್ಯಾ** ನಿಮ್ಮ ಸಂಗಾತಿಯ ಅಹ್ಲಾದಕರ ಮನಸ್ಥಿತಿ ನಿಮ್ಮ ದಿನವನ್ನು ಉಜ್ವಲವಾಗಿಸಬಹುದು. ವ್ಯಾಪರದಲ್ಲಿ ಪ್ರಯೋಜನ ಇಂದು ಅನೇಕ ವ್ಯಾಪಾರಿಗಳ ಮುಖದ ಮೇಲೆ ಸಂತೋಷವನ್ನು ತರಬಹುದು.

**ತುಲಾ** ಪ್ರತಿ ವ್ಯಕ್ತಿಯನ್ನೂ ಆಲಿಸಿ ನಿಮ್ಮ ಸಮಸ್ಯೆಗಳಿಗೆ ಪರಿಹಾರ ದೊರಕಬಹುದು. ಸಮಯ ಮತ್ತು ಹಣದ ಕಾತರ ನೀವು ಮಾಡಬೇಕು ಇಲ್ಲದಿದ್ದರೆ ಮುಂಬರುವ ಸಮಯ ತೊಂದರೆಗಳಿಂದ ತುಂಬಿರಬಹುದು.

**ವೃಶ್ಚಿಕ** ದುಃಖಿತರಾಗಿ ಮತ್ತು ಖಿನ್ನರಾಗಿರಬೇಡಿ. ನೀವು ನಿಮ್ಮ ಸ್ನೇಹಿತರೊಂದಿಗೆ ಎಲ್ಲಿಗಾದರೂ ಸುತ್ತಾಡಲು ಹೋಗುತ್ತಿದ್ದರೆ, ಹಣವನ್ನು ಚೆನ್ನಾಗಿ ಯೋಚಿಸಿ ಖರ್ಚು ಮಾಡಿ. ಹಣದ ನಷ್ಟವಾಗಬಹುದು.

**ಧನಸ್ಸು** ಇಂದು ನೀವು ನಿಮ್ಮ ದಿನವನ್ನು ಎಲ್ಲಾ ಸಂಬಂಧಗಳು ಮತ್ತು ಸಂಬಂಧಿಕರಿಂದ ದೂರವಿರಲು, ನೀವು ಶಾಂತಿಯನ್ನು ಪಡೆಯುವ ಸ್ಥಳದಲ್ಲಿ ಕಳೆಯಲು ಇಷ್ಟಪಡುತ್ತೀರಿ.

**ಮಕರ** ಇಂದು ನೀವು ಚೈತನ್ಯಯುಕ್ತವಾಗಿರುತ್ತೀರಿ , ನೀವೇನೇ ಮಾಡಿದರೂ ಸಾಮಾನ್ಯವಾಗಿ ನೀವು ತೆಗೆದುಕೊಳ್ಳುವ ಅರ್ಧ ಸಮಯದಲ್ಲಿ ಅದನ್ನು ಮಾಡಲು ನಿಮಗೆ ಸಾಧ್ಯವಾಗುತ್ತದೆ.

**ಕುಂಭ** ನಿಮ್ಮ ದಿಟ್ಟ ಮತ್ತು ನಿರ್ಭಯ ಅಭಿಪ್ರಾಯಗಳು ನಿಮ್ಮ ಸ್ನೇಹಿತನ ಆತ್ಮಗೌರವವನ್ನು ಹಾನಿ ಮಾಡಬಹುದು. ನಿಮಗಾಗಿ ಹಣವನ್ನು ಉಳಿಸುವ ನಿಮ್ಮ ಬಯಕೆ ಇಂದು ಪೂರ್ಣಗೊಳ್ಳಬಹುದು.

**ಮೀನ** ನೀವು ಭಯವೆಂಬ ದೈತ್ಯನ ಜೊತೆ ಹೋರಾಡಲು ಸಿದ್ಧವಾಗುತ್ತಿದ್ದ ಹಾಗೆ ನಿಮ್ಮ ಆಲೋಚನೆಗಳನ್ನು ಸಕಾರಾತ್ಮಕವಾಗಿ ರೂಪಿಸಿಕೊಳ್ಳಿ. ಇಲ್ಲದಿದ್ದಲ್ಲಿ ನೀವು ಈ ರಾಕ್ಷಸನಿಗೆ ಒಬ್ಬ ಜಡ ಮತ್ತು ನಿಷ್ಕರುಣೆಯ ಬಲಿಯಾಗುತ್ತೀರಿ.

### ಐದು ರಾಷ್ಟ್ರೀಯ ಹೆದ್ದಾರಿಗಳು ಹಾದು ಹೋಗಿರುವ ಜಿಲ್ಲೆಯಲ್ಲಿ ರಸ್ತೆ ಅಪಘಾತಗಳ ಸಂಖ್ಯೆ ಹೆಚ್ಚಿದೆ

# ಬಜೆಟ್‌ನಲ್ಲಿ ಸೂಪರ್ ಸ್ಪೆಷಾಲಿಟಿಯೇ ಜನರ ನಿರೀಕ್ಷೆ

• ಉದಯವಾಹಿನಿ ಕಾರವಾರ

ಆರೋಗ್ಯ ಸೌಕರ್ಯದಲ್ಲಿ ತೀರಾ ಹಿಂದುಳಿದಿರುವ ಜಿಲ್ಲೆಯಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಿಸಬೇಕು ಎಂಬ ಕೂಗು ಬಲವಾಗಿದ್ದರೂ, ಸರ್ಕಾರ ಮನ್ನಣೆ ನೀಡಿಲ್ಲ. ಈ ಬಾರಿಯಾದರೂ ರಾಜ್ಯ ಸರ್ಕಾರ ಅನುದಾನ ನೀಡಬಹುದು ಎಂಬ ನಿರೀಕ್ಷೆಯಲ್ಲಿ ಜಿಲ್ಲೆಯ ಜನರಿದ್ದಾರೆ.

ಐದು ರಾಷ್ಟ್ರೀಯ ಹೆದ್ದಾರಿಗಳು ಹಾದು ಹೋಗಿರುವ ಜಿಲ್ಲೆಯಲ್ಲಿ ರಸ್ತೆ ಅಪಘಾತಗಳ ಸಂಖ್ಯೆ ಹೆಚ್ಚಿದೆ. ಅಪಘಾತದ ವೇಳೆ ತುರ್ತು ಚಿಕಿತ್ಸೆ ಸಿಗದೆ ಮೃತಪಟ್ಟವರ ಸಂಖ್ಯೆ ಅಧಿಕವಾಗಿದೆ. ಸುಸಜ್ಜಿತ ಆಸ್ಪತ್ರೆ ಸ್ಥಾಪಿಸಲು ಒತ್ತಾಯಿಸಿ ಲೆಕ್ಕವಿಲ್ಲದಷ್ಟು ಪ್ರತಿಭಟನೆ ನಡೆದಿದೆ. 2023ರಲ್ಲಿ ಹಿಂದಿನ ಸರ್ಕಾರದ ಅವಧಿ ಕೊನೆಗೊಳ್ಳುವ ಹೊತ್ತಲ್ಲಿ ಕುಮಟಾದಲ್ಲಿ ಆಸ್ಪತ್ರೆ ಸ್ಥಾಪಿಸಲು ಜಾಗ ಗುರುತಿಸಿ ಜನರನ್ನು ಸಂತೈಸುವ ಪ್ರಯತ್ನ ನಡೆದಿತ್ತು. ಆದರೆ, ಜಾಗ ಬಳಕೆಯೂ ಆಗಿಲ್ಲ. ಆಸ್ಪತ್ರೆ ಸ್ಥಾಪನೆ ಪ್ರಯತ್ನ ಮುಂದೆ ಸಾಗಿಲ್ಲ ಎಂಬ ದೂರು ಜನರದ್ದು.

ಕಾರವಾರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲೇ (ಕ್ರಿಮ್) ಹೆಚ್ಚುವರಿ ಸೌಲಭ್ಯ ಒದಗಿಸಿ, ಹೊಸ ಆಸ್ಪತ್ರೆ ಕಟ್ಟಡ ನಿರ್ಮಿಸಿ. ಸೂಪರ್ ಸ್ಪೆಷಾಲಿಟಿ ಸೌಲಭ್ಯ ಕಲ್ಪಿಸಬೇಕು ಎಂದು ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಲಾಗಿದೆ. ಈಗಿರುವ ಜಿಲ್ಲಾಸ್ಪತ್ರೆಯ ಹಳೆಯ ಕಟ್ಟಡ ತೆರವುಗೊಳಿಸಿ, ಅಲ್ಲಿ 450 ಹಾಸಿಗೆ ಸಾಮರ್ಥ್ಯದ ಕಟ್ಟಡ ನಿರ್ಮಿಸುವುದು. ಆ ಕಟ್ಟಡದಲ್ಲಿ ಹೃದ್ರೋಗ ವಿಭಾಗ (ಕ್ಯಾಥ್ ಲ್ಯಾಬ್), ನರರೋಗ ಚಿಕಿತ್ಸೆ, ಪ್ಲಾಸ್ಟಿಕ್ ಸರ್ಜರಿ, ಟ್ರಾಮಾ ಸೆಂಟರ್ ಸೇರಿದಂತೆ ಸೂಪರ್ ಸ್ಪೆಷಾಲಿಟಿ ಸೌಕರ್ಯ ಕಲ್ಪಿಸಿ, ತಜ್ಞ ವೈದ್ಯರನ್ನು ನೇಮಕ ಮಾಡಬೇಕು. ಇದಕ್ಕಾಗಿ ತಗಲುವ ರೂ.250 ಕೋಟಿ ವೆಚ್ಚ ಅನುದಾನವನ್ನು ಬಜೆಟ್‌ನಲ್ಲಿ ಘೋಷಿಸಬೇಕು ಎಂದು ಮುಖ್ಯಮಂತ್ರಿ ಬಳಿ ಮನವಿ ಮಾಡಿದ್ದೇನೆ' ಎನ್ನುತ್ತಾರೆ ಶಾಸಕ ಸತೀಶ ಸೈಲ್.ಶಿರಸಿಯ ಪಂಡಿತ ಸಾರ್ವಜನಿಕ ಆಸ್ಪತ್ರೆ ಮೇಲ್ದರ್ಜೆಗೇರಿದ್ದರೂ ಎಂಆರ್‌ಐ, ಸಿಟಿ ಸ್ಕ್ಯಾನ್ ಸೇರಿದಂತೆ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಅನುದಾನ ನೀಡಿಲ್ಲ. ಇದಕ್ಕೆ ಬಜೆಟ್‌ನಲ್ಲಿ ಅನುದಾನ ಮೀಸಲಿರಿಸಬೇಕು' ಎನ್ನುತ್ತಾರೆ ಸಾಮಾಜಿಕ ಕಾರ್ಯಕರ್ತ ಅನಂತಮೂರ್ತಿ ಹೆಗಡೆ.

ಜಿಲ್ಲೆಯ 83 ಪ್ರಾಥಮಿಕ ಆರೋಗ್ಯ ಕೇಂದ್ರಗಳ ಪೈಕಿ 20ಕ್ಕೂ ಹೆಚ್ಚು ಕಡೆಗಳಲ್ಲಿ ವೈದ್ಯರ ಹುದ್ದೆ ಖಾಲಿ ಇದೆ. ತಾಲ್ಲೂಕು ಆಸ್ಪತ್ರೆಗಳಲ್ಲಿಯೂ 34 ತಜ್ಞ ಹುದ್ದೆಗಳ ಭರ್ತಿಗೆ ಆರೋಗ್ಯ ಇಲಾಖೆ ಹರಸಾಹಸಪಡುತ್ತಿದೆ. ಆಸ್ಪತ್ರೆಗಳಲ್ಲಿ ಕಟ್ಟಡ, ಯಂತ್ರೋಪಕರಣಗಳ ಲಭ್ಯತೆ ಇವೆ. ಆದರೆ, ಚಿಕಿತ್ಸೆ ನೀಡಲು ತಜ್ಞ ವೈದ್ಯರು ಜಿಲ್ಲೆಗೆ ಬರುತ್ತಿಲ್ಲ. ಗಡಿಭಾಗದ ಪ್ರದೇಶ ಎಂಬುದು ಒಂದೆಡೆಯಾದರೆ, ಗುಡ್ಡಗಾಡುಗಳ ನಡುವೆ ಹಳ್ಳಿಗಳಿರುವುದು ಹೆಚ್ಚಿದೆ. ಇಂತಹ ಪ್ರದೇಶಕ್ಕೆ ವೈದ್ಯರ ನೇಮಕಕ್ಕೆ ಸರ್ಕಾರ ವಿಶೇಷ ನಿಯಮ ರೂಪಿಸಬೇಕು' ಎಂಬುದು ಹಿರಿಯ ವೈದ್ಯಾಧಿಕಾರಿಯೊಬ್ಬರ ಅಭಿಪ್ರಾಯ.


ಉದಯವಾಹಿನಿ ಚಿತ್ರ

**ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಕೆ**

**ವೈದ್ಯರ ಹುದ್ದೆ ಖಾಲಿ**

**ಏಮ್ಸ್ ಸ್ಥಾಪನೆಗೆ ಆಗ್ರಹ ಹೆಚ್ಚಲಿ**

**ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಸ್ಥಾಪನೆಗೆ ಜಿಲ್ಲೆಯಲ್ಲಿ ಒತ್ತಡ ಹೆಚ್ಚುತ್ತಿದೆ. ಆದರೆ ಅಖಿಲ ಭಾರತೀಯ ವೈದ್ಯಕೀಯ ವಿಜ್ಞಾನ ಸಂಸ್ಥೆ (ಏಮ್ಸ್) ಸ್ಥಾಪನೆಗೆ ಒತ್ತಡ ಹೇರುವ ಕೆಲಸ ನಡೆದಿಲ್ಲ. ಈ ದಿಶೆಯಲ್ಲಿ ಪ್ರಯತ್ನ ಸಾಗಿದರೆ ಫಲ ಸಿಗಬಹುದು ಎಂಬ ಆಶಾವಾದ ಇದೆ' ಎನ್ನುತ್ತಾರೆ ಹಿರಿಯ ವೈದ್ಯ ಶಿರಸಿಯ ಡಾ.ರವಿಕಿರಣ ಪಟವರ್ಧನ. ಏಮ್ಸ್ ಸ್ಥಾಪನೆ ಕೇಂದ್ರ ಸರ್ಕಾರದ ಜವಾಬ್ದಾರಿ. ಅದಕ್ಕೆ ಜಾಗ ಒದಗಿಸುವುದು ರಾಜ್ಯ ಸರ್ಕಾರದ ಕೆಲಸ. ಏಮ್ಸ್ ಸ್ಥಾಪನೆಯಾದರೆ ದೇಶದಲ್ಲಿ ಉನ್ನತ ಮಟ್ಟದ ವೈದ್ಯಕೀಯ ಸೌಲಭ್ಯ ತಜ್ಞ ವೈದ್ಯರ ನೇಮಕ ಆಗಲಿದೆ. ನೌಕಾನೆಲೆ ಅಣು ವಿದ್ಯುತ್ ಸ್ಥಾವರದಂತಹ ಬೃಹತ್ ರಾಷ್ಟ್ರೀಯ ಯೋಜನೆಗಳಿರುವ ಜಿಲ್ಲೆಯಲ್ಲಿ ಒತ್ತಾಯ ಹೆಚ್ಚಿದರೆ ಕೇಂದ್ರ ಸರ್ಕಾರ ಏಮ್ಸ್ ಸ್ಥಾಪನೆಗೆ ಮನಸ್ಸು ಮಾಡಬಹುದು. ಏಮ್ಸ್‌ನಿಂದ ಜಿಲ್ಲೆಯ ಜನರಿಗೆ ಆರೋಗ್ಯ ಸೌಕರ್ಯ ಸಿಗುವ ಜೊತೆಗೆ ಜಿಲ್ಲೆಯ ಅಭಿವೃದ್ಧಿಗೂ ಪೂರಕವಾಗಲಿದೆ' ಎಂದು ಅವರು ಹೇಳುತ್ತಾರೆ.**

> **ಕ್ರಿಮ್ಸ್‌ನಲ್ಲಿಯೇ ಹೆಚ್ಚುವರಿ ಸೌಕರ್ಯ ಒದಗಿಸಿದರೆ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣಗೊಳ್ಳಲಿದೆ. ಬಜೆಟ್‌ನಲ್ಲಿ ಅನುದಾನ ಸಿಗದಿದ್ದರೆ ಹುದ್ದೆಗೆ ರಾಜೀನಾಮೆ ನೀಡುತ್ತೇನೆ ಎಂದು ಎಚ್ಚರಿಸಿದ್ದೇನೆ. -ಸತೀಶ ಸೈಲ್ ಶಾಸಕ**

> **ಬೃಹತ್ ಯೋಜನೆಗಳನ್ನು ಉತ್ತರ ಕನ್ನಡ ಮೇಲೆ ಹೇರುವ ಸರ್ಕಾರ ಜಿಲ್ಲೆಯ ಜನರು ಕೇಳುತ್ತಿರುವ ಆರೋಗ್ಯ ಸೌಕರ್ಯ ಒದಗಿಸಲು ಬಜೆಟ್‌ನಲ್ಲಿ ಅನುದಾನ ಘೋಷಿಸಲಿ.**
> **-ಮಾಸ್ತಪ್ಪ ನಾಯ್ಕ ಹೊನ್ನಾವರ ಸಾಮಾಜಿಕ ಕಾರ್ಯಕರ್ತ**

## ಪಡಿತರ ಅಕ್ಕಿಯ ಅಕ್ರಮ ದಂಧೆ ಮೇಲೆ ಮತ್ತೆ ಎಸಿ ದಾಳಿ


• ಉದಯವಾಹಿನಿ ಬಳ್ಳಾರಿ

ಸಾರ್ವಜನಿಕರಿಗೆ ವಿತರಣೆಯಾಗಬೇಕಿದ್ದ 50 ಕಿಲೋದ 523 ಚೀಲ ಪಡಿತರ ಅಕ್ಕಿಯನ್ನು ಗುಜರಾತಿಗೆ ಸಾಗಾಣೆ ಮಾಡಲು ಹೊರಟ್ಟಿದ್ದನ್ನು ಬಳ್ಳಾರಿ ಉಪ ವಿಭಾಗದ ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ. ಅವರು ನನ್ನೆ ರಾತ್ರಿ ತಡೆಹಿಡಿದಿದ್ದಾರೆ. ನಗರದ ಎಸ್.ಎಲ್.ಎನ್ ಮಾಲ್ ಬಳಿ ಇರುವ ದರೂರು ಪುಲ್ಲಯ್ಯ ಕಾಂಪೌಂಡ್ ಒಳ ಆವರಣದಲ್ಲಿ ಪಡಿತರ ಅಕ್ಕಿಯನ್ನು ಬಳ್ಳಾರಿಯ ವಾಹನಗಳ ಮೂಲಕ ತಂದು ಗುಜರಾತ್ ಮೂಲದ ಸರಕು ಸಾಗಣೆ ಲಾರಿಯಲ್ಲಿ ಲೋಡ್ ಮಾಡಲಾಗುತ್ತಿತ್ತು.

ಹಗರಿಬೊಮ್ಮನಹಳ್ಳಿಯಿಂದ ಬಂದಿದ್ದ 10 ಜನ ಹಮಾಲಿಗಳು ಚಿಕ್ಕ ಲಾರಿಯಿಂದ ದೊಡ್ಡ ಲಾರಿಗೆ ಲೋಡ್ ಮಾಡುತ್ತಿದ್ದರು. ಇವರಿಗೆ ಶ್ರೀಧರ್ ಎಂಬಾತ 750 ಕೂಲಿ ನೀಡಿ ಈ ದಂಧೆ ಮಾಡಿಸುತ್ತಿದ್ದನಂತೆ. ಈ ಬಗ್ಗೆ ತಮಗೆ ದೊರೆತ ಮಾಹಿತಿಯಿಂದ ಸ್ವತಃ ರಾಜೇಶ್ ಅವರು ತಲೆಗೆ ಟವಕ್ ಕಟ್ಟಿಕೊಂಡು ಬೈಕ್ ನಲ್ಲಿ ಬಂದು ಈ ದಂಧೆಗೆ ಬ್ರೇಕ್ ಹಾಕಿದ್ದಾರೆ. ಇಬ್ಬರು ಗುಜರಾತ್ ಮೂಲದ ಚಾಲಕರು, ಬಳ್ಳಾರಿ ಮೂಲದ ಒಬ್ಬ ಚಾಲಕ, 5 ಹಮಾಲಿಗಳನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿದ್ದಾರೆ. ಇನ್ನೂ ಒಬ್ಬ ಚಾಲಕ ಮತ್ತು 5 ಹಮಾಲಿಗಳು ಸ್ಥಳದಿಂದ ಪರಾರಿಯಾಗಿದ್ದಾರೆ.

ವಿಚಾರಣೆ ವೇಳೆ ಸದರಿ ಅಕ್ಕಿ ಚೀಲಗಳನ್ನು ಅಕ್ರಮವಾಗಿ ಗುಜರಾತ್ ರಾಜ್ಯಕ್ಕೆ ತೆಗೆದುಕೊಂಡು ಹೋಗಲು ತಯಾರಿ ಮಾಡುತ್ತಿರುವುದಾಗಿ ಗುಜರಾತ್ ಮೂಲದ ಚಾಲಕ ಹೇಳಿದ್ದಾನೆ.

ಸ್ಥಳಕ್ಕೆ ಎಪಿಎಂಸಿ ಪೊಲೀಸ್ ಕರೆಸಿ ಪ್ರಕರಣ ದಾಖಲಿಸಿದೆ. ಈ ಹಿಂದೆ ಸಹ ಬಳ್ಳಾರಿ ನಗರದ ಲಾಲಾ ಕಮಾನ್ ನಲ್ಲಿ ನಡೆಯುತ್ತಿದ್ದ ಅಕ್ರಮವಾಗಿ ಪಡಿತರ ಅಕ್ಕಿಯ ಸಾಗಾಣೆಯ ದಂಧೆ ಕೊರರಿಗೆ ಬಿಸಿ ಮುಟ್ಟಿಸಿದ್ದರು. ಅಲ್ಲದೆ ಹಗರಿ ನದಿಯಿಂದ ಅಕ್ರಮವಾಗಿ ಎತ್ತಿನಬಂಡಿಗಳಲ್ಲಿ ಮರಳು ಸಾಗಾಸುವ ದಂಧೆ ಕೋಖು ಮೇಲೂ ರಾಜೇಶ್ ಅವರು ದಾಳಿ ನಡೆಸಿ ಪ್ರಕರಣ ದಾಖಲಿಸಿದ್ದರು.


ಉದಯವಾಹಿನಿ ಚಿತ್ರ

**ಗುಜರಾತ್ ಮೂಲದ ಸರಕು ಸಾಗಣೆ ಲಾರಿಯಲ್ಲಿ ಲೋಡ್**

## ರಸ್ತೆ ಸುರಕ್ಷತೆ ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿ

• ಉದಯವಾಹಿನಿ ಹುಮನಾಬಾದ

ರಸ್ತೆ ಸುರಕ್ಷತೆ ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ ಎಂದು ಸ್ಥಳೀಯ ಜೆಎಂಎಫ್‌ಸಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಪ್ರಶಾಂತ ಬಾದವಾಡಗಿ ಹೇಳಿದರು.

ಪಟ್ಟಣದ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ (ಕೆಕೆಆರ್‌ಟಿಸಿ) ಬಸ್ ಡಿಪೋದಲ್ಲಿ ತಾಲ್ಲೂಕಾ ಕಾನೂನು ಸೇವಾ ಸಮಿತಿ, ವಕೀಲರ ಸಂಘ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಹಾಗೂ ಭಾಲ್ಕಿ ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ ಆಶ್ರಯದಲ್ಲಿ ರಸ್ತೆ ಸುರಕ್ಷತಾ ಮುಂಜಾಗ್ರತಾ ಅಭಿಯಾನ ಹಾಗೂ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು,

ಸಂಚಾರ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದರಿಂದ ಅಪಘಾತಗಳನ್ನು ತಡೆಯಲು ಸಾಧ್ಯವಾಗುತ್ತದೆ. ಜೀವ ಅಮೂಲ್ಯವಾದದ್ದು, ಕ್ಷಣಿಕ ಅಜಾಗರೂಕತೆಯಿಂದ ಕುಟುಂಬಗಳು ಅನಾಥವಾಗುವ ಪರಿಸ್ಥಿತಿ ಉಂಟಾಗುತ್ತದೆ. ಆದ್ದರಿಂದ ವಾಹನ ಚಾಲಕರು ಹಾಗೂ ಸಾರ್ವಜನಿಕರು ಎಚ್ಚರಿಕೆಯಿಂದ ನಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.


ಉದಯವಾಹಿನಿ ಚಿತ್ರ

ಭಾಲ್ಕಿ ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿ ಮಹಮ್ಮದ ಜಾಫರ ಸಾದೀಕ ಮಾತನಾಡಿ, ಚಾಲನಾ ಪರವಾನಗಿ, ವಾಹನದ ದಾಖಲೆಗಳು, ಹೆಲ್ಮೆಟ್ ಹಾಗೂ ಸೀಟ್ ಬೆಲ್ಟ್ ಬಳಕೆ ಕಡ್ಡಾಯವಾಗಿದ್ದು, ನಿಯಮ ಉಲ್ಲಂಘನೆ ಮಾಡಿದರೆ ಕಾನೂನು ಕ್ರಮ ಅನಿವಾರ್ಯ. ರಸ್ತೆ ಅಪಘಾತ ತಡೆಗೆ ಸಾರಿಗೆ ಇಲಾಖೆ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ಎಂದರು.

ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ವಿಜಯಕುಮಾರ ನಾತೆ ಮಾತನಾಡಿ, ರಸ್ತೆ ಅಪಘಾತ ಪ್ರಕರಣಗಳಲ್ಲಿ ಕಾನೂನು ಸೇವಾ ಸಮಿತಿಯಿಂದ ದೊರೆಯುವ ಉಚಿತ ಕಾನೂನು ನೆರವು, ಪರಿಹಾರ ಪಡೆಯುವ ವಿಧಾನ ಹಾಗೂ ಜನರಿಗೆ ಇರುವ ಹಕ್ಕುಗಳ ಬಗ್ಗೆ ಮಾಹಿತಿ ನೀಡಿದರು.

## ಮತದಾರರ ಪ್ರತಿಜ್ಞಾವಿಧಿ ಸ್ವೀಕಾರ

• ಉದಯವಾಹಿನಿ ಚಿತ್ರದುರ್ಗ

ನಗರದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಚೇರಿಯಲ್ಲಿ ಶುಕ್ರವಾರ ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ ಜಿಲ್ಲಾ ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್ ಅವರು ವಾರ್ತಾ ಇಲಾಖೆ ಸಿಬ್ಬಂದಿ ಹಾಗೂ ಪತ್ರಕರ್ತರಿಗೆ ಮತದಾರರ ಪ್ರತಿಜ್ಞಾವಿಧಿ ಬೋಧಿಸಿದರು. ಈ ಸಂದರ್ಭದಲ್ಲಿ ವಾರ್ತಾ ಇಲಾಖೆಯ ಪಿ.ಎಂ. ವೇಣುಗೋಪಾಲ್, ಎಂ.ಜೆ.ಬೋರೇಶ, ಆರ್.ತಿಮ್ಮಶೆಟ್ಟಿ, ನಿವೃತ್ತ ನೌಕರ ಎಸ್.ಚಂದ್ರಶೇಖರ್, ಅಪ್ರೆಂಟಿಸ್ ತರಬೇತಾರ್ಥಿ ಮುದ್ದು ಕಿರಣ, ಪತ್ರಕರ್ತರಾದ ಗೌನಹಳ್ಳಿ ಗೋವಿಂದಪ್ಪ, ಎಸ್.ಟಿ. ನವೀನ್ ಕುಮಾರ್, ಎಸ್.ಬಿ. ರವಿಕುಮಾರ್ ಉಗ್ರಾಣ, ವೀರೇಶ ವಿ.ಅಪ್ಪು, ಓಂಕಾರಮೂರ್ತಿ, ಆನಂದ ಆಲಘಟ್ಟ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದು, ಪ್ರತಿಜ್ಞಾ ವಿಧಿ ಸ್ವೀಕರಿಸಿದರು.


ಉದಯವಾಹಿನಿ ಚಿತ್ರ

## ಕಸ ಕಂಡರೆ ಅಧಿಕಾರಿ ಅಮಾನತು: ಡಿಸಿ

• ಉದಯವಾಹಿನಿ ಚಿಕ್ಕಮಗಳೂರು

ನಗರದಲ್ಲಿ ಸ್ವಚ್ಛತೆ ಕಾಪಾಡಲು ಒಂದು ವಾರಗಳ ಅವಕಾಶ ನೀಡಲಾಗಿದೆ. ನಂತರ ಎಲ್ಲಿಯೇ ಕಸ ಕಂಡರೂ ಆ ಭಾಗದ ಆಹಾರ ನಿರೀಕ್ಷರನ್ನು ಅಮಾನತು ಮಾಡುವ ಎಚ್ಚರಿಕೆ ನೀಡಲಾಗಿದೆ ಎಂದು ಜಿಲ್ಲಾಧಿಕಾರಿ ಎನ್.ಎಂ.ನಾಗರಾಜ್ ತಿಳಿಸಿದರು. ಹಲವೆಡೆ ಕಸ ಬಿದ್ದಿರುವುದನ್ನು ನಾನೇ ಮೊಬೈಲ್ ಫೋನ್‌ನಲ್ಲಿ ಫೋಟೊ ತೆಗೆದು ನಗರಸಭೆ ಆಯುಕ್ತರಿಗೆ ಕಳಿಸಿದ್ದೇನೆ. ಚಿಕ್ಕ ನಗರವನ್ನು ಸ್ವಚ್ಛವಾಗಿ ಇಟ್ಟುಕೊಳ್ಳುವುದು ನಗರಸಭೆ ಜವಾಬ್ದಾರಿ. ಅದನ್ನು ಮಾಡದಿದ್ದರೆ ಕ್ರಮ ಕೈಗೊಳ್ಳಲಾಗುವುದು ಎಂದು ಪತ್ರಿಕಾಗೋಷ್ಠಿಯಲ್ಲಿ ಹೇಳಿದರು.

ಜಿಲ್ಲೆಗೆ ಸಾವಿರಾರು ಪ್ರವಾಸಿಗರು ಬರುತ್ತಾರೆ. ಇಂತಹ ಸ್ವಚ್ಛಂದ ಪರಿಸರದಲ್ಲಿ ಸ್ವಚ್ಛತೆಗೆ ಆದ್ಯತೆ ನೀಡದಿರುವುದು ಸರಿಯಲ್ಲ. ಮನೆ ಮನೆಯಿಂದ ಸರಿಯಾಗಿ ಕಸ ಸಂಗ್ರಹ ಮಾಡದ ಕಾರಣ ರಸ್ತೆ ಬದಿಗೆ ಜನ ಎಸೆಯುತ್ತಿದ್ದಾರೆ. ಕಸ ಸಂಗ್ರಹ ಕೆಲಸ ಸಮರ್ಪಕವಾಗಿ ಆಗಬೇಕೆಂದು ಆಯುಕ್ತರಿಗೆ ಸೂಚನೆ ನೀಡಿದ್ದೇನೆ' ಎಂದು ತಿಳಿಸಿದರು.

## ಕೋಳಿ ಅಂಕ: ಪೊಲೀಸರ ದಾಳಿ

• ಉದಯವಾಹಿನಿ ಕಾರ್ಕಳ

ಮನೆಯ ಸಮೀಪದ ಅಡಿಕೆ ತೋಟದ ಮಧ್ಯೆ ಶಾಮಿಯಾನ ಹಾಕಿ ಕುರ್ಚಿ, ಟೇಬಲ್ ಇರಿಸಿ ಸಾರ್ವಜನಿಕರನ್ನೂ ಸೇರಿಸಿ ಕೋಳಿಗಳ ಕಾಲುಗಳಿಗೆ ಬಾಳುಕತ್ತಿ ಕಟ್ಟಿ, ಹಣ ಪಣವಾಗಿ ಇಟ್ಟು ನಲ್ಲೂರು ಗ್ರಾಮದಲ್ಲಿ ಕೋಳಿ ಅಂಕ ನಡೆಸುತ್ತಿದ್ದ ಸಂದರ್ಭ ಪೊಲೀಸರು ದಾಳಿ ನಡೆಸಿದ್ದಾರೆ. ಗ್ರಾಮದ ಬಂಗರೋಡಿ ಎಂಬಲ್ಲಿ ಉದಯ ಶೆಟ್ಟಿ ಕೋಳಿ ಅಂಕ ನಡೆಸುತ್ತಿದ್ದರು. ಕಾರ್ಕಳ ಗ್ರಾಮಾಂತರ ಠಾಣೆಯ ಪಿಎಸ್‌ಐ ಸುಂದರ, ತಂಡ ಖಚಿತ ಮಾಹಿತಿ ಆಧರಿಸಿ ದಾಳಿ ನಡೆಸಿ ಶಿರ್ವದ ರವಿ, ಸತೀಶ್, ಸ್ಟೀಫನ್, ಕೊಂಡಮಲ ಗ್ರಾಮದ ಅಡಿಗಪ್ಪ, ಅಪ್ಪು ಸಂಪ್ಯ, ನಗರ ಉದ್ಯಾವರ, ಸಂದೀಪ್ ಉದ್ಯಾವರ ಅವರನ್ನು ಬಂಧಿಸಿ 4 ಕೋಳಿ, ರೂ.2.5 ಲಕ್ಷ ಮೌಲ್ಯದ ಕಾರು, ರೂ3 ಸಾವಿರ ನಗದು, ಇತರ ಸಲಕರಣೆಗಳನ್ನು ವಶಪಡಿಸಿಕೊಂಡು ಪ್ರಕರಣ ದಾಖಲಿಸಿದ್ದಾರೆ.

## ಭಾಷೆಯ ಆತ್ಮವೇ ಜನರ ಆತ್ಮ: ಪ್ರೊ.ಬಟ್ಟು ಸತ್ಯನಾರಾಯಣ


ಉದಯವಾಹಿನಿ ಚಿತ್ರ

• ಉದಯವಾಹಿನಿ ಕಲಬುರಗಿ

ಭಾಷೆಯ ಆತ್ಮವೇ ಜನರ ಆತ್ಮ. ಭಾಷೆ ನಮ್ಮ ಇತಿಹಾಸ, ಸಂಸ್ಕೃತಿ ಮತ್ತು ಜಗತ್ತಿನ ದೃಷ್ಟಿಕೋನವನ್ನು ನಿರ್ಧರಿಸುತ್ತದೆ. ಭಾಷೆ ಮತ್ತು ನಾಗರಿಕತೆ ನಾಣ್ಯದ ಎರಡು ಮುಖಗಳಂತೆ. ಸಂಸ್ಕೃತಿಯಾಗಿ ಭಾಷೆ ನಮ್ಮನ್ನು ಒಂದಾಗಿಸುತ್ತದೆ. ವಿವಿಧ ಹಬ್ಬಗಳಲ್ಲಿ ಬಳಸುವ ಭಾಷೆಗಳು ಭಾರತೀಯ ಸಂಸ್ಕೃತಿಯನ್ನು ಪ್ರತಿಬಿಂಬಿಸುತ್ತವೆ. ಈ ವಿಶಿಷ್ಟ ಲಕ್ಷಣ ಪಾಶ್ಚಾತ್ಯ ದೇಶಗಳಲ್ಲಿ ಕಾಣಿಸುವುದಿಲ್ಲ. ಪ್ರಾದೇಶಿಕ ಭಾಷೆಗಳು ನಮ್ಮಲ್ಲಿ ಏಕತೆಯನ್ನು ನಿರ್ಮಿಸಲು ಸಹಕಾರಿಯಾಗುತ್ತವೆ. ಇದು ರಾಷ್ಟ್ರೀಯ ಶಿಕ್ಷಣ ನೀತಿ-2020 ರಲ್ಲಿಯೂ ಬೆಂಬಲಿತವಾಗಿದೆ ಎಂದು ಕುಲಪತಿ ಪ್ರೊ.ಬಟ್ಟು ಸತ್ಯನಾರಾಯಣ ಹೇಳಿದರು.

**ಸಿಯುಕೆಯಲ್ಲಿ ಭಾರತೀಯ ಭಾಷಾ ಪರಿವಾರ:** ಭಾಷಾ ವಿಜ್ಞಾನದಲ್ಲಿ ಹೊಸ ರೂಪರೇಖೆ ವಿಷಯ ಕುರಿತು ನಡೆದ ಎರಡು ದಿನಗಳ ರಾಷ್ಟ್ರೀಯ ಸಮ್ಮೇಳನವನ್ನುದ್ದೇಶಿಸಿ ಅವರು ಮಾತನಾಡಿದರು. ಮುಖ್ಯ ಭಾಷಣಕಾರರಾದ ಹೈದರಾಬಾದ್ ವಿಶ್ವವಿದ್ಯಾಲಯದ ನಿವೃತ್ತ ಭಾಷಾವಿಜ್ಞಾನ ಪ್ರಾಧ್ಯಾಪಕರಾದ ಪ್ರೊ. ಜೆ. ಪ್ರಭಾಕರ ರಾವ್ ಅವರು, ಮಾತನಾಡಿ, ಭಾಷೆಗಳ ಕ್ಲಿಷ್ಟತೆಯಿಂದ ಸಮಾಜ ಸಂಕಷ್ಟ ಅನುಭವಿಸುತ್ತದೆ. ಆದರೆ ವಸಾಹತುಶಾಹಿ ಕಾಲದಿಂದಲೂ ಭಾರತದಲ್ಲಿ ಭಾಷಾ ಸಂಕಷ್ಟ ಕಂಡುಬಂದಿಲ್ಲ. ಆದ್ದರಿಂದ ಎಲ್ಲಾ ಭಾಷೆಗಳು ಭಾರತದಲ್ಲಿ ಸಹಜವಾಗಿ ಅಸ್ತಿತ್ವದಲ್ಲಿವೆ. ಭಾಷಾ ವೈವಿಧ್ಯತೆ ದೇಶದ ಜಿಡಿಪಿಗೆ ಬೆಂಬಲ ನೀಡುತ್ತದೆ. ಇದು ರಾಷ್ಟ್ರದ ಸಂಸ್ಕೃತಿ ಮತ್ತು ಶಕ್ತೀಕರಣಕ್ಕೂ ಸಹಕಾರಿಯಾಗಿದೆ. ಭಾಷಾ ವೈವಿಧ್ಯತೆಯ ಮೂಲಕ ಏಕತೆಯಲ್ಲಿ ವೈವಿಧ್ಯತೆಯನ್ನು ಉತ್ತೇಜಿಸುವುದರಲ್ಲಿ ಭಾರತ ಶ್ರೇಷ್ಠ ಉದಾಹರಣೆ ಎಂದು ಹೇಳಿದರು. ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಪ್ರಾಧ್ಯಾಪಕರಾದ ಪ್ರೊ. ಭೀಮರಾವ್ ಪಾಂಡ ಭೋಸಲೆ ಅವರು ತಮ್ಮ ಕಲ್ಪನಾ ಪತ್ರಿಕೆಯಲ್ಲಿ, ವಸಾಹತು ಕಾಲವು ಆಳ್ವಿಕಾರರ ಸಾಮ್ರಾಜ್ಯಶಾಹಿ ಕಾಲವಾಗಿತ್ತು. ಆಕ್ರಮಣಕಾರರು ನಮ್ಮಹಿತಾಸಕ್ತಿಗೆ ವಿರುದ್ಧವಾಗಿ ಭಾಷೆಗಳನ್ನು ನಾಶಮಾಡಿದರು, ಶೋಷಿಸಿದರು ಮತ್ತು ಅಪಮೌಲ್ಯಗೊಳಿಸಿದರು. ಭಾರತವು ಸಮಗ್ರತೆಯನ್ನು ಪ್ರತಿನಿಧಿಸುತ್ತದೆ. ಏಕತೆಯಲ್ಲಿ ವೈವಿಧ್ಯತೆಯ ನಮ್ಮ ಉನ್ನತ ಮೌಲ್ಯಗಳನ್ನು ಪುನರ್ ವ್ಯಾಖ್ಯಾನ ಮಾಡುವ ಕಾಲ ಇದು. ನಮ್ಮ ಭಾಷಾ ಸಂಸ್ಕೃತಿಯ ಪುನರ್ ವ್ಯಾಖ್ಯಾನವು ಎರಡನೇ ಪುನರುತ್ಥಾನ ಮತ್ತು ಎರಡನೇ ಪ್ರಬೋಧನ ಕಾಲವಾಗುತ್ತದೆ. ಈ ಪ್ರಬೋಧನ ಯುಗದ ಮೂಲಕ ಭಾರತ ನ್ಯಾಯ, ಧರ್ಮನಿರಪೇಕ್ಷತೆ, ಸ್ವಾತಂತ್ರ್ಯ ಮತ್ತು ಮುಕ್ತಿಯ ಸಂದೇಶದೊಂದಿಗೆ ಏಕತೆಯನ್ನು ಸಾರುತ್ತದೆ ಎಂದು ಹೇಳಿದರು.

## ಅನುದಾನ ಸದ್ಬಳಕೆಯಾದಾಗ ಮಾತ್ರ ಅಭಿವೃದ್ಧಿ ಸಾಧ್ಯ

• ಉದಯವಾಹಿನಿ ಬಾಗಲಕೋಟೆ

ಜಿಲ್ಲಾ ಮಾನವ ಅಭಿವೃದ್ಧಿ ವರದಿಯನ್ನು ನಿಖರವಾಗಿ ನೀಡಿದಾಗ ಮಾತ್ರ ಮುಂದಿನ ಅಭಿವೃದ್ಧಿಗೆ ದಿಕ್ಸೂಚಿಯಾಗಲಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು. ಜಿಲ್ಲಾ ಪಂಚಾಯಿತಿ ಸಭಾಭವನದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಮಾನವ ಅಭಿವೃದ್ಧಿ ವರದಿ ಹಾಗೂ ಸಮಗ್ರ ಸುಸ್ಥಿರ ಜಿಲ್ಲಾ ಅಭಿವೃದ್ಧಿ ದೂರದೃಷ್ಟಿ ಯೋಜನೆ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ಅಂಕಿ-ಅಂಶಗಳೇ ಮುಂದಿನ ಯೋಜನೆಗಳಿಗೆ ಪೂರಕವಾಗಲಿದ್ದು, ನಿಖರವಾದ ವರದಿಗೆ ಸಂಬಂಧಿಸಿದ ಇಲಾಖೆಗಳು ಮಾಹಿತಿ ಒದಗಿಸಬೇಕು ಎಂದರು. ಇಲಾಖೆಗಳಿಗೆ ಬಿಡುಗಡೆಯಾದ ಅನುದಾನ ಯಾವುದೇ ರೀತಿಯಲ್ಲಿ ವ್ಯರ್ಥವಾಗಬಾರದು. ಸಂಪೂರ್ಣ ಅನುದಾನ ಸದ್ಬಳಕೆಯಾಗಬೇಕು ಎಂದು ಸೂಚನೆ ನೀಡಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ, ಜಿಲ್ಲೆಯ ಪ್ರಸ್ತುತ ಸ್ಥಿತಿ ಹಾಗೂ ಮುಂದಿನ ಐದು ವರ್ಷಗಳ ಅಗತ್ಯತೆಗಳನ್ನು ಗಮನದಲ್ಲಿಟ್ಟುಕೊಂಡು ಸರಿಯಾದ ದತ್ತಾಂಶ ಸಂಗ್ರಹಿಸಬೇಕು. ಜಿಲ್ಲೆಯ ಸಾಮಾಜಿಕ ಶೈಕ್ಷಣಿಕ, ಆರೋಗ್ಯ, ಕೃಷಿ, ಕುಡಿಯುವ ನೀರು ಸೇರಿದಂತೆ ವಿವಿಧ ಕ್ಷೇತ್ರಗಳ ಬಗ್ಗೆ ನಿಖರ ಮಾಹಿತಿ ಸಂಗ್ರಹಿಸಿ ವರದಿ ತಯಾರಿಸಿದರೆ ಮಾತ್ರ ಜನರ ಜೀವನ ಮಟ್ಟವನ್ನು ಸುಧಾರಿಸಲು ಮತ್ತು ತಲಾ ಆದಾಯ ಹೆಚ್ಚಿಸಲು ಸಹಕಾರಿಯಾಗಿದೆ ಎಂದರು. ಮಾನವ ಅಭಿವೃದ್ಧಿ ವರದಿ ಆಧಾರದ ಮೇಲೆ ಗ್ರಾಮ, ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯಿತಿಗಳಿಗೆ ಅನುದಾನ ಹಂಚಿಕೆ ಆಗುತ್ತದೆ. ಅನುದಾನ ಸರಿಯಾಗಿ ಸದ್ಬಳಕೆಯಾದಾಗ ಮಾತ್ರ ಅಭಿವೃದ್ಧಿ ಸಾಧ್ಯ. ತಾಯಂದಿರ ಮರಣ, ಶಿಶು ಮರಣ, ಶಾಲೆ ಬಿಟ್ಟ ಮಕ್ಕಳ ಸಂಖ್ಯೆಗಳನ್ನು ನಿಖರವಾಗಿ ದಾಖಲಿಸಬೇಕು ಎಂದರು. ಗ್ರಾಮ ಪಂಚಾಯಿತಿ ಮಟ್ಟದಲ್ಲಿ 17 ಮಾನದಂಡಗಳನ್ನು ಗುರುತಿಸಿ ನೀಡಲಾಗಿದೆ. ಅದರ ಆಧಾರದ ಮೇಲೆ ವರದಿ ತಯಾರಿಸಬೇಕು. ಜೀವನದ ಗುಣಮಟ್ಟ ಶಿಕ್ಷಣ ಮತ್ತು ಆರೋಗ್ಯವನ್ನು ಮೂಲ ಮಾನದಂಡವಾಗಿ ಪರಿಗಣಿಸಲಾಗುತ್ತದೆ ಎಂದರು ತಿಳಿಸಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಉಪಅರಣ್ಯ ಸಂರಕ್ಷಣಾಧಿಕಾರಿ ಸ್ವಪ್ನಿಲ್ ಆಹೇರಿ, ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಎನ್.ವೈ. ಬಸರಿಗಿಡದ, ಮುಖ್ಯ ಲೆಕ್ಕಾಧಿಕಾರಿ ಸಿದ್ರಾಮೇಶ್ವರ ಉಕ್ಕಲಿ, ಎ.ಬಿ. ಅಲ್ಲಮಪ್ರಭು ಇದ್ದರು.


ಉದಯವಾಹಿನಿ ಚಿತ್ರ

> **ಸಮಗ್ರ ಹಾಗೂ ಸುಸ್ಥಿರ ಜಿಲ್ಲಾ ಅಭಿವೃದ್ಧಿ ವರದಿಗಾಗಿ 117 ಅಂಶಗಳ ಮಾಹಿತಿ ಸಂಗ್ರಹಿಸಲಾಗುತ್ತಿದೆ. ಸ್ಥಳೀಯ ಸಂಪನ್ಮೂಲಗಳ ಬಳಕೆ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಆರ್ಥಿಕ ಬೆಳವಣಿಗೆಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ.**
> **-ಬಸವರಾಜ ಎಸ್. ಯೋಜನಾ ಇಲಾಖೆಯ ಮಾನವ ಅಭಿವೃದ್ಧಿ ವಿಭಾಗದ ಜಂಟಿ ಕಾರ್ಯದರ್ಶಿ**

# ಗತವೈಭವ ಸಾರುವ ಹಂಪಿ ಉತ್ಸವಕ್ಕೆ ಹಂಪಿ ನೆಲ ಅಣಿ

### ಸಚಿವರು ಸೇರಿದಂತೆ ಅಧಿಕಾರಿಗಳ ಸಭೆಗಳು ನಡೆದಿದ್ದು, ಹಂಪಿಯ ನೆಲದಲ್ಲಿ ಸಿದ್ಧತೆ ಕೆಲಸಗಳು ಶುರುವಾಗಿವೆ

• ಉದಯವಾಹಿನಿ ವಿಜಯನಗರ

ನಾಡಿನ ಕಲೆ, ಸಂಸ್ಕೃತಿ, ಸಾಹಿತ್ಯ ಹಾಗೂ ವಿಜಯನಗರ ಸಾಮ್ರಾಜ್ಯದ ಗತವೈಭವ ಸಾರುವ ಹಂಪಿ ಉತ್ಸವಕ್ಕೆ ಹಂಪಿ ನೆಲ ಅಣಿಯಾಗುತ್ತಿದೆ. ಲಾಂಛನ ಬಿಡುಗಡೆಗೊಳಿಸಿ, ಸಿದ್ಧತಾ ಕೆಲಸಗಳನ್ನು ಶುರು ಮಾಡಿರುವ ಜಿಲ್ಲಾಡಳಿತ ಹಂಪಿಯ ಬೀದಿಗಳಲ್ಲಿ ಸ್ವಚ್ಛತೆ, ಜಮೀನುಗಳಲ್ಲಿ ಪಾರ್ಕಿಂಗ್ ಹಾಗೂ ಗಾಯತ್ರಿ ಪೀಠ ವೇದಿಕೆ ನಿರ್ಮಿಸಲಿರುವ ಸ್ಥಳಗಳಲ್ಲಿ ತಯಾರಿ ನಡೆಸಿದೆ.

ಜಿಲ್ಲಾ ಉಸ್ತುವಾರಿ ಸಚಿವರು, ಅಧಿಕಾರಿಗಳ ಜತೆ ಸಭೆ ನಡೆಸಿ ವೇದಿಕೆ ಸ್ಥಳ ಪರಿಶೀಲಿಸಿದ್ದಾರೆ. ಜಿಲ್ಲಾಧಿಕಾರಿಗಳು ಸಹ ಅಧಿಕಾರಿಗಳ ಜತೆ ಸಭೆ ನಡೆಸಿ, ಅಗತ್ಯ ತಯಾರಿಗೆ ಸೂಚನೆ ನೀಡಿದ್ದು, ಸಂಘ-ಸಂಸ್ಥೆಗಳ ಮುಖಂಡರು ಮತ್ತು ಕಲಾವಿದರ ಜತೆಗೂ ಸಭೆ ನಡೆಸಿ ಅಭಿಪ್ರಾಯ ಸಂಗ್ರಹಿಸಿ, ಉತ್ಸವಕ್ಕೆ ಸಜ್ಜಾಗುತ್ತಿದ್ದಾರೆ. ಒಟ್ಟಾರೆ ಹಂಪಿ ಉತ್ಸವಕ್ಕೆ ಜಿಲ್ಲಾಡಳಿತ ಸಿದ್ಧತೆಗಳನ್ನು ಆರಂಭಿಸಿದೆ. ಸಚಿವರು ಸೇರಿದಂತೆ ಅಧಿಕಾರಿಗಳ ಸಭೆಗಳು ನಡೆದಿದ್ದು, ಹಂಪಿಯ ನೆಲದಲ್ಲಿ ಸಿದ್ಧತೆ ಕೆಲಸಗಳು ಶುರುವಾಗಿವೆ.

**ಸಿಎಂ ಚಾಲನೆ:** ಫೆ.13ರಂದು ಸಿಎಂ ಸಿದ್ದರಾಮಯ್ಯ ಉತ್ಸವಕ್ಕೆ ಚಾಲನೆ ನೀಡಲಿದ್ದು, 14, 15 ರಂದು ಹಂಪಿಯಲ್ಲಿ ವೈಭವ ಮನೆಮಾಡಲಿದೆ. ಗಾಯತ್ರಿ ಪೀಠದ ಬಳಿ ವಿಶಾಲ ಪ್ರದೇಶದಲ್ಲಿ ಪ್ರಧಾನ ವೇದಿಕೆ ನಿರ್ಮಿಸಲಿದ್ದು, ಜೆಸಿಬಿ ಮತ್ತು ಯಂತ್ರಗಳಿಂದ ಸ್ವಚ್ಛತೆ ಕೆಲಸ ನಡೆದಿದೆ. ಹಂಪಿ ರಸ್ತೆ, ಸ್ಮಾರಕಗಳ ಪ್ರದೇಶ, ವೇದಿಕೆ ಸ್ಥಳ, ಪಾರ್ಕಿಂಗ್ ಮತ್ತು ಕಮಲಾಪುರ, ಹವಾಮಾ ಕಚೇರಿ ಹಿಂಭಾಗ, ಕಮಲಾಪುರ ಕೆರೆ, ಕಡ್ಡಿರಾಂಪುರ ಕಡೆಗಳಲ್ಲಿ ಸಿದ್ಧತೆ ನಡೆದಿದೆ.

**ಪಾರ್ಕಿಂಗ್‌ಗೆ ಸ್ಥಳ ನಿಗದಿ:** ಹಂಪಿ ಉತ್ಸವಕ್ಕೆ ರಾಜ್ಯದ ನಾನಾ ಜಿಲ್ಲೆಗಳು ಸೇರಿದಂತೆ ನೆರೆಯ ರಾಜ್ಯಗಳಿಂದಲೂ ಜನರು ವೈಭವವನ್ನು ಕಣ್ತುಂಬಿಕೊಳ್ಳಲು ಆಗಮಿಸುತ್ತಾರೆ. ಈ ವೇಳೆ ವಾಹನ ಸಂಚಾರ ಸಮಸ್ಯೆಯಿಂದಲೇ ಜನದಟ್ಟಣೆ ನಿರ್ವಹಣೆ ಮತ್ತು ವಾಹನಗಳ ಪಾರ್ಕಿಂಗ್‌ಗೆ ಜಾಗದ ವ್ಯವಸ್ಥೆ ಮಾಡಿಕೊಂಡಿದ್ದು, ಗುತ್ತಿ ಪ್ರದೇಶ, ಪ್ರಧಾನ ವೇದಿಕೆ ಸೇರಿದಂತೆ ನಾನಾ ಕಡೆ ಪಾರ್ಕಿಂಗ್‌ಗೆ ಸ್ಥಳ ನಿಗದಿಗೊಳಿಸಲಾಗಿದೆ.

- **ಫೆ.13ರಿಂದ ಮೂರು ದಿನ ಉತ್ಸವ**
- **ಗತವೈಭವ ಸಾರಲು ಅಣಿಯಾಗುತ್ತಿದೆ ಹಂಪಿ**
- **ಹಂಪಿಯ ಬೀದಿಗಳಲ್ಲಿ ಸ್ವಚ್ಛತೆ, ಜಮೀನುಗಳಲ್ಲಿ ಪಾರ್ಕಿಂಗ್ ವ್ಯವಸ್ಥೆ**

**ಹಂಪಿಯ ಬೀದಿಗಳಲ್ಲಿ ಸ್ವಚ್ಛತೆ**


ಉದಯವಾಹಿನಿ ಚಿತ್ರ

### ಕಾರ್ಮಿಕರಿಂದ ಸ್ವಚ್ಛತೆ

**ಉತ್ಸವದ ಹಿನ್ನೆಲೆ ಹಂಪಿಯ ಬೀದಿಗಳನ್ನು ಸ್ವಚ್ಛಗೊಳಿಸುವ ಕೆಲಸ ನಡೆಯುತ್ತಿದೆ. ಮುಖ್ಯ ವೇದಿಕೆ ನಿರ್ಮಾಣಗೊಳ್ಳುತ್ತಿರುವ ಪ್ರದೇಶದಲ್ಲಿ ಮೂರ್ನಾಲ್ಕು ದಿನಗಳಿಂದ ಸ್ವಚ್ಛತೆ ಮಾಡಲಾಗುತ್ತಿದೆ. ಹಂಪಿ ಪರಿಸರದಲ್ಲಿ ರಸ್ತೆ ಬದಿಗಳಲ್ಲಿ ಕಸ ತೆಗೆದು ಸ್ವಚ್ಛ ಮಾಡಲಾಗುತ್ತಿದೆ. ಉಳಿದ ಕಡೆ ವೇದಿಕೆ ನಿರ್ಮಾಣ ಸ್ಥಳ, ಮಹಾನವಮಿ ದಿಬ್ಬ, ರಾಣಿಸ್ನಾನ ಗೃಹ, ಕಮಲಮಹಲ್ ಕಡೆಗಳಲ್ಲಿ ಸ್ವಚ್ಛತೆ ಮಾಡಲಾಗುತ್ತಿದೆ.**

> **ವಿಜಯನಗರ ಸಾಮ್ರಾಜ್ಯದ ಗತವೈಭವ ಸಾರುವ ಹಂಪಿ ಉತ್ಸವವನ್ನು ಅಚ್ಚುಕಟ್ಟು ಮತ್ತು ಅದ್ದೂರಿಯಿಂದ ಆಚರಿಸುವ ನಿಟ್ಟಿನಲ್ಲಿ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿದೆ. ಹಂಪಿಯಲ್ಲಿ ಸ್ವಚ್ಛತೆ ಕೆಲಸ ನಡೆಯುತ್ತಿದೆ. ಯಾವುದೇ ಲೋಪವಾಗದಂತೆ ಸಿದ್ಧತೆ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಲಾಗಿದೆ -ಕವಿತಾ ಎಸ್.ಮನ್ನಿಕೇರಿ,**
> **ಜಿಲ್ಲಾಧಿಕಾರಿ, ವಿಜಯನಗರ.**

# ರಾಹುಲ್‌ಗಾಂಧಿ ವಿರುದ್ಧ ಸಿಟ್ಟು: ಹೈಕಮಾಂಡ್ ಸಭೆ ಬಹಿಷ್ಕರಿಸಲು ತರೂರ್ ನಿರ್ಧಾರ

**ತಿರುವಂತನಪುರಂ:** ರಾಹುಲ್ ಗಾಂಧಿ ಅಪಮಾನದಿಂದ ಕೋಪಗೊಂಡಿರುವ ಸಂಸದ ಶಶಿ ತರೂರ್ ಅವರು ಕೇರಳ ವಿಧಾನಸಭಾ ಚುನಾವಣೆಗೆ ಪಕ್ಷದ ಸಿದ್ಧತೆಗಳ ಕುರಿತು ಚರ್ಚಿಸಲು ಕಾಂಗ್ರೆಸ್ ಹೈಕಮಾಂಡ್ ಕರೆಯಲಿರುವ ಸಭೆಯಲ್ಲಿ ಭಾಗವಹಿಸದಿರಲು ತೀರ್ಮಾನಿಸಿದ್ದಾರೆ. ಕೊಚ್ಚಿಯಲ್ಲಿ ನಡೆದ ಮಹಾಪಂಚಾಯತ್ ಕಾರ್ಯಕ್ರಮದಲ್ಲಿ ಪಕ್ಷದ ಸಂಸದ ರಾಹುಲ್ ಗಾಂಧಿ ನನ್ನನ್ನು ಅವಮಾನಿಸಿದ್ದಾರೆ ಎಂದು ಆರೋಪಿಸಿ ತರೂರ್ ಈ ನಿರ್ಧಾರ ತೆಗೆದುಕೊಂಡಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಪ್ರಮುಖ ಚರ್ಚಾ ಸಭೆಯಲ್ಲಿ ತರೂರ್ ಅವರ ಗೈರುಹಾಜರಿಯು ರಾಜ್ಯ ಚುನಾವಣೆಗೆ ಮುಂಚಿತವಾಗಿ ಪಕ್ಷದೊಳಗಿನ ಆಂತರಿಕ ಘರ್ಷಣೆಯನ್ನು ಸೂಚಿಸುತ್ತದೆ. ಸಭೆಗೆ ಹಾಜರಾಗದಿರಲು ಅವರ ನಿರ್ಧಾರಕ್ಕೆ ಕಾರಣವಾದ ಕಾಂಗ್ರೆಸ್‌ನ ರಾಜ್ಯ, ಕೇಂದ್ರ ನಾಯಕತ್ವದ ಬಗ್ಗೆ ಅವರು ಪ್ರಸ್ತುತ ಅಸಮಾಧಾನಗೊಂಡಿದ್ದಾರೆ ಎಂದು ಕಾಂಗ್ರೆಸ್ ಮೂಲಗಳು ಸೂಚಿಸಿವೆ.ತರೂರ್ ತಮ್ಮ ಆಪ್ತರಿಗೆ ತಮ್ಮ ನಿರಾಶೆಯನ್ನು ತಿಳಿಸಿದ್ದು, ಈ ಘಟನೆಯು ಪಕ್ಷದೊಳಗಿನ ಅವರ ಕೊಡುಗೆಗಳನ್ನು ನಿರ್ಲಕ್ಷಿಸುವ ವಿಶಾಲ ಮಾದರಿಯನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದ್ದಾರೆ. ಕೊಚ್ಚಿ ಕಾರ್ಯಕ್ರಮದಲ್ಲಿ, ಆಸನ ಮತ್ತು ಭಾಷಣ ವೇಳಾಪಟ್ಟಿಯಲ್ಲಿ ಸಮಸ್ಯೆಗಳು ಉದ್ಭವಿಸಿದವು. ತರೂರ್ ಅವರಿಗೆ ರಾಹುಲ್ ಗಾಂಧಿ ಮಾತ್ರ ತಮ್ಮ ನಂತರ ಮಾತನಾಡುತ್ತಾರೆ ಎಂದು ಹೇಳಲಾಗಿತ್ತು, ಆದರೆ ನಂತರ ಇತರ ನಾಯಕರು ಸಹ ಮಾತನಾಡಿದರು.

ವ್ಯವಸ್ಥೆಗಳ ಕುರಿತಾದ ಗೊಂದಲವನ್ನು ಸಾರ್ವಜನಿಕ ಅವಹೇಳನವೆಂದು ಪರಿಗಣಿಸಲಾಗಿದೆ, ವಿಶೇಷವಾಗಿ ಕಾಂಗ್ರೆಸ್‌ನಲ್ಲಿ ತರೂರ್ ಅವರ ಹಿರಿತನವನ್ನು ಪರಿಗಣಿಸಿ.ಆರಂಭಿಕ ಸೂಚನೆಯ ಹೊರತಾಗಿಯೂ, ರಾಹುಲ್ ಗಾಂಧಿ ಆಗಮನದ ನಂತರ ಪಕ್ಷದ ಹಲವಾರು ಇತರ ನಾಯಕರು ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು. ಸ್ಥಾಪಿತ ಯೋಜನೆಯಿಂದ ಈ ವಿಚಲನವು ತರೂರ್ ಅವರ ಅತೃಪ್ತಿಯನ್ನು ಹೆಚ್ಚಿಸಿದೆ ಎಂದು ವರದಿಯಾಗಿದೆ. ಈ ಘಟನೆಯು ಪಕ್ಷದ ಕಾರ್ಯಕರ್ತರಲ್ಲಿ ಆಂತರಿಕ ಶಿಸ್ತು ಮತ್ತು ಹಿರಿಯ ನಾಯಕರ ಮೇಲಿನ ಗೌರವದ ಬಗ್ಗೆ ಚರ್ಚೆಗೆ ನಾಂದಿ ಹಾಡಿದೆ. ಮಹಾಪಂಚಾಯತ್‌ನಲ್ಲಿ ಮಾಡಿದ ಭಾಷಣದಲ್ಲಿ ರಾಹುಲ್ ಗಾಂಧಿ ತರೂರ್ ಅವರ ಹೆಸರನ್ನು ಉಲ್ಲೇಖಿಸಲಿಲ್ಲ. ಪಕ್ಷ, ರಾಜ್ಯದಲ್ಲಿ ತರೂರ್ ಅವರ ಪ್ರಾಮುಖ್ಯತೆಯನ್ನು ಗಮನಿಸಿದರೆ ಈ ಲೋಪವು ಗಮನಾರ್ಹವಾಗಿದೆ ಎಂದು ವೀಕ್ಷಕರು ಗಮನಿಸಿದ್ದಾರೆ.



## ಬಾಂಗ್ಲಾದೇಶ ಫಸ್ಟ್ ಘೋಷಣೆ ಮೊಳಗಿಸಿ ರಾಷ್ಟ್ರೀಯ ಚುನಾವಣಾ ಅಖಾಡಕ್ಕೆ ಇಳಿದ ತಾರಿಕ್

# ದಿಲ್ಲಿನೂ ಬೇಡ, ರಾವಲ್ಪಿಂಡಿನೂ ಬೇಡ



**ಬಾಂಗ್ಲಾದೇಶ:** ರಾಷ್ಟ್ರೀಯತಾವಾದಿ ಪಕ್ಷದ ಅಧ್ಯಕ್ಷ ತಾರಿಕ್ ರೆಹಮಾನ್ ಫೆಬ್ರವರಿ 12 ರಂದು ನಡೆಯಲಿರುವ ಚುನಾವಣೆಗೆ ತಮ್ಮ ಪಕ್ಷದ ಚುನಾವಣಾ ಪ್ರಚಾರವನ್ನು ಢಾಕಾದಿಂದ ಸುಮಾರು 242 ಕಿಲೋಮೀಟರ್ ದೂರದಲ್ಲಿರುವ ಸಿಲ್ಹೆಟ್‌ನ ಆಲಿಯಾ ಮದರಸಾ ಮೈದಾನದಲ್ಲಿ ಅಧಿಕೃತವಾಗಿ ಪ್ರಾರಂಭಿಸಿದ್ದಾರೆ. ಮಾಜಿ ಪ್ರಧಾನಿ ಮತ್ತು ಬಿಎನ್‌ಪಿ ನಾಯಕಿ ಖಲೀದಾ ಜಿಯಾ ನಿಧನ ಹೊಂದಿದ ಬಳಿಕ, ಅವರ ಪುತ್ರ, ತಾರಿಕ್ ರೆಹಮಾನ್ ಅವರನ್ನು ಬಾಂಗ್ಲಾದೇಶ ಪ್ರಧಾನಮಂತ್ರಿ ಹುದ್ದೆಗೆ ಪ್ರಮುಖ ಸ್ಪರ್ಧಿಯಾಗಿ ವ್ಯಾಪಕವಾಗಿ ನೋಡಲಾಗುತ್ತಿದೆ.

ಬಾಂಗ್ಲಾದೇಶದಿಂದ ಗಡಿಪಾರಾಗಿ ಬರೋಬ್ಬರಿ 17 ವರ್ಷಗಳ ಯುನೈಟೆಡ್ ಕಿಂಗ್‌ಡಮ್‌ನಲ್ಲಿ ನೆಲೆಸಿದ್ದ ತಾರಿಕ್ ರೆಹಮಾನ್, ಕಳೆದ ತಿಂಗಳಷ್ಟೇ ಬಾಂಗ್ಲಾದೇಶಕ್ಕೆ ಮರಳಿದ್ದಾರೆ. ಇದೀಗ ತಾಯಿ ನಿಧನದ ಬಳಿಕ ಬಿಎನ್‌ಪಿಯ ಜವಾಬ್ದಾರಿ ವಹಿಸಿಕೊಂಡಿರುವ ತಾರಿಕ್ ರೆಹಮಾನ್, ಮುಂದಿನ ತಿಂಗಳು ನಡೆಯಲಿರುವ ಬಾಂಗ್ಲಾದೇಶ ರಾಷ್ಟ್ರೀಯ ಚುನಾವಣೆಗಾಗಿ ಪಕ್ಷವನ್ನು ಸಜ್ಜುಗೊಳಿಸುತ್ತಿದ್ದಾರೆ. ತಾರಿಕ್ ರೆಹಮಾನ್ ದೇಶದ ಜ್ವಲಂತ ಸಮಸ್ಯೆಗಳ ಕುರಿತು ತಮ್ಮ ಚುನಾವಣಾ ಭಾಷಣಗಳಲ್ಲಿ ಪ್ರಸ್ತಾಪಿಸುತ್ತಿದ್ದಾರೆ.

ಡಿಸೆಂಬರ್ 2025ರಲ್ಲಿ ಬಾಂಗ್ಲಾದೇಶಕ್ಕೆ ಮರಳಿದ ತಾರಿಕ್ ರೆಹಮಾನ್, ಬಾಂಗ್ಲಾದೇಶದ ರಾಜಧಾನಿ ಢಾಕಾದಲ್ಲಿ ಭರ್ಜರಿ ರೋಡ್ ಶೋ ನಡೆಸಿದ್ದರು. ಇದೀಗ ತಮ್ಮ ಮೊದಲ ಚುನಾವಣಾ ಭಾಷಣದಲ್ಲಿ ನಿರುದ್ಯೋಗ, ರೈತರ ಸಮಸ್ಯೆಗಳು ಮತ್ತು ಕುಟುಂಬ ಕಾರ್ಡ್ ಯೋಜನೆಗಳ ಬಗ್ಗೆ ಚರ್ಚಿಸುತ್ತಿದ್ದಾರೆ. ಈ ಮೂಲಕ ತಾವೊಬ್ಬ ಜನಸಾಮಾನ್ಯರ ನಾಯಕ ಎಂದು ಬಿಂಬಿಸಿಕೊಳ್ಳಲು ತಾರಿಕ್ ರೆಹಮಾನ್ ಪ್ರಯತ್ನಿಸುತ್ತಿದ್ದಾರೆ. ಬಾಂಗ್ಲಾದೇಶ ಫಸ್ಟ್ ಘೋಷಣೆ ಮೊಳಗಿಸುವ ಮೂಲಕ, ಬಿಎನ್‌ಪಿ ನಾಯಕ ಯುವ ಸಮುದಾಯವನ್ನು ಸೆಳೆಯಲು ಪ್ರಯತ್ನಿಸುತ್ತಿದ್ದಾರೆ.

**ಪಾಕ್‌ಗೆ ಚಿಂತೆ:** ಮುಹಮ್ಮದ್ ಯೂನಸ್ ನೇತೃತ್ವದ ಬಾಂಗ್ಲಾದೇಶ ಮಧ್ಯಂತರ ಸರ್ಕಾರ ಪಾಕಿಸ್ತಾನದೊಂದಿಗೆ ಉತ್ತಮ ಸಂಬಂಧ ಹೊಂದಿದೆ. ಪರಸ್ಪರ ಮಿಲಿಟರಿ ಸಹಕಾರದ ಬಗ್ಗೆಯೂ ಉಭಯ ರಾಷ್ಟ್ರಗಳು ಚರ್ಚೆ ಮಾಡುತ್ತಿವೆ.



**ಭಾರತಕ್ಕೆ ಪರೋಕ್ಷ ಟಾಂಗ್**

ಇನ್ನು ತಾರಿಕ್ ರೆಹಮಾನ್ ತಮ್ಮ ಚುನಾವಣಾ ಭಾಷಣಗಳಲ್ಲಿ ಪರೋಕ್ಷವಾಗಿ ಭಾರತಕ್ಕೆ ಟಾಂಗ್ ನೀಡುತ್ತಿದ್ದಾರೆ. ಮಾಜಿ ಪ್ರಧಾನಿ ಮತ್ತು ಸದ್ಯ ಭಾರತದಲ್ಲಿ ಆಶ್ರಯ ಪಡೆದಿರುವ ಶೇಖ್ ಹಸೀನಾ ಅವರ ಆಡಳಿತವನ್ನು ಟೀಕಿಸುತ್ತಾ, ನೆರೆಯ ದೇಶಗಳಿಗೆ ಶರಣಾಗುವ ಮೂಲಕ ಶೇಖ್ ಹಸೀನಾ ಬಾಂಗ್ಲಾದೇಶದ ಗೌರವವನ್ನು ಮಣ್ಣುಪಾಲು ಮಾಡಿದ್ದಾರೆ ಎಂದು ಕಿಡಿಕಾರಿದ್ದಾರೆ. ಶೇಖ್ ಹಸೀನಾ ಅವರ ಆಡಳಿತಾವಧಿಯಲ್ಲಿ ಭಾರತ ಮತ್ತು ಬಾಂಗ್ಲಾದೇಶ ನಡುವಿನ ಸಂಬಂಧ ಉತ್ತಮವಾಗಿತ್ತು ಎಂಬುದು ಇಲ್ಲಿ ಉಲ್ಲೇಖನೀಯ.

**ಹೇಗಿದೆ ಬಾಂಗ್ಲಾ ಸ್ಥಿತಿ?**

ಬಾಂಗ್ಲಾದೇಶದಲ್ಲಿ ಸದ್ಯಕ್ಕೆ ಶಾಂತವಾಗಿದೆ ಎಂದು ಕಂಡುಬರುತ್ತಿದೆಯಾದರೂ, ಅಲ್ಲಲ್ಲಿ ಹಿಂದೂಗಳ ಕ್ರೂರ ಹತ್ಯೆಯ ವರದಿಗಳು ಬರುತ್ತಿವೆ. ದೇಶ ಸದ್ಯಕ್ಕೆ ರಾಷ್ಟ್ರೀಯ ಚುನಾವಣೆಗಳಿಗೆ ಸಜ್ಜಾಗುತ್ತಿದ್ದು, ವಿವಿಧ ರಾಜಕೀಯ ಪಕ್ಷಗಳ ಕಾರ್ಯಕರ್ತರು ಚುನಾವಣೆಗೆ ತಯಾರಿ ನಡೆಸಿದ್ದಾರೆ. ಶೇಕ್ ಹಸೀನಾ ಅವರ ಆವಾಮಿ ಲೀಗ್ ಪಕ್ಷಕ್ಕೆ ಈ ಬಾರಿಯ ಚುನಾವಣೆಯಲ್ಲಿ ಸ್ಪರ್ಧಿಸುವ ಅವಕಾಶ ನೀಡಲಾಗಿಲ್ಲ. ಹೀಗಾಗಿ ತಾರಿಕ್ ರೆಹಮಾನ್ ಅವರ ಬಿಎನ್‌ಪಿ ಪಕ್ಷದ ಬಗ್ಗೆ ಬಾಂಗ್ಲಾದೇಶದಲ್ಲಿ ಭಾರೀ ಚರ್ಚೆ ನಡೆಯುತ್ತಿದೆ.

ಇತ್ತೀಚಿಗೆ ಬಾಂಗ್ಲಾದೇಶದಲ್ಲಿ ನಡೆದ ಭಾರತ ವಿರೋಧಿ ಪ್ರತಿಭಟನೆಗಳ ಸಂದರ್ಭದಲ್ಲಿ, ಪಾಕಿಸ್ತಾನಿ ನಾಯಕರು ಬಾಂಗ್ಲಾದೇಶಕ್ಕೆ ಪಾಕಿಸ್ತಾನ ಸೇನೆ ನೆರವು ನೀಡುವ ಕುರಿತು ಹೇಳಿಕೆಗಳನ್ನು ನೀಡಿದ್ದರು.

ಆದರೆ ಚುನಾವಣೆಗಳ ಬಳಿಕ ತಾರಿಕ್ ರೆಹಮಾನ್ ಅಧಿಕಾರಕ್ಕೆ ಬಂದರೆ, ಈ ಸಂಬಂಧ ಹದಗೆಡಬಹುದು ಎಂಬ ಚಿಂತೆ ಪಾಕಿಸ್ತಾನವನ್ನು ಕಾಡುತ್ತಿದೆ. ಬಾಂಗ್ಲಾದೇಶದಲ್ಲಿ ಎರಡು ವರ್ಷಗಳ ನಂತರ ರಾಷ್ಟ್ರೀಯ ಚುನಾವಣೆಗಳು ನಡೆಯುತ್ತಿವೆ.2024ರ ಚುನಾವಣೆಯಲ್ಲಿ ಗೆದ್ದಿದ್ದ ಶೇಖ್ ಹಸೀನಾ ಅವರನ್ನು, ವಿದ್ಯಾರ್ಥಿ ಚಳುವಳಿಯ ಮೂಲಕ ಅಧಿಕಾರದಿಂದ ಪದಚ್ಯುತಗೊಳಿಸಲಾಗಿತ್ತು.

ಇದರಿಂದಾಗಿ ಮುಹಮ್ಮದ್ ಯೂನಸ್ ನೇತೃತ್ವದ ಮಧ್ಯಂತರ ಸರ್ಕಾರವು ದೇಶವನ್ನು ಮುನ್ನಡೆಸುತ್ತಿದೆ. ಫೆಬ್ರವರಿಯಲ್ಲಿ ನಡೆಯಲಿರುವ ಚುನಾವಣೆಗಳು ಪೂರ್ಣಗೊಂಡ ನಂತರ, ಬಾಂಗ್ಲಾದೇಶ ಮತ್ತೆ ಚುನಾಯಿತ ಸರ್ಕಾರವನ್ನು ನೋಡಲಿದೆ.

## ಮಿನಿ ನ್ಯೂಸ್

### ಜಾರ್ಖಂಡ್ ಪೊಲೀಸರ ಕಾರ್ಯಾಚರಣೆ 15 ಮಾವೋವಾದಿಗಳು ಬಲಿ

**ನವದೆಹಲಿ:** ಪಶ್ಚಿಮ ಸಿಂಗ್‌ಭೂಮ್‌ನಲ್ಲಿ ಕೇಂದ್ರ ಮೀಸಲು ಪೊಲೀಸ್ ಪಡೆ, ಜಾರ್ಖಂಡ್ ಪೊಲೀಸರು ನಡೆಸುತ್ತಿರುವ ಜಂಟಿ ಕಾರ್ಯಾಚರಣೆಯು ಪ್ರದೇಶವನ್ನು ಮಾವೋವಾದ ಮುಕ್ತಗೊಳಿಸುವ ಅಭಿಯಾನದಲ್ಲಿ ಪ್ರಮುಖ ಯಶಸ್ಸನ್ನು ಸಾಧಿಸಿದೆ ಎಂದು ಕೇಂದ್ರಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. 1 ಕೋಟಿ ರೂ. ಬಹುಮಾನ ಹೊಂದಿದ್ದ ಕೇಂದ್ರ ಸಮಿತಿಯ ಉನ್ನತ ಮಾವೋ ಸದಸ್ಯರನ್ನು ತಟಸ್ಥಗೊಳಿಸಲಾಗಿದೆ. ಮಾವೋವಾದಿ ಕೇಂದ್ರ ಸಮಿತಿಯ ಸದಸ್ಯನನ್ನು ಅವರು ಪತಿರಾಮ್ ಮಾಂಝಿ ಎಂದು ಗುರುತಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅಮಿತ್ ಶಾ, ಶುಕ್ರವಾರ ಪಶ್ಚಿಮ ಸಿಂಗ್‌ಭೂಮ್‌ನಲ್ಲಿ, ಸಿಆರ್‌ಪಿಎಫ್ ಮತ್ತು ಜಾರ್ಖಂಡ್ ಪೊಲೀಸರು ನಡೆಸುತ್ತಿರುವ ಜಂಟಿ ಕಾರ್ಯಾಚರಣೆಯು ಎನ್‌ಕೌಂಟರ್‌ಗಳ ಮೂಲಕ ಪ್ರದೇಶವನ್ನು ನಕ್ಸಲರಿಂದ ಮುಕ್ತಗೊಳಿಸುವ ಅಭಿಯಾನದಲ್ಲಿ ಪ್ರಮುಖ ಯಶಸ್ಸನ್ನು ಸಾಧಿಸಿದೆ, ಇದುವರೆಗೆ 1 ಕೋಟಿ ಮೌಲ್ಯದ ಕುಖ್ಯಾತ ಬೌಂಟಿ-ವಾಂಟೆಡ್ ನಕ್ಸಲ್ ಕೇಂದ್ರ ಸಮಿತಿ ಸದಸ್ಯ ಅನಲ್ ಅಲಿಯಾಸ್ ಪತಿರಾಮ್ ಮಾಂಝಿ ಮತ್ತು ಇತರ 15 ನಕ್ಸಲರನ್ನು ತಟಸ್ಥಗೊಳಿಸಲಾಗಿದೆ ಎಂದು ಹೇಳಿದರು.

ಎಡಪಂಥೀಯ ಉಗ್ರವಾದವನ್ನು ಕೊನೆಗೊಳಿಸುವ ಕೇಂದ್ರದ ಸಂಕಲ್ಪವನ್ನು ಪುನರುಚ್ಚರಿಸಿದ ಗೃಹ ಸಚಿವರು, ದಶಕಗಳಿಂದ ಭಯ ಮತ್ತು ಭಯೋತ್ಪಾದನೆಗೆ ಸಮಾನಾರ್ಥಕವಾಗಿರುವ ನಕ್ಸಲಿಸಂ ಅನ್ನು ಮಾರ್ಚ್ 31, 2026 ರ ಮೊದಲು ನಿರ್ಮೂಲನೆ ಮಾಡಲು ನಾವು ಬದ್ಧರಾಗಿದ್ದೇವೆ ಎಂದು ಹೇಳಿದರು. ಹಿಂಸೆ, ಭಯೋತ್ಪಾದನೆ ಮತ್ತು ಶಸ್ತ್ರಾಸ್ತ್ರಗಳಿಗೆ ಸಂಬಂಧಿಸಿದ ಸಿದ್ಧಾಂತವನ್ನು ತ್ಯಜಿಸಿ, ಅಭಿವೃದ್ಧಿ ಮತ್ತು ನಂಬಿಕೆಯ ಮುಖ್ಯವಾಹಿನಿಗೆ ಸೇರಲು ಉಳಿದ ನಕ್ಸಲರಿಗೆ ನಾನು ಮತ್ತೊಮ್ಮೆ ಮನವಿ ಮಾಡುತ್ತೇನೆ ಎಂದು ಶಾ ಹೇಳಿದರು. 1 ಕೋಟಿ ರೂ. ಬಹುಮಾನ ಘೋಷಿಸಲಾದ ಪ್ರಮುಖ ನಕ್ಸಲ್ ಅನಲ್ ದಾ ಅವರನ್ನು ಕೊಲ್ಲಲಾಗಿದೆ. ತಟಸ್ಥಗೊಳಿಸಿದ ಒಟ್ಟು ನಕ್ಸಲರ ಸಂಖ್ಯೆಯನ್ನು ಖಚಿತಪಡಿಸಲಾಗುತ್ತಿದೆ ಎಂದು ಹೇಳಿದರು.

### ಶಾಂತಿ ಮಂಡಳಿ ಬಗ್ಗೆ ಟ್ರಂಪ್ ವ್ಯಂಗ್ಯವಾಡಿದ ಮಸ್ಕ್

**ದಾವೋಸ್:** ಸ್ವಿಟ್ಸರ್ಲೆಂಡ್‌ನ ದಾವೋಸ್‌ನಲ್ಲಿ ನಡೆದ ವಿಶ್ವ ಆರ್ಥಿಕ ವೇದಿಕೆಯ ಸಂವಾದ ಕಾರ್ಯಕ್ರಮವೊಂದರಲ್ಲಿ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ 'ಶಾಂತಿ ಮಂಡಳಿ' ಅನ್ನು ಉದ್ಯಮಿ ಎಲಾನ್ ಮಸ್ಕ್ ಟೀಕಿಸಿದ್ದಾರೆ. ಶಾಂತಿ ಮಂಡಳಿ ರಚನೆ ಬಗ್ಗೆ ನನ್ನ ಗಮನಕ್ಕೂ ಬಂದಿದೆ. ಅದು ಪೀಸ್, ಪೀಸ್ ಗ್ರೀನ್‌ಲ್ಯಾಂಡ್‌ನ ಒಂದು ಪೀಸ್, ವೆನೆಜುವೆಲಾದ ಇನ್ನೊಂದು ಪೀಸ್ ಎಂದು ವ್ಯಂಗ್ಯವಾಡಿದ್ದಾರೆ. ಗಾಜಾದಲ್ಲಿ ಶಾಶ್ವತ ಶಾಂತಿ ನೆಲೆಸುವಂತೆ ಮಾಡುವ ಉದ್ದೇಶದಿಂದ ಟ್ರಂಪ್ 'ಶಾಂತಿ ಮಂಡಳಿ' ರಚಿಸಿದ್ದರು. ಈಗಾಗಲೇ ಪಾಕಿಸ್ತಾನ, ಯುಎಇ, ಸೌದಿ ಅರೇಬಿಯಾ, ಈಜಿಪ್ಟ್ ಸೇರಿ ಹಲವು ರಾಷ್ಟ್ರಗಳು ಈ ಮಂಡಳಿ ಸೇರಿವೆ. ಆದರೆ ವೆನೆಜುವೆಲಾದ ಅಧ್ಯಕ್ಷ ನಿಕೋಲಸ್ ಮಡೂರೊ ಅವರನ್ನು ಸೆರೆ ಹಿಡಿದಿರುವುದು ಮತ್ತು ಗ್ರೀನ್‌ಲ್ಯಾಂಡ್ ವಶಕ್ಕೆ ಪಡೆಯುವ ಟ್ರಂಪ್ ಅವರ ಯೋಜನೆಯು ವ್ಯಾಪಕ ಆಕ್ರೋಶಕ್ಕೆ ಗುರಿಯಾಗಿದೆ. ಎಲಾನ್ ಮಸ್ಕ್ ಬೆಂಬಲದೊಂದಿಗೆ ಡೊನಾಲ್ಡ್ ಟ್ರಂಪ್ ಎರಡನೇ ಅವಧಿಗೆ ಅಧ್ಯಕ್ಷರಾಗಿ ಆಯ್ಕೆಯಾಗಿದ್ದರು.ಟ್ರಂಪ್ ಅವರ ಚುನಾವಣಾ ಪೂರ್ವ ಪ್ರಚಾರದಲ್ಲೂ ಮಸ್ಕ್ ಸಕ್ರಿಯರಾಗಿ ಭಾಗವಹಿಸಿದ್ದರು. ಟ್ರಂಪ್ ಆಡಳಿತದಲ್ಲಿ ಮಸ್ಕ್ ಪ್ರಮುಖ ಹುದ್ದೆಯನ್ನು ಗಿಟ್ಟಿಸಿಕೊಂಡಿದ್ದರು. ಆದರೆ ಬಳಿಕ ಇಬ್ಬರ ಮಧ್ಯೆ ಭಿನ್ನಮತ ಉಂಟಾಗಿತ್ತು. ಅದಾದ ಬಳಿಕ ಟ್ರಂಪ್ ಆಡಳಿತದಲ್ಲಿ ಹುದ್ದೆಯನ್ನು ಮಸ್ಕ್ ತೊರೆದಿದ್ದರು.

### 3,117 ಪ್ರತಿಭಟನಕಾರರ ಸಾವು

**ಪ್ಯಾರಿಸ್:** ಇರಾನ್‌ನಲ್ಲಿ ಈಚೆಗೆ ನಡೆದ ಪ್ರತಿಭಟನೆಯಲ್ಲಿ 3,117 ಜನರು ಮೃತಪಟ್ಟಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಇರಾನ್ ಸರ್ಕಾರ ಮೃತಪಟ್ಟವರ ಸಂಖ್ಯೆ ಬಗ್ಗೆ ಅಧಿಕೃತ ಮಾಹಿತಿ ನೀಡಿದ್ದು ಇದೇ ಮೊದಲು. ಪ್ರತಿಭಟನೆಯನ್ನು ಹತ್ತಿಕ್ಕಲು ಇರಾನ್ ಆಡಳಿತವು ಕಠಿಣ ಕ್ರಮ ಕೈಗೊಂಡಿದ್ದರಿಂದ ಸಾವಿನ ಸಂಖ್ಯೆ ಹಲವು ಪಟ್ಟು ಹೆಚ್ಚಿದೆ ಎಂದು ಹೋರಾಟಗಾರರು ಪ್ರತಿಕ್ರಿಯಿಸಿದ್ದಾರೆ.

ಇರಾನ್‌ನಲ್ಲಿ ಆರ್ಥಿಕತೆಯ ಕುಸಿತದಿಂದ ಸರ್ಕಾರದ ವಿರುದ್ಧ ಜನರ ಆಕ್ರೋಶ ಭುಗಿಲೆದ್ದಿತ್ತು. ಜ.8ರಿಂದ ಹಲವು ದಿನ ಜನರು ಬೀದಿಗಿಳಿದು ಪ್ರತಿಭಟಿಸಿದ್ದರು. ಮೃತರಲ್ಲಿ 2,427 ಜನರನ್ನು ಹುತಾತ್ಮರು ಎಂದು ಪರಿಗಣಿಸಲಾಗಿದೆ. ಇದರಲ್ಲಿ ಭದ್ರತಾ ಪಡೆ ಸಿಬ್ಬಂದಿ ಸೇರಿದಂತೆ ಅಮಾಯಕ ನಾಗರಿಕರೂ ಇದ್ದಾರೆ. ಉಳಿದ 690 ಮಂದಿಯನ್ನು ಭಯೋತ್ಪಾದಕರು, ಗಲಭೆಕೋರರು ಮತ್ತು ಮಿಲಿಟರಿ ನೆಲೆಗಳ ಮೇಲೆ ದಾಳಿ ಮಾಡಿದವರು ಎಂಬುದಾಗಿ ಗುರುತಿಸಲಾಗಿದೆ ಎಂದು ಇರಾನ್‌ನ ರಾಷ್ಟ್ರೀಯ ಭದ್ರತಾ ಮಂಡಳಿ ಕಾರ್ಯದರ್ಶಿ ಅಲಿ ಅಕ್ಬರ್ ಮಾಹಿತಿ ನೀಡಿದ್ದಾರೆ. ಪ್ರತಿಭಟನೆ ಸಮಯದಲ್ಲಿ ಕನಿಷ್ಠ 25 ಸಾವಿರ ಮಂದಿ ಕೊಲ್ಲಲ್ಪಟ್ಟಿದ್ದಾರೆ ಎಂಬುದನ್ನು ಇರಾನ್‌ನಲ್ಲಿ ಲಭ್ಯವಿರುವ ಎಲ್ಲಾ ಪುರಾವೆಗಳು ಸೂಚಿಸುತ್ತಿವೆ ಎಂದು ನಾರ್ವೆ ಮೂಲದ ಇರಾನ್ ಮಾನವ ಹಕ್ಕುಗಳ ಎನ್‌ಜಿಒ ನಿರ್ದೇಶಕ ಮಹಮೂದ್ ಅಮೀರಿ ಮೊಘದ್ದಮ್ ತಿಳಿಸಿದ್ದಾರೆ.

# ಗಣರಾಜ್ಯೋತ್ಸವಕ್ಕೂ ಮುನ್ನ ದುಷ್ಕೃತ್ಯದ ಬೆದರಿಕೆ : ಪನ್ನೂನ್ ವಿರುದ್ಧ ಎಫ್‌ಐಆರ್

**ನವದೆಹಲಿ:** ಗಣರಾಜ್ಯೋತ್ಸವದ ಮುನ್ನ ರಾಷ್ಟ್ರ ರಾಜಧಾನಿಯಲ್ಲಿ ಅಶಾಂತಿ ಸೃಷ್ಟಿಸುವುದಾಗಿ ಬೆದರಿಕೆ ಹಾಕಿದ್ದಕ್ಕಾಗಿ ಸಿಖ್ಸ್ ಫಾರ್ ಜಸ್ಟಿಸ್ ನಿಯೋಜಿತ ಭಯೋತ್ಪಾದಕ ಗುರುಪತ್ವಂತ್ ಸಿಂಗ್ ಪನ್ನೂನ್ ವಿರುದ್ಧ ದೆಹಲಿ ಪೊಲೀಸ್ ವಿಶೇಷ ಘಟಕ ಎಫ್‌ಐಆರ್ ದಾಖಲಿಸಿದೆ. ಭಾರತೀಯ ನ್ಯಾಯ ಸಂಹಿತಾನ ಸೆಕ್ಷನ್ 196, 197, 152 , 61 ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಪೊಲೀಸರ ಪ್ರಕಾರ, ಜನವರಿ 26 ರಂದು ನಡೆಯಲಿರುವ ಗಣರಾಜ್ಯೋತ್ಸವದ ಮೊದಲು ಪನ್ನೂನ್ ಸಾಮಾಜಿಕ ಮಾಧ್ಯಮದಲ್ಲಿ ವಿಡಿಯೋ ಸಂದೇಶವನ್ನು ಬಿಡುಗಡೆ ಮಾಡಿದ ನಂತರ ಈ ಕ್ರಮ ಕೈಗೊಳ್ಳಲಾಗಿದೆ, ಅದರಲ್ಲಿ ಅವರು ದೆಹಲಿಯಲ್ಲಿ ಶಾಂತಿ ಮತ್ತು ಕಾನೂನು ಸುವ್ಯವಸ್ಥೆಯನ್ನು ಕದಡುವುದಾಗಿ ಬೆದರಿಕೆ ಹಾಕಿದ್ದಾರೆ. ವಿಡಿಯೋದಲ್ಲಿ, ಪನ್ನೂನ್ ತನ್ನ ಸ್ಲೀಪರ್ ಸೆಲ್‌ಗಳು ವಾಯುವ್ಯ ದೆಹಲಿಯ ರೋಹಿಣಿ ಮತ್ತು ನೈಋತ್ಯ ದೆಹಲಿಯ ದಾಬ್ರಿ ಸೇರಿದಂತೆ ನಗರದ ಕೆಲವು ಭಾಗಗಳಲ್ಲಿ ಖಲಿಸ್ತಾನ್ ಪರ ಪೋಸ್ಟರ್‌ಗಳನ್ನು ಅಂಟಿಸಿದ್ದಾರೆ ಎಂದು ಹೇಳಿಕೊಂಡಿದ್ದಾರೆ.



ಇದು ಅಶಾಂತಿಯನ್ನು ಪ್ರಚೋದಿಸುವ ದೊಡ್ಡ ಪಿತೂರಿಯ ಭಾಗವಾಗಿದೆ. ವಿಡಿಯೋವನ್ನು ಸಾಮಾಜಿಕ ಮಾಧ್ಯಮ ವೇದಿಕೆಗಳಲ್ಲಿ ವ್ಯಾಪಕವಾಗಿ ಪ್ರಸಾರ ಮಾಡಲಾಗಿದೆ, ಸಾರ್ವಜನಿಕರಲ್ಲಿ ಭಯವನ್ನು ಹರಡುವ ಅಶಾಂತಿಯನ್ನು ಪ್ರಚೋದಿಸುವ ಗುರಿಯನ್ನು ಹೊಂದಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ. ವಿಡಿಯೋದ ವಿಷಯವು ಪ್ರಕೃತಿಯಲ್ಲಿ ಪ್ರಚೋದನಕಾರಿಯಾಗಿದೆ ಮತ್ತು ಸಾರ್ವಜನಿಕ ಸುವ್ಯವಸ್ಥೆಗೆ ಅಪಾಯವನ್ನುಂಟುಮಾಡುತ್ತದೆ, ವಿಶೇಷವಾಗಿ ಜನವರಿ 26 ಕ್ಕಿಂತ ಮೊದಲು ಹೆಚ್ಚಿದ ಭದ್ರತಾ ವ್ಯವಸ್ಥೆಗಳನ್ನು ಗಮನದಲ್ಲಿ ಇಟ್ಟುಕೊಂಡು, ಎಂದು ಅಧಿಕಾರಿಯೊಬ್ಬರು ಹೇಳಿದರು. ವಿಡಿಯೋದಲ್ಲಿ ಮಾಡಲಾದ ಹೇಳಿಕೆಗಳನ್ನು ಅನುಸರಿಸಿ, ವಿಶೇಷ ಕೋಶ ಮತ್ತು ಸ್ಥಳೀಯ ಪೊಲೀಸ್ ಘಟಕಗಳ ಹಲವಾರು ತಂಡಗಳು ಉಲ್ಲೇಖಿಸಲಾದ ಪ್ರದೇಶಗಳಲ್ಲಿ ಶೋಧ ನಡೆಸಿದವು. ಆದಾಗ್ಯೂ, ಪರಿಶೀಲನಾ ಅಭಿಯಾನದ ಸಮಯದಲ್ಲಿ ಯಾವುದೇ ಖಲಿಸ್ತಾನ್ ಪರ ಪೋಸ್ಟರ್‌ಗಳ, ಸಂಬಂಧಿತ ವಸ್ತುಗಳು ಕಂಡುಬಂದಿಲ್ಲ ಎಂದು ಅಧಿಕಾರಿ ಹೇಳಿದರು. ರೋಹಿಣಿ, ದಾಬ್ರಿಯಲ್ಲಿ ಪೋಸ್ಟರ್‌ಗಳನ್ನು ಹಾಕಲಾಗಿದೆ ಎಂಬ ಪನ್ನೂನ್ ಅವರ ಹೇಳಿಕೆಗಳು ಇಲ್ಲಿಯವರೆಗೆ ದೃಢಪಟ್ಟಿಲ್ಲ. ಸ್ಥಳೀಯ ಪೊಲೀಸ್ ಠಾಣೆಗಳೊಂದಿಗೆ ವ್ಯಾಪಕ ತಪಾಸಣೆ, ಸಮನ್ವಯದ ಹೊರತಾಗಿಯೂ, ಅಂತಹ ಯಾವುದೇ ಪೋಸ್ಟರ್‌ಗಳನ್ನು ವಶಪಡಿಸಿಕೊಳ್ಳಲಾಗಿಲ್ಲ ಎಂದು ಅಧಿಕಾರಿ ಹೇಳಿದರು. ವಿಡಿಯೋದ ಉದ್ದೇಶ, ವ್ಯಾಪ್ತಿ, ಸಂಭಾವ್ಯ ಪರಿಣಾಮವನ್ನು ನಿರ್ಣಯಿಸಲು ಹೆಚ್ಚಿನ ತನಿಖೆ ನಡೆಯುತ್ತಿದೆ, ಸಂಶೋಧನೆಗಳ ಪ್ರಕಾರ ಹೆಚ್ಚುವರಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ವಿಶೇಷ ಘಟಕ ತಿಳಿಸಿದೆ. ಗಣರಾಜ್ಯೋತ್ಸವದ ಆಚರಣೆಯ ದೃಷ್ಟಿಯಿಂದ ರಾಜಧಾನಿಯಾದ್ಯಂತ ಭದ್ರತಾ ಸಂಸ್ಥೆಗಳು ಕಟ್ಟೆಚ್ಚರವನ್ನು ಹೆಚ್ಚಿಸಿವೆ, ಶಾಂತಿಯನ್ನು ಭಂಗಗೊಳಿಸುವ ಯಾವುದೇ ಪ್ರಯತ್ನವನ್ನು ಕಾನೂನಿನಡಿಯಲ್ಲಿ ಕಟ್ಟುನಿಟ್ಟಾಗಿ ಎದುರಿಸಲಾಗುವುದು ಎಂದು ಪೊಲೀಸರು ಹೇಳಿದ್ದಾರೆ.

## ಹೊಸ ತೈಲ ನಿಕ್ಷೇಪ ಪತ್ತೆ; ಆರ್ಥಿಕ ಚೇತರಿಕೆಯ ಲೆಕ್ಕಾಚಾರ ಶುರು

**ಇಸ್ಲಾಮಾಬಾದ್:** ಖೈಬರ್ ಪುಂಖ್ವಾ ಪ್ರಾಂತ್ಯದಲ್ಲಿ ತೈಲ ನಿಕ್ಷೇಪ ಪತ್ತೆಯಾಗಿದೆ ಎಂದು ಪಾಕಿಸ್ತಾನದ ಸರ್ಕಾರಿ ಸ್ವಾಮ್ಯದ ತೈಲ, ಅನಿಲ ಅಭಿವೃದ್ಧಿ ಕಂಪನಿ ತಿಳಿಸಿದೆ. ಇದರಿಂದಾಗಿ, ದೇಶೀಯ ತೈಲ ಪೂರೈಕೆಗೆ ಬಲ ಬರಲಿದ್ದು, ಪಾಕಿಸ್ತಾನಕ್ಕೆ ಇಂಧನ ಭದ್ರತೆ ದೊರೆಯಲಿದೆ ಎಂದು ವಿಶ್ಲೇಷಿಸಲಾಗುತ್ತಿದೆ. ಬಾವಿಯಿಂದ ದಿನಕ್ಕೆ 3,100 ಬ್ಯಾರಲ್‌ನಷ್ಟು ತೈಲ, ಪ್ರತಿನಿತ್ಯ 8.15 ದಶಲಕ್ಷ ಘನ ಅಡಿಯಷ್ಟು ಅನಿಲ ಹರಿಯುತ್ತದೆ ಎಂಬುದು ಸಮನ ಸುಕ್, ಶಿನವಾರಿ ರಚನೆಗಳಲ್ಲಿ ನಡೆಸಲಾಗಿರುವ ಪರೀಕ್ಷೆಯಿಂದ ತಿಳಿದುಬಂದಿದೆ ಎಂದು ಒಜಿಡಿಸಿಎಲ್ ಮಾಹಿತಿ ನೀಡಿದೆ.

ದೇಶದಲ್ಲಿ ಇಂಧನಕ್ಕೆ ಇರುವ ಬೇಡಿಕೆ ಹಾಗೂ ಪೂರೈಕೆ ನಡುವಿನ ಅಂತರವನ್ನು ತಗ್ಗಿಸಲು ಈ ನಿಕ್ಷೇಪ ದೊಡ್ಡ ಕೊಡುಗೆ ನೀಡಲಿದೆ. ಇದು ದೇಶದಲ್ಲಿ ಹೈಡ್ರೋಕಾರ್ಬನ್ ನಿಕ್ಷೇಪಗಳ ನೆಲೆಗಳನ್ನು ಹೆಚ್ಚಿಸಲಿದ್ದು ಹಾಗೂ ಉದ್ಯಮ ಪಾಲುದಾರರನ್ನು ಆಕರ್ಷಿಸಲಿದೆ' ಎಂದೂ ಹೇಳಿಕೆ ಬಿಡುಗಡೆ ಮಾಡಿದೆ.




ತನ್ನದೇ ಕಚ್ಚಾ ತೈಲ, ಅನಿಲ ಉತ್ಪಾದನೆಯನ್ನು ಹೆಚ್ಚಿಸಿಕೊಳ್ಳಲು, ದುಬಾರಿ ತೈಲದ ಆಮದನ್ನು ತಗ್ಗಿಸಲು, ಆ ಮೂಲಕ ವಿದೇಶಿ ಅವಲಂಬನೆಯನ್ನು ಕಡಿಮೆ ಮಾಡಿಕೊಳ್ಳುವುದರತ್ತ ಪಾಕಿಸ್ತಾನ ಗಮನ ಹರಿಸುತ್ತಿದೆ. ಅದರಲ್ಲೂ, ಬಿಕ್ಕಟ್ಟಿನಲ್ಲಿರುವ ತನ್ನ ಆರ್ಥಿಕತೆಗೆ ಪುನಶ್ಚೇತನ ನೀಡುವ ಕಡೆಗೆ ಆಲೋಚಿಸುತ್ತಿದೆ ಎಂದು ವಿಶ್ಲೇಷಿಸಲಾಗುತ್ತಿದೆ.

ಸಾಗರದಾಳದಲ್ಲಿ ಮೂರು. ಭೂಮಿಯಲ್ಲಿ ಎರಡು ಕಡೆ ತೈಲ ಘಟಕಗಳ ಅಭಿವೃದ್ಧಿ, ಪರಿಶೋಧನೆಗಾಗಿ, ಪಾಕಿಸ್ತಾನವು ಸ್ಥಳೀಯ ಖಾಸಗಿ, ಸರ್ಕಾರಿ ಸ್ವಾಮ್ಯದ ಕಂಪನಿಗಳೊಂದಿಗೆ ಐದು ಒಪ್ಪಂದಗಳನ್ನು ಕಳೆದ ವರ್ಷಾಂತ್ಯದಲ್ಲಿ ಮಾಡಿಕೊಂಡಿತ್ತು. ಮಾರಿ ಎನರ್ಜೀಸ್, ಒಜಿಡಿಸಿಎಲ್, ಪಾಕಿಸ್ತಾನ ಪೆಟ್ರೋಲಿಯಂ, ಫಾತಿಮಾ ಪೆಟ್ರೋಲಿಯಂ, ಗವರ್ನಮೆಂಟ್ ಹೋಲ್ಡಿಂಗ್ಸ್ ಲಿಮಿಟೆಡ್ ಹಾಗೂ ಟರ್ಕಿಶ್ ಪೆಟ್ರೋಲಿಯಂ ಓವರ್‌ಸೀಸ್ ಕಂಪನಿ ಒಪ್ಪಂದಲ್ಲಿ ಭಾಗಿಯಾಗಿವೆ. ಪಾಕಿಸ್ತಾನ ಸರ್ಕಾರ, 2025ರ ನವೆಂಬರ್‌ನಲ್ಲಿ 40 ಘಟಕಗಳನ್ನು ಹರಾಜು ಹಾಕಿತ್ತು. ಇದರಲ್ಲಿ, 23ಕ್ಕೆ ಸ್ಥಳೀಯ ಇಂಧನ ಕಂಪನಿಗಳು, ಟರ್ಕಿಯ ಸರ್ಕಾರಿ ಸ್ವಾಮ್ಯದ ಪ್ರಮುಖ ಇಂಧನ ಕಂಪನಿ ಟಿಪಿಎಒ ಬಿಡ್ ಸಲ್ಲಿಸಿದ್ದವು. ಇವು ನಿಕ್ಷೇಪಗಳ ಪರಿಶೋಧನೆಯ ಭಾಗವಾಗಿ 80 ದಶಲಕ್ಷ ಡಾಲರ್ ಹೂಡಿಕೆಗೆ ಬದ್ಧವಾಗಿವೆ. ತೈಲ ಉತ್ಪಾದನೆ ಸಾಧ್ಯವಾದರೆ, ಹೂಡಿಕೆ ಮೊತ್ತವು 1 ಬಿಲಿಯನ್ ಡಾಲರ್‌ಗೆ ತಲುಪುವ ಸಾಧ್ಯತೆ ಇದೆ.

## 5 ವರ್ಷದ ಬಾಲಕನ ಬಂಧನ; ಆತ ಮಾಡಿದ ತಪ್ಪೇನು?

**ವಾಷಿಂಗ್ಟನ್:** ಆತನಿಗೆ ಕೇವಲ 5 ವರ್ಷ ವಯಸ್ಸು, ಶಾಲೆ ಮುಗಿಸಿ ಮನೆಗೆ ತೆರಳುತ್ತಿದ್ದಾಗ ಅಪರಿಚಿತರು ಬಂದು ಜೀಪಿನಲ್ಲಿ ಕೂರಿಸಿಕೊಂಡು ಹೋಗಿದ್ದಾರೆ. ಬಂದವರು ಯಾರು? ಯಾಕೆ ತನ್ನನ್ನು ಕರೆದುಕೊಂಡು ಹೋಗುತ್ತಿದ್ದಾರೆ? ಎಂಬುದು ಕೂಡ ಆತನಿಗೆ ತಿಳಿಯಲಾರದ ವಯಸ್ಸು ಅದು. ವಾಷಿಂಗ್ಟನ್‌ನ ಮಿನ್ನೇಸೋಟದಲ್ಲಿ ಪ್ರೀ ಸ್ಕೂಲ್ ಮುಗಿಸಿ ಮನೆಗೆ ಮರಳುತ್ತಿದ್ದ 5 ವರ್ಷದ ಬಾಲಕನನ್ನು ಕರೆದುಕೊಂಡು ಹೋದವರು ಬೇರೆ ಯಾರೂ ಅಲ್ಲ, ಅವರು ಐಸಿಇ (ಇಮಿಗ್ರೇಷನ್ ಅಂಡ್ ಕಸ್ಟಮ್ಸ್ ಎನ್‌ಫೋರ್ಸ್‌ಮೆಂಟ್) ಅಧಿಕಾರಿಗಳು.




ತಂದೆಯನ್ನು ಬಂಧಿಸುವ ಉದ್ದೇಶಕ್ಕೆ, ಐದು ವರ್ಷದ ಲಿಯಾಮ್ ಕೊನೆಜೊ ರಾಮೋಸ್ ಎಂಬ ಬಾಲಕನನ್ನು ಮಿನ್ನೇಸೋಟದಲ್ಲಿರುವ ಬಾಲಕನ ಮನೆಯ ಸಮೀಪವೇ ಇಮಿಗ್ರೇಷನ್ ಅಂಡ್ ಕಸ್ಟಮ್ಸ್ ಎನ್‌ಫೋರ್ಸ್‌ಮೆಂಟ್ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ.

ಸದ್ಯ, ಬಾಲಕ, ಆತನ ತಂದೆಯನ್ನು ಟೆಕ್ಸಾಸ್‌ನಲ್ಲಿರುವ ಅಕ್ರಮ ವಲಸಿಗರ ಕೇಂದ್ರದಲ್ಲಿ ಇರಿಸಲಾಗಿದೆ. ಘಟನೆಗೆ ಸಂಬಂಧಿಸಿದ ಫೋಟೊಗಳು ಸಾಮಾಜಿಕ ಮಾಧ್ಯಮಗಳಲ್ಲಿ ವೈರಲ್ ಆಗಿದ್ದು, ಭಾರಿ ಆಕ್ರೋಶಕ್ಕೆ ಕಾರಣವಾಗಿವೆ.

**ಕಮಲಾ ಹ್ಯಾರಿಸ್ ಆಕ್ರೋಶ**

5 ವರ್ಷದ ಬಾಲಕನ ಬಂಧನಕ್ಕೆ ಸಂಬಂಧಿಸಿದಂತೆ ಎಕ್ಸ್ ಮೂಲಕ ಆಕ್ರೋಶ ವ್ಯಕ್ತಪಡಿಸಿರುವ ಕಮಲಾ ಹ್ಯಾರಿಸ್ ಲಿಯಾಮ್ ರಾಮೋಸ್ ಇನ್ನೂ ಚಿಕ್ಕ ಮಗು. ತನ್ನ ಕುಟುಂಬದೊಂದಿಗೆ ಮನೆಯಲ್ಲಿರಬೇಕಾದ ವಯಸ್ಸಿನಲ್ಲಿ ಆತನನ್ನು, ಐಸಿಇ ಅಧಿಕಾರಿಗಳು ಟೆಕ್ಸಾಸ್ ಬಂಧನ ಕೇಂದ್ರದಲ್ಲಿ ಇರಿಸಿರುವುದು ಆಘಾತಕಾರಿ. ಈ ಘಟನೆ ಕಂಡು ನನಗೆ ಕೋಪ ತಡೆಯಲಾಗುತ್ತಿಲ್ಲ. ನಿಮಗೂ ಕೋಪ ಬರಬೇಕು ಎಂದಿದ್ದಾರೆ.

# ಮಾಘ ಮೇಳದಲ್ಲಿ 1 ಕೋಟಿಗೂ ಹೆಚ್ಚು ಭಕ್ತರಿಂದ ಗಂಗಾ ಸ್ನಾನ



**ಪ್ರಯಾಗರಾಜ್:** ಪ್ರಯಾಗರಾಜ್‌ನಲ್ಲಿ ನಡೆಯುತ್ತಿರುವ ಮಾಘ ಮೇಳದಲ್ಲಿ ಶುಕ್ರವಾರ ನಡೆದ ಬಸಂತ್ ಪಂಚಮಿ ಸ್ನಾನ ಮಹೋತ್ಸವದ ಸಂದರ್ಭದಲ್ಲಿ ಒಂದು ಕೋಟಿಗೂ ಹೆಚ್ಚು ಭಕ್ತರು ಗಂಗಾ ಮತ್ತು ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿದ್ದಾರೆ. ತಡರಾತ್ರಿಯಿಂದಲೇ ಸಂಗಮ ಪ್ರದೇಶಕ್ಕೆ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಬರಲು ಪ್ರಾರಂಭಿಸಿದರು ಮತ್ತು ಶುಕ್ರವಾರ ಬೆಳಿಗ್ಗೆ 8 ಗಂಟೆಯ ಹೊತ್ತಿಗೆ ಸುಮಾರು 1.04 ಕೋಟಿ ಜನರು ಗಂಗಾ, ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿದ್ದಾರೆ ಎಂದು ಪ್ರಯಾಗರಾಜ್ ಮೇಳ ಪ್ರಾಧಿಕಾರದ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಬಸಂತ್ ಪಂಚಮಿಯು ಗಂಗಾ, ಯಮುನಾ, ಪೌರಾಣಿಕ ಸರಸ್ವತಿಯ ಸಂಗಮ ಎಂದು ನಂಬಲಾಗಿರುವುದರಿಂದ ಪ್ರಯಾಗರಾಜ್‌ನಲ್ಲಿ ವಿಶೇಷ ಮಹತ್ವವನ್ನು ಹೊಂದಿದೆ ಎಂದು ತೀರ್ಥ ಪುರೋಹಿತ ರಾಜೇಂದ್ರ ಮಿಶ್ರಾ ಹೇಳಿದರು.ಈ ದಿನವನ್ನು ಸಾಂಪ್ರದಾಯಿಕವಾಗಿ ಹಳದಿ ಬಟ್ಟೆಗಳನ್ನು ಧರಿಸುವುದು, ಹಳದಿ ವಸ್ತುಗಳನ್ನು ದಾನ ಮಾಡುವುದು ಮತ್ತು ಸರಸ್ವತಿ ದೇವಿಯನ್ನು ಪೂಜಿಸುವ ಮೂಲಕ ಗುರುತಿಸಲಾಗುತ್ತದೆ ಎಂದು ಅವರು ಹೇಳಿದರು. ಈ ಹಬ್ಬವು ಋತುಮಾನದ ಬದಲಾವಣೆಯನ್ನು ಸೂಚಿಸುತ್ತದೆ ಮತ್ತು ಇದನ್ನು ಸಾಂಸ್ಕೃತಿಕ ಕಾರ್ಯಕ್ರಮವಾಗಿ ಆಚರಿಸಲಾಗುತ್ತದೆ, ಜನರು ಗುಲಾಲ್ ಅನ್ನು ಅನ್ವಯಿಸುತ್ತಾರೆ, ವಸಂತಕಾಲದ ಆರಂಭಕ್ಕೆ ಸಂಬಂಧಿಸಿದ ಆಚರಣೆಗಳನ್ನು ಆಚರಿಸುತ್ತಾರೆ ಎಂದು ಮಿಶ್ರಾ ಹೇಳಿದರು. ಏಳು ವಲಯಗಳಲ್ಲಿ 800 ಹೆಕ್ಟೇರ್‌ನಲ್ಲಿ ಮಾಘ ಮೇಳವನ್ನು ಆಯೋಜಿಸಲಾಗಿದೆ ಎಂದು ಹೇಳಿದರು.

ಮೇಳ ಪ್ರದೇಶದಲ್ಲಿ 25,000ಕ್ಕೂ ಹೆಚ್ಚು ಶೌಚಾಲಯಗಳನ್ನು ನಿರ್ಮಿಸಲಾಗಿದೆ, 3,500ಕ್ಕೂ ಹೆಚ್ಚು ನೈರ್ಮಲ್ಯ ಕಾರ್ಮಿಕರನ್ನು ನಿಯೋಜಿಸಲಾಗಿದೆ ಎಂದು ವಿಭಾಗೀಯ ಆಯುಕ್ತ ಸೌಮ್ಯ ಅಗರ್ವಾಲ್ ಹೇಳಿದರು. ಭಕ್ತರ ಸುರಕ್ಷತೆ ಮತ್ತು ಸುಗಮ ಸಂಚಾರವನ್ನು ಖಚಿತಪಡಿಸಿಕೊಳ್ಳಲು ಮೇಳದ ಪ್ರದೇಶದಾದ್ಯಂತ 10,000 ಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ನೀರಜ್ ಪಾಂಡೆ ಹೇಳಿದರು.

# ಈಗ ವಿಕಸಿತ ಕೇರಳಂ ಕಡೆಗೆ ಗಮನ ಹರಿಸುವ ಸಮಯ

## ಬಡ, ಮಧ್ಯಮ ವರ್ಗದ ಜನರ ಕಷ್ಟಪಟ್ಟು ಸಂಪಾದಿಸಿದ ಹಣ ಲೂಟಿಯಾಗಿದೆ, ಎಡ, ಕೈ ಎರಡೂ ಪಕ್ಷಗಳ ಆಡಳಿತಾವಧಿಯಲ್ಲಿ ಭ್ರಷ್ಟಾಚಾರ ತುಂಬಿತ್ತು

**ತಿರುವನಂತಪುರ:** ನಾವು ಇತ್ತೀಚೆಗೆ ವಿಕಸಿತ್ ಭಾರತ್ ಕಡೆಗೆ ಗಮನ ಹರಿಸಿದ್ದೆವು. ಇನ್ನು ಮುಂದೆ ವಿಕಸಿತ್ ಕೇರಳದ ಕಡೆಗೆ ಗಮನ ಹರಿಸೋಣ ಎಂದು ಪ್ರಧಾನಿ ನರೇಂದ್ರ ಮೋದಿ, ಬಿಜೆಪಿ ಕಾರ್ಯಕರ್ತರಿಗೆ ಕರೆ ಕೊಟ್ಟರು. ಶುಕ್ರವಾರ ಪ್ರಧಾನಿ ಅವರು ತಿರುವನಂತಪುರದಲ್ಲಿ ಹಲವು ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಿದ ನಂತರ ಈ ಮಾತು ಹೇಳಿದರು. ಎಡಪಕ್ಷ, ಕಾಂಗ್ರೆಸ್ ಪಕ್ಷಗಳ ಭ್ರಷ್ಟಾಚಾರವನ್ನು ತರಾಟೆಗೆ ತೆಗೆದುಕೊಂಡರು. ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಎನ್‌ಡಿಎಗೆ ಅವಕಾಶ ನೀಡುವಂತೆ ರಾಜ್ಯದ ಜನತೆಗೆ ಮನವಿ ಮಾಡಿದರು. ಈ ಸಂದರ್ಭದಲ್ಲಿ ಅವರು, ತಿರುವನಂತಪುರಂ ಮಹಾನಗರ ಪಾಲಿಕೆಯಲ್ಲಿ ಬಿಜೆಪಿ ಸಾಧಿಸಿದ ಐತಿಹಾಸಿಕ ಗೆಲುವನ್ನು ಸ್ಮರಿಸುತ್ತಾ, ಇದು ರಾಜ್ಯದಾದ್ಯಂತ ಬದಲಾವಣೆಯ ಸಂಕೇತ ಎಂದು ಬಣ್ಣಿಸಿದರು. ಉತ್ತಮ ಆಡಳಿತ ಮತ್ತು ಭ್ರಷ್ಟಾಚಾರ ಮುಕ್ತ ಕೇರಳಕ್ಕಾಗಿ ಬಿಜೆಪಿ ಬದ್ಧವಾಗಿದೆ ಎಂದು ಪುನರುಚ್ಚರಿಸಿದರು.

ತಮ್ಮ ಭಾಷಣದ ಕೊನೆಯಲ್ಲಿ, ಈಗ ವಿಕಸಿತ ಕೇರಳದ ಸಮಯ. ಈಗ ಎನ್‌ಡಿಎ ಸರ್ಕಾರದ ಸಮಯ ಎಂದು ಇಂಗ್ಲಿಷ್‌ನಲ್ಲಿ ಹೇಳಿದರು. ಸಹಕಾರಿ ಬ್ಯಾಂಕ್ ಹಗರಣವನ್ನು ಉಲ್ಲೇಖಿಸಿ, ಎಡ, ಕಾಂಗ್ರೆಸ್ ಎರಡೂ ಪಕ್ಷಗಳ ಆಡಳಿತಾವಧಿಯಲ್ಲಿ ಭ್ರಷ್ಟಾಚಾರ ತುಂಬಿತ್ತು ಎಂದು ಆರೋಪಿಸಿದರು. ಇದರಿಂದಾಗಿ ಬಡ ಮತ್ತು ಮಧ್ಯಮ ವರ್ಗದ ಜನರ ಕಷ್ಟಪಟ್ಟು ಸಂಪಾದಿಸಿದ ಹಣ ಲೂಟಿಯಾಗಿದೆ ಎಂದರು. ಭ್ರಷ್ಟಾಚಾರ ಕೇರಳದ ಅಭಿವೃದ್ಧಿಗೆ ದೊಡ್ಡ ಅಡ್ಡಿಯಾಗಿದೆ. ಎಲ್‌ಡಿಎಫ್ ಅಡಿಯಲ್ಲಿರುವ ಬ್ಯಾಂಕುಗಳಲ್ಲಿ ಠೇವಣಿ ಇಟ್ಟಿದ್ದ ಉಳಿತಾಯವೂ ಇದರಿಂದ ಬಾಧಿತವಾಗಿದೆ. ಸಹಕಾರಿ ಬ್ಯಾಂಕ್ ಹಗರಣದಿಂದಾಗಿ ಬಡ ಮತ್ತು ಮಧ್ಯಮ ವರ್ಗದ ಕಷ್ಟಪಟ್ಟು ಸಂಪಾದಿಸಿದ ಹಣ ಲೂಟಿಯಾಗಿದೆ... ಬಿಜೆಪಿಗೆ ಅವಕಾಶ ನೀಡಿ, ಲೂಟಿಕೋರರಿಂದ ಪ್ರತಿ ರೂಪಾಯಿಯನ್ನು ವಾಪಸ್ ತರಿಸಿಕೊಡುತ್ತೇವೆ ಎಂದು ಅವರು ಬಹಿರಂಗ ಸಭೆಯಲ್ಲಿ ಹೇಳಿದರು. ಪ್ರಧಾನಿ ಮೋದಿ ಅವರು ಶಬರಿಮಲೆ ದೇಗುಲದ ಚಿನ್ನ ಕಳ್ಳತನದ ಬಗ್ಗೆಯೂ ಪ್ರಸ್ತಾಪಿಸಿದರು. ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರಕ್ಕೆ ಅವಕಾಶ ಸಿಕ್ಕರೆ, ಈ ಆರೋಪಗಳ ಬಗ್ಗೆ ಸಂಪೂರ್ಣ ತನಿಖೆ ನಡೆಸಿ, ತಪ್ಪಿತಸ್ಥರನ್ನು ಜೈಲಿಗೆ ಕಳುಹಿಸುವುದಾಗಿ ಭರವಸೆ ನೀಡಿದರು. ಭಗವಾನ್ ಅಯ್ಯಪ್ಪನ ಮೇಲೆ ದೇಶದ ಜನತೆಗೆ ಅಪಾರ ನಂಬಿಕೆಯಿದೆ. ಆದರೆ, ಎಲ್‌ಡಿಎಫ್ ಸರ್ಕಾರ ಶಬರಿಮಲೆ ದೇಗುಲದ ಸಂಪ್ರದಾಯಗಳನ್ನು ಹಾಳುಮಾಡಲು ಇರುವ ಎಲ್ಲಾ ದಾರಿಗಳನ್ನು ಚೆನ್ನಾಗಿ ಬಳಸಿಕೊಂಡಿದೆ. ಈಗ ಇಲ್ಲಿ ಚಿನ್ನ ಕಳ್ಳತನದ ವರದಿಗಳು ಬರುತ್ತಿವೆ. ದೇಗುಲದಿಂದ, ದೇವರ ಪಕ್ಕದಿಂದಲೇ ಚಿನ್ನ ಕಳ್ಳತನವಾಗಿದೆ ಎಂಬ ವರದಿಗಳು ಬರುತ್ತಿವೆ ಎಂದು ಹೇಳಿದ್ದಾರೆ. ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಕೂಡ ವೇದಿಕೆಯಲ್ಲಿದ್ದರು.

ಇತ್ತೀಚೆಗೆ ನಡೆದ ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಬಿಜೆಪಿ ಭರ್ಜರಿ ಗೆಲುವು ಸಾಧಿಸಿದ ನಂತರ ಪ್ರಧಾನಿ ಮೋದಿ ಅವರ ಕೇರಳಕ್ಕೆ ಇದು ಮೊದಲ ಭೇಟಿಯಾಗಿದೆ. ಈ ಚುನಾವಣೆಯಲ್ಲಿ ಬಿಜೆಪಿ 45 ವರ್ಷಗಳ ನಂತರ ಎಲ್‌ಡಿಎಫ್‌ನಿಂದ ತಿರುವನಂತಪುರಂ ಮಹಾನಗರ ಪಾಲಿಕೆಯ ಅಧಿಕಾರವನ್ನು ವಶಪಡಿಸಿಕೊಂಡಿತ್ತು. ಪ್ರಧಾನಿ ಅವರು ಈ ಗೆಲುವನ್ನು ಸ್ವಾಗತಿಸಿ, ಇದನ್ನು ಅಸಾಧಾರಣ, ಐತಿಹಾಸಿಕ ಎಂದು ಶ್ಲಾಘಿಸಿದರು. ಇದು ಕೇರಳದಲ್ಲಿ ಬಿಜೆಪಿ ಸರ್ಕಾರದ ಅಡಿಪಾಯ ಹಾಕಿದೆ ಎಂದರು.



**ಎನ್‌ಡಿಎಗೆ ಅವಕಾಶ ನೀಡಿ**

ಬಿಜೆಪಿ ಮಹತ್ವದ ಮೂಲಸೌಕರ್ಯಗಳನ್ನು ನಿರ್ಮಿಸುವ ಮೂಲಕ ಉದ್ಯೋಗಾವಕಾಶಗಳನ್ನು ಸೃಷ್ಟಿಸಲು ಬದ್ಧವಾಗಿದೆ. ಬಿಜೆಪಿಯ ಪ್ರಯತ್ನಗಳಿಂದಾಗಿ ಕೇರಳದ ಸಂಪೂರ್ಣ ರೈಲು ಜಾಲ ವಿದ್ಯುದ್ದೀಕರಣಗೊಂಡಿದೆ. ಶುಕ್ರವಾರ ರಾಜ್ಯದಲ್ಲಿ ಮೂರು ವಂದೇ ಭಾರತ್ ರೈಲುಗಳು ಈಗಾಗಲೇ ಓಡಾಡುತ್ತಿವೆ, ಮತ್ತು ಕೆಲವೇ ಗಂಟೆಗಳ ಹಿಂದೆ, ಕೇರಳದಲ್ಲಿ ಅಮೃತ್ ಭಾರತ್ ಎಕ್ಸ್‌ಪ್ರೆಸ್‌ಗೂ ಚಾಲನೆ ನೀಡಲಾಗಿದೆ.

– ನರೇಂದ್ರ ಮೋದಿ, ಪ್ರಧಾನ ಮಂತ್ರಿ

**ಇದೇ ವರ್ಷ ಚುನಾವಣೆ**

ಕೇರಳ ವಿಧಾನಸಭೆಯ 140 ಸ್ಥಾನಗಳಿಗೆ ಈ ವರ್ಷ ಚುನಾವಣೆ ನಡೆಯಲಿದ್ದು, ಮೇ ತಿಂಗಳಿಗೂ ಮುನ್ನ ನಡೆಯುವ ಸಾಧ್ಯತೆಯಿದೆ. ಪ್ರಧಾನಿ ಮೋದಿ ಅವರು ತಮ್ಮ ಭಾಷಣದಲ್ಲಿ, ಕೇರಳದ ಜನತೆ ಎಡಪಕ್ಷ ಮತ್ತು ಕಾಂಗ್ರೆಸ್ ಪಕ್ಷಗಳ ಭ್ರಷ್ಟಾಚಾರದಿಂದ ಬೇಸತ್ತಿದ್ದಾರೆ, ತಮ್ಮ ಪಕ್ಷಕ್ಕೆ ಅವಕಾಶ ನೀಡಿದರೆ, ರಾಜ್ಯದಲ್ಲಿ ಅಭಿವೃದ್ಧಿಯ ಹೊಸ ಶಕೆ ಆರಂಭವಾಗಲಿದೆ ಎಂದು ಭರವಸೆ ನೀಡಿದರು. ವಿಶೇಷವಾಗಿ, ಸಹಕಾರಿ ಬ್ಯಾಂಕ್ ಹಗರಣ, ಶಬರಿಮಲೆ ಚಿನ್ನ ಕಳ್ಳತನದ ಆರೋಪಗಳನ್ನು ಪ್ರಸ್ತಾಪಿಸಿ, ಈ ಪ್ರಕರಣಗಳಲ್ಲಿ ತಪ್ಪಿತಸ್ಥರಿಗೆ ಶಿಕ್ಷೆ ನೀಡಲಾಗುವುದು ಎಂದು ಸ್ಪಷ್ಟಪಡಿಸಿದರು.

# ಒಟಿಟಿಯಲ್ಲಿ ಮಾರ್ಕ್

ವಿಜಯ್ ಕಾರ್ತಿಕೇಯ ನಿರ್ದೇಶನದ 'ಮಾರ್ಕ್' ಸಿನಿಮಾದಲ್ಲಿ ಕಿಚ್ಚ ಸುದೀಪ್ ಅವರು ಪೊಲೀಸ್ ಪಾತ್ರ ಮಾಡಿದ್ದಾರೆ. ಥಿಯೇಟರ್‌ಗಳಲ್ಲಿ ಬಿಡುಗಡೆಯಾದ 30 ದಿನಕ್ಕೆ ಅಂದರೆ ಸರಿಯಾಗಿ 1 ತಿಂಗಳಿಗೆ 'ಮಾರ್ಕ್' ಸಿನಿಮಾ ಒಟಿಟಿ ಅಂಗಳಕ್ಕೆ ಪ್ರವೇಶ ಪಡೆದಿದೆ.

ಚಿತ್ರಮಂದಿರಗಳಲ್ಲಿ ಈ ಸಿನಿಮಾವನ್ನು ಮಿಸ್ ಮಾಡಿಕೊಂಡವರು ಈಗ ಒಟಿಟಿಯಲ್ಲಿ ನೋಡಬಹುದು.

2025ರ ಬಹುನಿರೀಕ್ಷೆಯ ಸಿನಿಮಾಗಳ ಸಾಲಿನಲ್ಲಿ ಮುಂಚೂಣಿಯಲ್ಲಿದ್ದ ಸಿನಿಮಾಗಳ ಪೈಕಿ ಕಿಚ್ಚ ಸುದೀಪ್ ನಟನೆಯ 'ಮಾರ್ಕ್' ಸಹ ಒಂದು. ಅಪಾರ ನಿರೀಕ್ಷೆಯಂತೆ, ಕ್ರಿಸ್‌ಮಸ್ ಹಬ್ಬದ ಪ್ರಯುಕ್ತ ಡಿಸೆಂಬರ್ 25ರಂದು ಪ್ಯಾನ್ ಇಂಡಿಯಾ ಮಟ್ಟದಲ್ಲಿ ತೆರೆಕಂಡಿತ್ತು ಈ ಸಿನಿಮಾ. ಆಯಕ್ಷನ್ ಥ್ರಿಲ್ಲರ್ ಅಡ್ವೆಂಚರ್ ಜಾನರ್‌ನ 'ಮಾರ್ಕ್' ಸಿನಿಮಾಗೆ ಮೆಚ್ಚುಗೆಯ ಮಾತುಗಳೂ ಕೇಳಿಬಂದಿದ್ದವು. ಮಾಸ್ ಎಂಟರ್‌ಟೈನರ್ ಎಂಬಂತಹ ಪಾಸಿಟಿವ್ ವಿಮರ್ಶೆಗಳನ್ನೂ ಪಡೆದುಕೊಂಡಿತ್ತು ಈ ಸಿನಿಮಾ.



'ಮಾರ್ಕ್' ಸಿನಿಮಾದ ಒಟಿಟಿ ಪ್ರಸಾರದ ಹಕ್ಕುಗಳನ್ನು 'ಜಿಯೋ ಹಾಟ್‌ಸ್ಟಾರ್' ಪಡೆದುಕೊಂಡಿದೆ. ಜನವರಿ 23ರ ಶುಕ್ರವಾರ ಜಿಯೋ ಹಾಟ್‌ಸ್ಟಾರ್ ಒಟಿಟಿಯಲ್ಲಿ ಸ್ಟ್ರೀಮಿಂಗ್ ಆರಂಭ ಆಗಿದೆ. ಕನ್ನಡ ಮಾತ್ರವಲ್ಲದೆ, ತಮಿಳು, ತೆಲುಗು ಮತ್ತು ಮಲಯಾಳಂ ಭಾಷೆಗಳಲ್ಲಿ ಈ ಸಿನಿಮಾ ಪ್ರಸಾರ ಆರಂಭಿಸಿದೆ. ಥಿಯೇಟರ್‌ಗಳಲ್ಲಿ ಈ ಚಿತ್ರವನ್ನು ಮಿಸ್ ಮಾಡಿಕೊಂಡವರು, ಇನ್ನೊಮ್ಮೆ ಸಿನಿಮಾ ನೋಡಬೇಕೆಂದುಕೊಂಡವರಿಗೆ ಇದೀಗ ಜಿಯೋ ಹಾಟ್‌ಸ್ಟಾರ್ ಸರ್ಪ್ರೈಸ್ ನೀಡಿದೆ. ಹಾಗಾದರೆ ಮತ್ಯಾಕೆ ತಡ, ಈಗಲೇ ಜಿಯೋ ಹಾಟ್‌ಸ್ಟಾರ್ ಅಪ್ಲಿಕೇಷನ್ ಡೌನ್‌ಲೋಡ್ ಮಾಡಿಕೊಂಡು ಸಿನಿಮಾ ವೀಕ್ಷಿಸಿ.

**ಮಾರ್ಕ್ ಸಿನಿಮಾ ಕಥೆ:** ಅಜಯ್ ಮಾರ್ಕಂಡೇಯ ಅಲಿಯಾಸ್ ಮಾರ್ಕ್. ಕಥಾನಾಯಕ ಮಾರ್ಕ್ ಸಸ್ಪೆಂಡ್ ಆಗಿರುವ ಎಸಿಪಿ. ಪೊಲೀಸ್ ಡಿಪಾರ್ಟ್‌ಮೆಂಟ್‌ನಲ್ಲಿ ದೊಡ್ಡ ಹೆಸರು. ಆತನ ಹೆಸರು ಕೇಳಿದ್ರೆ ಸಾಕು ರಾಜಕೀಯ ನಾಯಕರಿಂದ ಹಿಡಿದು, ರೌಡಿಗಳೂ ಗಡಗಡ! ಆ ಮಟ್ಟದ ಖಡಕ್ ಹಿನ್ನೆಲೆ ಇರುವಂಥ ಅಧಿಕಾರಿ.



# ಅನ್ಯಾಯದ ಇತಿಹಾಸ ಕೆದಕಿದ ಲ್ಯಾಂಡ್‌ಲಾರ್ಡ್

ಅಸಮಾನತೆ, ಅನ್ಯಾಯದ 'ಲ್ಯಾಂಡ್‌ಲಾರ್ಡ್' ಸಿನಿಮಾದ ಟ್ರೇಲರ್ ಬಿಡುಗಡೆ ಆದಾಗಲೇ ಅದರಲ್ಲಿ 'ಕಾಟೇರ' ಸಿನಿಮಾದ ಶೇಡ್ ಕಾಣಿಸಿತ್ತು. ಹೌದು, ಈ ಸಿನಿಮಾದಲ್ಲಿ ಅದೇ ರೀತಿಯ ಛಾಯೆ ಇದೆ. ಬಡವ ಮತ್ತು ಶ್ರೀಮಂತರ ನಡುವಿನ ಸಂಘರ್ಷ ಇದೆ. ತಮ್ಮ ಹಕ್ಕುಗಳಿಗಾಗಿ ಹೋರಾಟ ಮಾಡುವ ಬಡವನ ಕಥೆ ಇದೆ. ಜಾತಿಯ ಹೆಸರಿನಲ್ಲಿ ಶೋಷಣೆಗೆ ಒಳಗಾದ ಜನರ ಕಹಾನಿ ಇದೆ. ರೆಟ್ರೋ ಕಾಲದ ಕಥೆಯನ್ನು ಪ್ರೇಕ್ಷಕರ ಮುಂದೆ ಇಡಲಾಗಿದೆ. ಇಡೀ ಊರಿಗೆ ಊರೇ ದಣಿಗಳ ಒಡೆತನದಲ್ಲಿ ಇರುವಾಗ, ತನ್ನ ಪಾಲಿಗೂ ಸ್ವಂತದ ತುಂಡು ಭೂಮಿ ಇರಬೇಕು ಎಂಬುದು ಬಡವನ ಆಸೆ. ಆ ಆಸೆಯನ್ನು ಈಡೇರಿಸುವುದು ದಣಿಗಳ ಪಾಲಿಗೆ ದೊಡ್ಡ ವಿಷಯ ಏನೂ ಅಲ್ಲ. ಆದರೆ ಬಡವರಿಗೆ ಭೂಮಿ ಕೊಟ್ಟರೆ ಅವರು ಕೂಡ 'ಲ್ಯಾಂಡ್‌ಲಾರ್ಡ್' ಎನಿಸಿಕೊಳ್ಳುತ್ತಾರೆ. ಅದರಿಂದ ತಮ್ಮ ಪ್ರತಿಷ್ಠೆಗೆ ಧಕ್ಕೆ ಬರುತ್ತದೆ ಎಂಬುದು ದಣಿಗಳ ವಾದ. ಹಾಗಾಗಿ, ಎಂದೆಂದಿಗೂ ಬಡವರಿಗೆ ಭೂಮಿಯ ಒಡೆತನ ಸಿಗಲೇಬಾರದು ಎಂದು ದಣಿಗಳು ಕುತಂತ್ರ ನಡೆಸುತ್ತಾರೆ. ಅಂಥ ದಣಿಗಳ ವಿರುದ್ಧ ಸಿಡಿದು ನಿಲ್ಲುವ ರಾಚಯ್ಯ ಅಲಿಯಾಸ್ ಕೊಡಲಿ ರಾಚಯ್ಯ ಎಂಬ ಬಡವನ ಕಥೆ ಈ ಸಿನಿಮಾದಲ್ಲಿ ಇದೆ. ನಟ ದುನಿಯಾ ವಿಜಯ್ ಅವರು ಕೊಡಲಿ ರಾಚಯ್ಯನಾಗಿ ಈ ಸಿನಿಮಾದಲ್ಲಿ ಮುಖ್ಯ ಪಾತ್ರ ಮಾಡಿದ್ದಾರೆ. ಆ ಪಾತ್ರಕ್ಕೆ ಅವರು ನ್ಯಾಯ ಒದಗಿಸಿದ್ದಾರೆ. ಆಯಕ್ಷನ್ ದೃಶ್ಯಗಳಲ್ಲಿ ಅಬ್ಬರಿಸಿದ್ದಾರೆ. ಕೋಲಾರ ಭಾಗದ ಕನ್ನಡವನ್ನು ಮಾತನಾಡುತ್ತಾ ಆ ಪಾತ್ರವೇ ತಾವಾಗಿದ್ದಾರೆ. ದುನಿಯಾ ವಿಜಯ್ ಅವರಿಗೆ ಜೋಡಿಯಾಗಿ ರಚಿತಾ ರಾಮ್ ಅಭಿನಯಿಸಿದ್ದಾರೆ. ದಿಟ್ಟ ಹೆಣ್ಣುಮಗಳಾಗಿ, ಡಿ-ಗ್ಲಾಮ್ ಪಾತ್ರವನ್ನು ಅವರು ಚೆನ್ನಾಗಿ ನಿಭಾಯಿಸಿದ್ದಾರೆ.

# ಸಂಧ್ಯಾ ಜೊತೆ ಮದುವೆ ಆದ ಮಂಜು



ಬಿಗ್ ಬಾಸ್ ಕನ್ನಡ ಸೀಸನ್ 11'ರ ಸ್ಪರ್ಧಿ ಉಗ್ರಂ ಮಂಜು ಅವರು ಮದುವೆ ಆಗಿದ್ದಾರೆ. ಸಂಧ್ಯಾ ಜೊತೆ ಅವರು ಹೊಸ ಬಾಳು ಆರಂಭಿಸಿದ್ದಾರೆ. ಈ ಸಂದರ್ಭದ ಫೋಟೋಗಳು ಗಮನ ಸೆಳೆದಿವೆ. ಅವರ ವಿವಾಹದ ಆಲ್ಬಂ ಇಲ್ಲಿದೆ ನೋಡಿ. ನಟ ಹಾಗೂ ಬಿಗ್ ಬಾಸ್ ಮಾಜಿ ಸ್ಪರ್ಧಿ ಉಗ್ರಂ ಮಂಜುಗೆ ಜನವರಿ 23 ವಿವಾಹ ಸಂಭ್ರಮ. ಅವರ ಮದುವೆ ಧರ್ಮಸ್ಥಳದಲ್ಲಿ ಸರಳವಾಗಿ ನಡೆದಿದೆ

ಸಂಧ್ಯಾ ಜೊತೆ ಅವರು ಹಸೆಮಣೆ ಏರಿದ್ದಾರೆ. ಮಂಜು ಅವರು ಬಿಗ್ ಬಾಸ್‌ಗೆ ಬರೋದಕ್ಕೂ ಮೊದಲು ಅವರ ಜೀವನ ಶೈಲಿ ಬೇರೆ ಇತ್ತು. ಬಿಗ್ ಬಾಸ್ ಬಳಿಕ ಅವರ ಜೀವನ ಶೈಲಿ ಬದಲಾಯಿತು. ಈಗ ಮದುವೆ ಆಗಿ ಹೊಸ ಬಾಳು ಆರಂಭಿಸುತ್ತಿದ್ದಾರೆ. ಅವರಿಗೆ ಎಲ್ಲರೂ ಶುಭಕೋರಿದ್ದಾರೆ. ಧರ್ಮಸ್ಥಳದಲ್ಲಿ ಮಂಜು ಹಾಗೂ ಸಂಧ್ಯಾ ಮದುವೆ ನಡೆದಿದೆ. ಆಪ್ತರು ಹಾಗೂ ಕುಟುಂಬದವರು ಮಾತ್ರ ಮದುವೆಗೆ ಹಾಜರಿ ಹಾಕಿದ್ದರು. ಪ್ರಮೋದ್ ಶೆಟ್ಟಿ ಸೇರಿದಂತೆ ಚಿತ್ರರಂಗದ ಅನೇಕರು ಮದುವೆಗೆ ಹಾಜರಿ ಹಾಕಿದ್ದರು. ಸಾಮಾನ್ಯವಾಗಿ ಸೆಲೆಬ್ರಿಟಿಗಳು ಬೇರೆ ಕಡೆ ಮದುವೆ ಆದರೆ ಬೆಂಗಳೂರಲ್ಲಿ ಅದ್ದೂರಿಯಾಗಿ ರಿಸೆಪ್ಶನ್ ನಡೆಸುತ್ತಾರೆ. ಮಂಜು ಕೂಡ ಹಾಗೆಯೇ ಮಾಡಬಹುದು ಎಂದು ಹೇಳಲಾಗುತ್ತಾ ಇದೆ. ಇದಕ್ಕಾಗಿ ಫ್ಯಾನ್ಸ್ ಕಾದಿದ್ದಾರೆ. ಉಗ್ರಂ ಮಂಜು ಅವರಿಗೆ ಸುದೀಪ್ ಜೊತೆ ಒಳ್ಳೆಯ ಒಡನಾಟ ಇದೆ. 'ಮ್ಯಾಕ್ಸ್' ಸಿನಿಮಾದಲ್ಲಿ ಇವರು ಒಟ್ಟಾಗಿ ಕೆಲಸ ಮಾಡಿದ್ದರು. ಆ ಬಳಿಕ ಬಿಗ್ ಬಾಸ್‌ಗೆ ಬಂದರು ಮಂಜು. ಸುದೀಪ್ ಅವರನ್ನು ಕೂಡ ಮದುವೆಗೆ ಕರೆದಿದ್ದರು ಎನ್ನಲಾಗಿದೆ.

# ಗಿಲ್ಲಿಗೆ ಬೆಂಬಲ ನೀಡಿದ ರಾಜಕೀಯ ನಾಯಕರು



ಕಿರುತೆರೆ ಕಲಾವಿದ ಗಿಲ್ಲಿಗೆ ರಾಜ್ಯದ ಪ್ರಮುಖ ರಾಜಕೀಯ ನಾಯಕರಿಂದ ಅಭೂತಪೂರ್ವ ಬೆಂಬಲ ವ್ಯಕ್ತವಾಗಿದೆ. ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್, ಎಚ್‌ಡಿ ಕುಮಾರಸ್ವಾಮಿ, ಗೃಹ ಸಚಿವ ಪರಮೇಶ್ವರ್ ಸೇರಿದಂತೆ ಹಲವರು ಗಿಲ್ಲಿಯನ್ನು ಭೇಟಿ ಮಾಡಿ ಅಥವಾ ಕರೆ ಮಾಡಿ ಅಭಿನಂದಿಸಿದ್ದಾರೆ.

ಸಾಮಾನ್ಯವಾಗಿ ಸಿನಿಮಾ ಸೆಲೆಬ್ರಿಟಿಗಳಿಗೆ ಸಿಗುವ ಈ ರೀತಿಯ ರಾಜಕೀಯ ಪ್ರೋತ್ಸಾಹ, ಕಿರುತೆರೆ ಕಲಾವಿದರಾದ ಗಿಲ್ಲಿಗೆ ಸಿಕ್ಕಿರುವುದು ವಿಶೇಷ. ಸಿನಿಮಾ ರಂಗಕ್ಕೂ ರಾಜಕೀಯ ನಾಯಕರಿಗೂ ಒಂದು ನಂಟು ಇರುತ್ತದೆ. ಚುನಾವಣೆ ವೇಳೆ ಸಿನಿಮಾ ಸೆಲೆಬ್ರಿಟಿಗಳನ್ನು ಕರೆಸಿ ಪ್ರಚಾರ ಮಾಡಲಾಗುತ್ತದೆ. ಈ ಕಾರಣದಿಂದಲೇ ರಾಜಕೀಯ ನಾಯಕರು ಕಲಾವಿದರ ಜೊತೆ ಒಳ್ಳೆಯ ಬಾಂಧವ್ಯ ಹೊಂದಿರುತ್ತಾರೆ.

ಆದರೆ, ಕಿರುತೆರೆ ಕಲಾವಿದರು ಹಾಗೂ ರಿಯಾಲಿಟಿ ಶೋ ಸ್ಪರ್ಧಿಗಳಿಗೆ ರಾಜಕೀಯ ನಾಯಕರ ಬೆಂಬಲ ಸಿಗೋದು ಕಡಿಮೆ. ಆದರೆ, ಗಿಲ್ಲಿ ನಟ ಈ ವಿಷಯದಲ್ಲಿ ಭಿನ್ನ. ಅವರನ್ನು ವಿವಿಧ ಪಕ್ಷದ ನಾಯಕರು ಭೇಟಿ ಮಾಡಿದ್ದಾರೆ, ಕರೆ ಮಾಡಿ ಅಭಿನಂದನೆ ತಿಳಿಸಿದ್ದಾರೆ.

ಗಿಲ್ಲಿ ನಟ ಅವರು ಗೆಲ್ಲಬೇಕು ಎಂದು ಮಳವಳ್ಳಿ ಶಾಸಕ ನರೇಂದ್ರ ಸ್ವಾಮಿ ಆಶಿಸಿದ್ದರು. ಗಿಲ್ಲಿಗೆ ಮತ ಹಾಕುವಂತೆ ಕೋರಿದ್ದರು. ಬಿಗ್ ಬಾಸ್ ಪೂರ್ಣಗೊಂಡ ಬಳಿಕ ಗಿಲ್ಲಿಗೆ ಅವರು ಕರೆ ಮಾಡಿ ಶುಭ ಕೋರಿದ್ದಾರೆ. ಇದು ಗಿಲ್ಲಿ ಖುಷಿಗೆ ಕಾರಣ ಆಗಿದೆ. ರಾಜಕೀಯ ನಾಯಕರು ಚುನಾವಣೆ ಬಂದಾಗ ಮತ ಹಾಕುವ ಬೇಡಿಕೆ ಇಡೋದು ಸಾಮಾನ್ಯ. ಆದರೆ, ಬಿಗ್ ಬಾಸ್ ಸ್ಪರ್ಧೆಗೆ ಅವರು ಮತ ಹಾಕುವಂತೆ ಕೇಳಿದ್ದು ವಿಶೇಷ.

# ಇಂದಿರಾ ಹೊಸ ಸಿನಿಮಾ


## ಟೈಟಲ್ ಬಗ್ಗೆ ಸ್ಪಷ್ಟನೆ ನೀಡಿದ ಚಿತ್ರತಂಡ

ಇಂದಿನ ತಲೆಮಾರಿನ ಪ್ರೇಕ್ಷಕರನ್ನು ಗಮನದಲ್ಲಿ ಇಟ್ಟುಕೊಂಡು 'ಇಂದಿರಾ' ಸಿನಿಮಾ ನಿರ್ಮಾಣ ಮಾಡಲಾಗುತ್ತಿದೆ. ಈ ಚಿತ್ರದಲ್ಲಿ ಜೆನ್ ಜೀ ಜೀವನ ಶೈಲಿಯ ಕುರಿತ ಕಥೆ ಇರಲಿದೆ. ಈ ತಲೆಮಾರಿನ ಯುವಕರ ಅಂಗೈಯಲ್ಲಿ ಯಾವಾಗಲೂ ಸ್ಮಾರ್ಟ್ ಫೋನ್ ಇರುತ್ತದೆ. ಈ ತಂತ್ರಜ್ಞಾನವನ್ನು ಹೇಗೆಲ್ಲ ಬಳಸಿಕೊಳ್ಳಲಾಗುತ್ತಿದೆ ಹೇಗೆಲ್ಲ ಬಳಸಿಕೊಳ್ಳಬಹುದು ಎಂಬ ಕಥೆಯನ್ನು 'ಇಂದಿರಾ' ಸಿನಿಮಾ ಮೂಲಕ ಹೇಳಲಾಗುವುದು. ಈ ಹಿಂದೆ 'ರಾವೆನ್' ಸಿನಿಮಾ ನಿರ್ದೇಶಿಸಿದ್ದ ವೇದ್ ಅವರು ಈಗ 'ಇಂದಿರಾ' ಚಿತ್ರಕ್ಕೆ ಕಥೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ. 'ಕಿರಣ್ ಫಿಲ್ಮ್ಸ್' ಮೂಲಕ ಕಿರಣ್ ಕುಮಾರ್ ಎಂ. ಅವರು ಈ ಸಿನಿಮಾಗೆ ಬಂಡವಾಳ ಹೂಡುತ್ತಿದ್ದಾರೆ.



ಟೈಟಲ್ ಬಗ್ಗೆ ಅವರು ಸ್ಪಷ್ಟನೆ ನೀಡಿದರು. 'ಇಂದಿರಾ ಎಂಬ ಶೀರ್ಷಿಕೆ ಇದ್ದರೂ ಕೂಡ ಈ ಸಿನಿಮಾಕ್ಕೂ ಇಂದಿರಾ ಗಾಂಧಿಯವರಿಗೂ ಯಾವುದೇ ಸಂಬಂಧವಿಲ್ಲ. ಇದು ರಾಜಕೀಯ ಕಥೆಯಾಧಾರಿತ ಸಿನಿಮಾವಲ್ಲ. ಆದರೆ ಸಿನಿಮಾದ ಕಥೆಯಲ್ಲಿ ಇಂದಿನ ಹಲವು ವಿದ್ಯಮಾನಗಳ ಬಗ್ಗೆ ಚರ್ಚಿಸುತ್ತಿದ್ದೇವೆ. ಸಿನಿಮಾದ ಕಥೆಗೆ ತಕ್ಕಂತೆ ಪವರ್‌ಫುಲ್ ಟೈಟಲ್ ಇರಬೇಕೆಂಬ ಕಾರಣಕ್ಕೆ ಈ ಹೆಸರಿಡಲಾಗಿದೆ' ಎಂದು ಅವರು ಹೇಳಿದ್ದಾರೆ. 'ಇಂದಿನ ಜೆನ್ ಜೀ ಪ್ರೇಕ್ಷಕರಿಗೆ ಕನೆಕ್ಟ್ ಆಗುವ ಸಿನಿಮಾ ಇದಾಗಿರುವುದರಿಂದ, ಅತ್ಯಾಧುನಿಕ ತಂತ್ರಜ್ಞಾನವನ್ನು ಬಳಸಿಕೊಂಡು ಈ ಸಿನಿಮಾ ನಿರ್ಮಿಸುತ್ತಿದ್ದೇವೆ. ಕನ್ನಡದ ಜೊತೆಗೆ ಇತರ ಭಾಷೆಗಳಲ್ಲೂ ಈ ಸಿನಿಮಾವನ್ನು ತೆರೆಗೆ ತರುವ ಯೋಜನೆಯಿದೆ. ಈಗಾಗಲೇ ಪ್ರೀ-ಪ್ರೊಡಕ್ಷನ್ ಕೆಲಸಗಳು ಪೂರ್ಣಗೊಂಡಿದ್ದು, ಇದೇ ವರ್ಷಾಂತ್ಯಕ್ಕೆ ಸಿನಿಮಾವನ್ನು ತೆರೆಗೆ ತರುವ ಯೋಚನೆಯಲ್ಲಿದ್ದೇವೆ' ಎಂದು ನಿರ್ಮಾಪಕರು ಹೇಳಿದರು. 'ಇದೊಂದು ಮಹಿಳಾ ಪ್ರಧಾನ ಕಥಾಹಂದರದ ಸಿನಿಮಾ. ಹಾಗಾಗಿ ಸಿನಿಮಾಕ್ಕೆ ಇಂದಿರಾ ಎಂದು ಹೆಸರಿಟ್ಟಿದ್ದೇವೆ. ಈ ಸಿನಿಮಾದಲ್ಲಿ ಮನರಂಜನೆಯ ಜೊತೆಗೆ ಸಮಾಜಕ್ಕೆ ಒಂದು ಸಂದೇಶ ಕೂಡ ಇರಲಿದೆ.

# ಆಫ್ರಿಕಾ ತಂಡದಿಂದ ಇಬ್ಬರು ಔಟ್



2026ರ ಟಿ20 ವಿಶ್ವಕಪ್‌ಗೆ ದಕ್ಷಿಣ ಆಫ್ರಿಕಾ ತಂಡ ಗಾಯದ ಸಮಸ್ಯೆಯಿಂದ ಕಂಗೆಟ್ಟಿದೆ. ಟೋನಿ ಡಿ ಜಾರ್ಜಿ ಮತ್ತು ಡೊನೊವನ್ ಫೆರೇರಾ ಗಾಯಗೊಂಡು ಹೊರಬಿದ್ದಿದ್ದು, ರಯಾನ್ ರಿಕಲ್ಟನ್ ಮತ್ತು ಟ್ರಿಸ್ಟಾನ್ ಸ್ಟಬ್ಸ್ ಅವರನ್ನು ತಂಡಕ್ಕೆ ಸೇರಿಸಲಾಗಿದೆ. ಡೇವಿಡ್ ಮಿಲ್ಲರ್, ಲುಂಗಿ ಎನ್ಗಿಡಿ ಕೂಡ ಗಾಯಗೊಂಡಿದ್ದು, ಫಿಟ್‌ನೆಸ್ ಪರೀಕ್ಷೆಗೆ ಒಳಗಾಗಿದ್ದಾರೆ. ತಂಡದಲ್ಲಿ ಮತ್ತಷ್ಟು ಬದಲಾವಣೆಗಳಾಗುವ ಸಾಧ್ಯತೆಯಿದೆ. 2026 ರ ಟಿ20 ವಿಶ್ವಕಪ್‌ಗಾಗಿ ಎಲ್ಲಾ ತಂಡಗಳು ತಮ್ಮ ಸಿದ್ಧತೆಗಳನ್ನು ತೀವ್ರಗೊಳಿಸಿವೆ. ಇದೆಲ್ಲದರ ನಡುವೆ ಕೆಲವು ತಂಡಗಳಿಗೆ ಆಟಗಾರರ ಇಂಜುರಿ ಸಮಸ್ಯೆ ದೊಡ್ಡ ತಲೆನೋವಾಗಿ ಪರಿಣಮಿಸಿದೆ. ಆಟಗಾರರ ಗಾಯದಿಂದ ಸಂಕಷ್ಟಕ್ಕೆ ಸಿಲುಕಿರುವ ತಂಡಗಳ ಪಟ್ಟಿಯಲ್ಲಿ ಟೀಂ ಇಂಡಿಯಾವೂ ಸೇರಿದೆ. ಇದೀಗ ಆ ಪಟ್ಟಿಗೆ ಕಳೆದ ಬಾರಿಯ ರನ್ನರ್ ಅಪ್ ದಕ್ಷಿಣ ಆಫ್ರಿಕಾ ತಂಡ ಸೇರಿಕೊಂಡಿದೆ.

ಗಾಯದ ಕಾರಣದಿಂದಾಗಿ ದಕ್ಷಿಣ ಆಫ್ರಿಕಾ ತಂಡದ ಇಬ್ಬರು ಆಟಗಾರರು ಪಂದ್ಯಾವಳಿಯಿಂದ ಹೊರಗುಳಿದಿದ್ದಾರೆ. ಹೀಗಾಗಿ ದಕ್ಷಿಣ ಆಫ್ರಿಕಾ ಕ್ರಿಕೆಟ್ ಮಂಡಳಿಯು ಅವರ ಬದಲಿಯಾಗಿ ಮತ್ತಿಬ್ಬರು ಆಟಗಾರರನ್ನು ತಂಡಕ್ಕೆ ಆಯ್ಕೆ ಮಾಡಿದೆ.

2026 ರ ಟಿ20 ವಿಶ್ವಕಪ್‌ಗೂ ಮುನ್ನ ದಕ್ಷಿಣ ಆಫ್ರಿಕಾ ದೊಡ್ಡ ಹಿನ್ನಡೆ ಅನುಭವಿಸಿದೆ. ಟೋನಿ ಡಿ ಜಾರ್ಜಿ ಮತ್ತು ಡೊನೊವನ್ ಫೆರೇರಾ ಗಾಯದ ಕಾರಣದಿಂದಾಗಿ ಪಂದ್ಯಾವಳಿಯಿಂದ ಹೊರಗುಳಿದಿದ್ದಾರೆ. ಡಿಸೆಂಬರ್‌ನಲ್ಲಿ ಭಾರತ ಪ್ರವಾಸದ ಸಮಯದಲ್ಲಿ ಟೋನಿ ಡಿ ಜಾರ್ಜಿ ಅವರಿಗೆ ಮಂಡಿರಜ್ಜು ನೋವು ಕಾಣಿಸಿಕೊಂಡಿತು, ಅದರಿಂದ ಅವರು ಇನ್ನೂ ಸಂಪೂರ್ಣವಾಗಿ ಚೇತರಿಸಿಕೊಂಡಿಲ್ಲ. ಇತ್ತ ಎಸ್‌ಎ 20 ಲೀಗ್‌ನಲ್ಲಿ ಫೀಲ್ಡಿಂಗ್ ಮಾಡುವಾಗ ಡೊನೊವನ್ ಫೆರೇರಾ ಕೂಡ ಭುಜದ ಗಾಯಕ್ಕೆ ತುತ್ತಾಗಿದ್ದರು. ಪರಿಣಾಮವಾಗಿ, ಇಬ್ಬರೂ ಆಟಗಾರರು ಟಿ20 ವಿಶ್ವಕಪ್‌ನಲ್ಲಿ ಭಾಗವಹಿಸಲು ಸಾಧ್ಯವಾಗುವುದಿಲ್ಲ.

ಈ ಇಬ್ಬರು ಆಟಗಾರರಿಗೆ ಬದಲಿಯಾಗಿ ವಿಕೆಟ್ ಕೀಪರ್-ಬ್ಯಾಟ್ಸ್‌ಮನ್ ರಯಾನ್ ರಿಕಲ್ಟನ್ ಮತ್ತು ಸ್ಫೋಟಕ ಬ್ಯಾಟ್ಸ್‌ಮನ್ ಟ್ರಿಸ್ಟಾನ್ ಸ್ಟಬ್ಸ್ ಅವರನ್ನು ಟಿ20 ವಿಶ್ವಕಪ್ ತಂಡಕ್ಕೆ ಸೇರಿಸಿಕೊಳ್ಳಲಾಗಿದೆ. ಪ್ರಸ್ತುತ ಉತ್ತಮ ಫಾರ್ಮ್‌ನಲ್ಲಿರುವ ರಿಕಲ್ಟನ್ 156.01 ಸ್ಟ್ರೈಕ್ ರೇಟ್‌ನೊಂದಿಗೆ 337 ರನ್ ಗಳಿಸಿದ್ದಾರೆ. ದಕ್ಷಿಣ ಆಫ್ರಿಕಾದ ಚಿಂತೆಗಳು ಇನ್ನೂ ದೂರವಾಗಿಲ್ಲ. ಡೇವಿಡ್ ಮಿಲ್ಲರ್, ಲುಂಗಿ ಎನ್‌ಗಿಡಿ ಮತ್ತು ಡೆವಾಲ್ಡ್ ಬ್ರೆವಿಸ್ ಕೂಡ ಇಂಜುರಿಗೆ ತುತ್ತಾಗಿದ್ದು, ಫಿಟ್‌ನೆಸ್ ಪರೀಕ್ಷೆಗಳಿಗೆ ಒಳಗಾಗುತ್ತಿದ್ದಾರೆ.

ಪರಿಣಾಮವಾಗಿ, ತಂಡದಲ್ಲಿ ಮತ್ತಷ್ಟು ಬದಲಾವಣೆಗಳಾಗುವ ಸಾಧ್ಯತೆಗಳಿವೆ. ಐಸಿಸಿ ನಿಯಮಗಳ ಪ್ರಕಾರ, ಜನವರಿ 31 ರವರೆಗೆ ಪೂರ್ವಾನುಮತಿ ಇಲ್ಲದೆ ತಂಡ ಬದಲಾವಣೆಗಳನ್ನು ಮಾಡಬಹುದು. ಅದರ ನಂತರ, ಯಾವುದೇ ಬದಲಾವಣೆಗಳನ್ನು ಮಾಡುವ ಮೊದಲು ಐಸಿಸಿ ಅನುಮೋದನೆ ಅಗತ್ಯವಿರುತ್ತದೆ.

**ದಕ್ಷಿಣ ಆಫ್ರಿಕಾ ತಂಡ:** ಏಡೆನ್ ಮಾರ್ಕ್ರಾಮ್, ಕಾರ್ಬಿನ್ ಬಾಷ್, ಡೆವಾಲ್ಡ್ ಬ್ರೆವಿಸ್, ಕ್ವಿಂಟನ್ ಡಿ ಕಾಕ್, ಮಾರ್ಕೊ ಯಾನ್ಸೆನ್, ಜಾರ್ಜ್ ಲಿಂಡೆ, ಕೇಶವ್ ಮಹಾರಾಜ್, ಕ್ವೆನಾ ಮಫಕಾ, ಡೇವಿಡ್ ಮಿಲ್ಲರ್, ಲುಂಗಿ ಎನ್ಗಿಡಿ, ಅನ್ರಿಚ್ ನೋಕಿಯಾ, ಕಗಿಸೊ ರಬಾಡಾ, ರಯಾನ್ ರಿಕೆಲ್ಟನ್, ಜೇಸನ್ ಸ್ಮಿತ್ ಮತ್ತು ಟ್ರಿಸ್ಟಾನ್ ಸ್ಟಬ್ಸ್.

# ಸೂರ್ಯ - ಇಶಾನ್ ಬ್ಯಾಟಿಂಗ್‌ಗೆ ಕೊಚ್ಚಿ ಹೋದ ಕಿವೀಸ್ ಪಡೆ!

## ಭಾರತಕ್ಕೆ 7 ವಿಕೆಟ್ ಭರ್ಜರಿ ಜಯ



5 ಪಂದ್ಯಗಳ ಟಿ20 ಸರಣಿಯ 2ನೇ ಪಂದ್ಯಲ್ಲಿ ನ್ಯೂಜಿಲ್ಯಾಂಡ್ ತಂಡ ನೀಡಿದ್ದ 209ರನ್‌ಗಳ ಬೃಹತ್ ಗುರಿಯನ್ನ ಭಾರತ ತಂಡ ಲೀಲಾಜಾಲಾವಾಗಿ ಚೇಸ್ ಮಾಡಿ ಗೆಲುವು ಪಡೆದು ಸರಣಿಯಲ್ಲಿ 2-0 ಮುನ್ನಡೆ ಸಾಧಿಸಿದೆ.

ಭಾರತ ತಂಡ ಟಿ20 ಕ್ರಿಕೆಟ್‌ನಲ್ಲಿ ತನ್ನ ಪ್ರಾಬಲ್ಯವನ್ನ ಮುಂದುವರಿಸಿದೆ. 5 ಪಂದ್ಯಗಳ ಟಿ20 ಸರಣಿಯ 2ನೇ ಪಂದ್ಯಲ್ಲಿ ನ್ಯೂಜಿಲ್ಯಾಂಡ್ ತಂಡ ನೀಡಿದ್ದ 209ರನ್‌ಗಳ ಬೃಹತ್ ಗುರಿಯನ್ನ ಭಾರತ ತಂಡ ಲೀಲಾಜಾಲಾವಾಗಿ ಚೇಸ್ ಮಾಡಿ ಗೆಲುವು ಪಡೆಯಿತು. ಕಮ್‌ಬ್ಯಾಕ್ ಹೀರೋ ಇಶಾನ್ ಕಿಶನ್ 76 ರನ್ ಸಿಡಿಸಿದರೆ, ನಾಯಕ ಸೂರ್ಯಕುಮಾರ್ ಬಹಳ ದಿನಗಳ ನಂತರ ಚುಟುಕು ಕ್ರಿಕೆಟ್‌ನಲ್ಲಿ ವಿಧ್ವಂಸಕಾರಿ ಬ್ಯಾಟಿಂಗ್ ಪ್ರದರ್ಶನ ತೋರಿದರು. ಬರೋಬ್ಬರಿ 23 ಇನ್ನಿಂಗ್ಸ್‌ಗಳ ಬಳಿ ಸೂರ್ಯಕುಮಾರ್ (ಅಜೇಯ 82) ಅರ್ಧಶತಕ ಸಿಡಿಸಿ ಫಾರ್ಮ್‌ಗೆ ಮರಳಿದರಲ್ಲದೆ, ಭಾರತಕ್ಕೆ ಸುಲಭ ಗೆಲುವು ತಂದುಕೊಟ್ಟರು. ಇವರಿಬ್ಬರ ಅಬ್ಬರದಿಂದ ಭಾರತ ತಂಡ 209 ರನ್‌ಗಳ ಬೃಹತ್ ಗುರಿಯನ್ನ ಇನ್ನೂ 28 ಎಸೆತಗಳಿರುವಂತೆ ಗೆಲುವು ಸಾಧಿಸಿತು. 209 ರನ್‌ಗಳ ಸವಾಲಿನ ಗುರಿ ಬೆನ್ನಟ್ಟಿದ ಟೀಮ್ ಇಂಡಿಯಾ ಮೊದಲ 7 ಎಸೆತಗಳಲ್ಲೇ ಭಾರೀ ಆಘಾತ ಎದುರಿಸಿತು. ಮೊದಲ ಓವರ್‌ನಲ್ಲಿ 5 ಎಸೆತಗಳಲ್ಲಿ 6 ರನ್‌ಗಳಿಸಿದ್ದ ಸಂಜು ಸ್ಯಾಮ್ಸನ್ ಮ್ಯಾಟ್ ಹೆನ್ರಿ ಬೌಲಿಂಗ್‌ನಲ್ಲಿ ರವೀಂದ್ರಗೆ ಕ್ಯಾಚ್ ನೀಡಿ ಔಟ್ ಆದರು. ತಾವೆದುರಿಸಿದ 2ನೇ ಎಸೆತದಲ್ಲೇ ಸಂಜು ಜೀವದಾನ ಪಡೆದಿದ್ದರು. ಆದರೆ ಅದನ್ನ ಬಳಸಿಕೊಳ್ಳಲು ವಿಫಲರಾದರು. 2ನೇ ಓವರ್‌ನ ಮೊದಲ ಎಸೆತದಲ್ಲೇ ವಿಶ್ವದ ನಂಬರ್ 1 ಬ್ಯಾಟರ್ ಅಭಿಷೇಕ್ ಶರ್ಮಾ ಜಾಕೋಬ್ ಡಫಿ ಬೌಲಿಂಗ್‌ನಲ್ಲಿ ಗೋಲ್ಡನ್ ಡಕ್ ಆದರು.

6 ರನ್‌ಗಳಿಗೆ 2 ವಿಕೆಟ್ ಕಳೆದುಕೊಂಡಿದ್ದ ಭಾರತ ತಂಡ ಸೋಲಿನ ಸುಳಿಗೆ ಸಿಲುಕಿತ್ತು. ಆದರೆ ಇಶಾನ್ ಕಿಶನ್ ಹಾಗೂ ನಾಯಕ ಸೂರ್ಯಕುಮಾರ್ ಯಾದವ್ ಇಬ್ಬರು ಎಲ್ಲರ ಲೆಕ್ಕಾಚಾರವನ್ನ ಕೆಲವೇ ಕ್ಷಣದಲ್ಲಿ ಉಲ್ಟಾಪಲ್ಟಾ ಮಾಡಿದರು. ಈ ಇಬ್ಬರು ಬ್ಯಾಟರ್‌ಗಳು ಕಿವೀಸ್ ಬೌಲರ್‌ಗಳನ್ನ ಮನಬಂದಂತೆ ದಂಡಿಸಿದರು. ಕೇವಲ 49 ಎಸೆತಗಳಲ್ಲಿ ಈ ಜೋಡಿ 122 ರನ್ ಸಿಡಿಸಿ ಕಿವೀಸ್ ಬೌಲರ್‌ಗಳನ್ನ ಧೂಳೀಪಟ ಮಾಡಿದರು. ಈ ಇಬ್ಬರು ಬೌಂಡರಿ, ಸಿಕ್ಸರ್‌ಗಳ ಸುಳಿಮಳೆ ಸುರಿಸಿದರು.

ಇಶಾನ್ ಕಿಶನ್ 34 ಎಸೆತಗಳಲ್ಲಿ 11 ಬೌಂಡರಿ, 4 ಸಿಕ್ಸರ್‌ಗಳ ಸಹಿತ 76 ರನ್ ಸಿಡಿಸಿ ಅಬ್ಬರಿಸಿದರು. ನಾಯಕ ಸೂರ್ಯಕುಮಾರ್ ಯಾದವ್ 37 ಎಸೆತಗಳಲ್ಲಿ 9 ಬೌಂಡರಿ, 4 ಸಿಕ್ಸರ್‌ಗಳ ಸಹಿತ ಅಜೇಯ 82 ರನ್ ಗಳಿಸಿದರೆ, ಕೊನೆಯಲ್ಲಿ ಅಬ್ಬರಿಸಿದ ಶಿವಂ ದುಬೆ ಕೇವಲ 187 ಎಸೆತಗಳಲ್ಲಿ 1 ಬೌಂಡರಿ, 3 ಸಿಕ್ಸರ್‌ಗಳ ಸಹಿತ ಅಜೇಯ 36 ರನ್‌ಗಳಿಸಿ ತಂಡವನ್ನ ಗೆಲುವಿನ ಗಡಿ ದಾಟಿಸಿದರು. ಭಾರತ ತಂಡ ಕೇವಲ 15.2 ಓವರ್‌ಗಳಲ್ಲೇ 209 ರನ್‌ಗಳ ಗುರಿಯನ್ನ ಚೇಸ್ ಮಾಡಿತು. ಇದು ಭಾರತ ತಂಡದ ಜಂಟಿ ಗರಿಷ್ಠ ರನ್ ಚೇಸ್ ಆಗಿದೆ. ಈ ಹಿಂದೆ ಇಷ್ಟೇ ಗುರಿಯನ್ನ 2 ಬಾರಿ ಚೇಸ್ ಮಾಡಿ ಗೆಲುವು ಪಡೆದಿತ್ತು.

ನ್ಯೂಜಿಲ್ಯಾಂಡ್ ತಂಡದ ಬೌಲರ್‌ಗಳು ಎಲ್ಲರೂ 10 ರ ಎಕಾನಮಿಯಲ್ಲಿ ರನ್ ಬಿಟ್ಟುಕೊಟ್ಟು ದುಬಾರಿ ಆದರು. ಜಾಕೊಬ್ ಡಫಿ 38ಕ್ಕೆ1 ವಿಕೆಟ್ ಪಡೆದರೆ, ಮ್ಯಾಟ್ ಹೆನ್ರಿ 3 ಓವರ್‌ಗಳಲ್ಲಿ 41 ರನ್ ಬಿಟ್ಟುಕೊಟ್ಟು 1 ವಿಕೆಟ್ ಪಡೆದರು. ಇಶ್ ಸೋಧಿ 3 ಓವರ್‌ಗಳಲ್ಲಿ 34 ರನ್ ನೀಡಿ 1 ವಿಕೆಟ್ ಪಡೆದರು. ಜಾಕರಿ ಫೌಲ್ಕ್ಸ್ ಕೇವಲ ಮೂರು ಓವರ್ ಎಸೆದು 67 ರನ್ ನೀಡಿ ದುಬಾರಿ ಆದರು.


# 240 ಕೋಟಿ ರೂ. ಅಧಿಕ ನಷ್ಟ ಅನುಭವಿಸಿದ ಬಾಂಗ್ಲಾದೇಶ

ಭಾರತದಲ್ಲಿನ ಭದ್ರತಾ ಕಾರಣಗಳಿಂದ ಬಾಂಗ್ಲಾದೇಶ 2026ರ ಟಿ20 ವಿಶ್ವಕಪ್‌ನಿಂದ ಹಿಂದೆ ಸರಿದಿದೆ. ಭಾರತಕ್ಕೆ ತಂಡ ಕಳುಹಿಸಲು ಬಿಸಿಬಿ ನಿರಾಕರಿಸಿದರೂ, ಐಸಿಸಿ ಭದ್ರತಾ ಬೆದರಿಕೆ ಇಲ್ಲ ಎಂದು ಪ್ರಸ್ತಾಪ ತಿರಸ್ಕರಿಸಿತು. ಈ ನಿರ್ಧಾರದಿಂದ ಬಾಂಗ್ಲಾದೇಶ ಕ್ರಿಕೆಟ್ ಮಂಡಳಿಗೆ ಸುಮಾರು 3.25 ಬಿಲಿಯನ್ ಟಾಕಾ ಸೇರಿದಂತೆ ಭಾರೀ ಆರ್ಥಿಕ ನಷ್ಟವಾಗಲಿದೆ.

ಬಾಂಗ್ಲಾದೇಶ 2026 ರ ಟಿ20 ವಿಶ್ವಕಪ್‌ನಲ್ಲಿ ಭಾಗವಹಿಸದಿರಲು ನಿರ್ಧರಿಸಿದೆ. ಭದ್ರತಾ ಕಾರಣಗಳಿಂದಾಗಿ ತಂಡವನ್ನು ಭಾರತಕ್ಕೆ ಕಳುಹಿಸಲು ಬಾಂಗ್ಲಾದೇಶ ಕ್ರಿಕೆಟ್ ಮಂಡಳಿ ನಿರಾಕರಿಸಿದೆ. ಈ ಬಗ್ಗೆ ಪತ್ರಿಕೆಗಳಿಗೆ ಹೇಳಿಕೆ ನೀಡಿರುವ ಬಾಂಗ್ಲಾದೇಶದ ಯುವಜನ ಮತ್ತು ಕ್ರೀಡಾ ಸಲಹೆಗಾರ ಆಸಿಫ್ ನಜ್ರುಲ್ ಭಾರತದ ಭದ್ರತಾ ಪರಿಸ್ಥಿತಿ ಬದಲಾಗಿಲ್ಲ. ಹೀಗಾಗಿ ನಮ್ಮ ತಂಡವನ್ನು ಭಾರತಕ್ಕೆ ಕಳುಹಿಸುತ್ತಿಲ್ಲ ಎಂದಿದ್ದರು. ವಾಸ್ತವವಾಗಿ ಭಾರತ ಮತ್ತು ಶ್ರೀಲಂಕಾ ಜಂಟಿಯಾಗಿ ಪಂದ್ಯಾವಳಿಯನ್ನು ಆಯೋಜಿಸುತ್ತಿರುವುದರಿಂದ, ಬಾಂಗ್ಲಾದೇಶದ ಗುಂಪು ಪಂದ್ಯಗಳನ್ನು ಶ್ರೀಲಂಕಾಕ್ಕೆ ಸ್ಥಳಾಂತರಿಸುವಂತೆ ಬಿಸಿಬಿ, ಐಸಿಸಿಯನ್ನು ಕೋರಿತ್ತು. ಆದಾಗ್ಯೂ, ಐಸಿಸಿ ಮಂಡಳಿಯ ಸಭೆಯು ಭಾರತದಲ್ಲಿ ಯಾವುದೇ ಭದ್ರತಾ ಬೆದರಿಕೆ ಇಲ್ಲ ಎಂದು ಹೇಳಿ ಈ ಪ್ರಸ್ತಾಪವನ್ನು ತಿರಸ್ಕರಿಸಿತು. ಮಾತ್ರವಲ್ಲದೆ ಬಾಂಗ್ಲಾ ತಂಡ ಭಾರತಕ್ಕೆ ಪ್ರಯಾಣಿಸದಿದ್ದರೆ, ನಿಮ್ಮ ಸ್ಥಾನದಲ್ಲಿ ಬೇರೆ ತಂಡವನ್ನು ಟಿ20 ವಿಶ್ವಕಪ್‌ಗೆ ಆಯ್ಕೆ ಮಾಡಲಾಗುತ್ತದೆ ಎಂದು ಐಸಿಸಿ, ಬಿಸಿಬಿಗೆ ಎಚ್ಚರಿಕೆ ನೀಡಿತ್ತು. ಇದರ ಹೊರತಾಗಿಯೂ, ಬಾಂಗ್ಲಾದೇಶ ತನ್ನ ನಿಲುವು ಬದಲಾಯಿಸದೆ ಪಂದ್ಯಾವಳಿಯಿಂದ ಹಿಂದೆ ಸರಿಯಲು ನಿರ್ಧರಿಸಿದೆ. ಈ ನಿರ್ಧಾರದಿಂದ ಬಾಂಗ್ಲಾದೇಶ ಕ್ರಿಕೆಟ್ ಮಂಡಳಿಯು ಭಾರೀ ಬೆಲೆಯನ್ನು ತೆರಬೇಕಾಗಿದೆ. ಐಸಿಸಿಯಿಂದ ಬರುವ ವಾರ್ಷಿಕ ಆದಾಯದ ಪಾಲಿನಲ್ಲಿ ಸುಮಾರು 3.25 ಬಿಲಿಯನ್ ಬಾಂಗ್ಲಾದೇಶಿ ಟಾಕಾ (ಸುಮಾರು 240 ಕೋಟಿ ಭಾರತೀಯ ರೂಪಾಯಿಗಳು) ನಷ್ಟವಾಗಬಹುದು ಎಂದು ವರದಿಯಾಗಿದೆ.

ಇದಲ್ಲದೆ, ಪ್ರಸಾರ ಹಕ್ಕುಗಳು, ಪ್ರಾಯೋಜಕತ್ವಗಳು ಮತ್ತು ಇತರ ಗಳಿಕೆಗಳಿಂದ ಬರುವ ಒಟ್ಟು ಆರ್ಥಿಕ ನಷ್ಟವು ಪ್ರಸಕ್ತ ಹಣಕಾಸು ವರ್ಷದಲ್ಲಿ ಶೇಕಡಾ 60 ಅಥವಾ ಅದಕ್ಕಿಂತ ಹೆಚ್ಚಾಗಬಹುದು. ಇದರ ಜೊತೆಗೆ ಆಟಗಾರರಿಗೆ ಸಿಗುತ್ತಿದ್ದ ಪಂದ್ಯ ಶುಲ್ಕ, ಬೋನಸ್ ಮತ್ತು ಬಹುಮಾನದ ಹಣಕ್ಕೂ ಕತ್ತರಿ ಬಿದ್ದಿದೆ.

ಈ ವಿವಾದವು ದ್ವಿಪಕ್ಷೀಯ ಕ್ರಿಕೆಟ್ ಮೇಲೂ ಪರಿಣಾಮ ಬೀರಬಹುದು. ಪೂರ್ವ ನಿಗದಿಯಂತೆ ಆಗಸ್ಟ್-ಸೆಪ್ಟೆಂಬರ್‌ನಲ್ಲಿ ಭಾರತ ತಂಡ ಬಾಂಗ್ಲಾದೇಶ ಪ್ರವಾಸವನ್ನು ಮಾಡಬೇಕಿತ್ತು.



# 5 ನೇ ದ್ವಿಶತಕ ಬಾರಿಸಿದ ಸರ್ಫರಾಜ್

## 227 ರನ್ ಚಚ್ಚಿದ ಖಾನ್



ಭಾರತ ತಂಡದಿಂದ ಕಡೆಗಣಿಸಲ್ಪಟ್ಟಿದ್ದ ಸರ್ಫರಾಜ್ ಖಾನ್ ರಣಜಿ ಟ್ರೋಫಿಯಲ್ಲಿ ಮತ್ತೊಂದು ದ್ವಿಶತಕ ಸಿಡಿಸಿ ಮಿಂಚಿದ್ದಾರೆ. ಮುಂಬೈ ಪರ ಹೈದರಾಬಾದ್ ವಿರುದ್ಧ 227 ರನ್ ಬಾರಿಸುವ ಮೂಲಕ ಆಯ್ಕೆಗಾರರಿಗೆ ಬ್ಯಾಟ್‌ನಿಂದಲೇ ದಿಟ್ಟ ಉತ್ತರ ನೀಡಿದ್ದಾರೆ. ಇದು ಅವರ ವೃತ್ತಿಜೀವನದ 5ನೇ ದ್ವಿಶತಕವಾಗಿದ್ದು, ಸ್ಥಿರ ಪ್ರದರ್ಶನದ ಮೂಲಕ ರಾಷ್ಟ್ರೀಯ ತಂಡಕ್ಕೆ ತಮ್ಮ ಅನಿವಾರ್ಯತೆಯನ್ನು ಸಾರಿದ್ದಾರೆ.

ಅದ್ಭುತ ಪ್ರದರ್ಶನದ ಹೊರತಾಗಿಯೂ ಟೀಂ ಇಂಡಿಯಾದಿಂದ ಕಡೆಗಣಿಸಲ್ಪಟ್ಟಿರುವ ಸರ್ಫರಾಜ್ ಖಾನ್ ದೇಶಿ ಕ್ರಿಕೆಟ್‌ನಲ್ಲಿ ತಮ್ಮ ಅಮೋಘ ಆಟವನ್ನು ಮುಂದುವರೆಸಿದ್ದಾರೆ. 2026 ರ ಆವೃತ್ತಿಯ ರಣಜಿ ಟೂರ್ನಿಯಲ್ಲಿ ಮುಂಬೈ ತಂಡದ ಪರ ಕಣಕ್ಕಿಳಿದಿರುವ ಸರ್ಫರಾಜ್ ಖಾನ್ ಮತ್ತೊಂದು ದ್ವಿಶತಕ ಬಾರಿಸುವ ಮೂಲಕ ಆಯ್ಕೆಗಾರರಿಗೆ ಬ್ಯಾಟ್‌ನಿಂದಲೇ ಉತ್ತರ ನೀಡಿದ್ದಾರೆ. ಹೈದರಾಬಾದ್‌ನ ರಾಜೀವ್ ಗಾಂಧಿ ಕ್ರೀಡಾಂಗಣದಲ್ಲಿ ಮುಂಬೈ ಮತ್ತು ಆತಿಥೇಯ ಹೈದರಾಬಾದ್ ನಡುವಿನ ಎಲೈಟ್ ಗ್ರೂಪ್ ಡಿ ಪಂದ್ಯದ ಎರಡನೇ ದಿನದಂದು ಸರ್ಫರಾಜ್ ದ್ವಿಶತಕ ಸಿಡಿಸಿ ಮಿಂಚಿದ್ದಾರೆ. ಪಂದ್ಯದ ಮೊದಲ ದಿನದಂದು ಶತಕದ ಜೊತೆಗೆ 142 ರನ್ ಬಾರಿಸಿ ಅಜೇಯರಾಗಿ ಉಳಿದಿದ್ದ ಸರ್ಫರಾಜ್, ತಂಡದ ನಾಯಕ ಸಿದ್ಧೇಶ್ ಲಾಡ್ ಅವರೊಂದಿಗೆ 249 ರನ್‌ಗಳ ಜೊತೆಯಾಟವನ್ನು ಹಂಚಿಕೊಂಡಿದ್ದರು. ಲಾಡ್ ಕೂಡ 104 ರನ್‌ಗಳಿಸಿ ಔಟಾದರು.

ಆದಾಗ್ಯೂ, ಎರಡನೇ ದಿನವೂ ತಮ್ಮ ಅಬ್ಬರ ಮುಂದುವರೆಸಿದ ಸರ್ಫರಾಜ್ ಬಂದ ತಕ್ಷಣ ಆಕ್ರಮಣಕಾರಿಯಾಗಿ ಬ್ಯಾಟಿಂಗ್ ಮಾಡಲು ಪ್ರಾರಂಭಿಸಿದರು. ಇದರ ಪರಿಣಾಮವಾಗಿ ಸರ್ಫರಾಕ್ ಕೇವಲ 206 ಎಸೆತಗಳಲ್ಲಿ ತಮ್ಮ ದ್ವಿಶತಕದ ಗಡಿ ದಾಟಿದರು. ಇದು ಸರ್ಫರಾಜ್ ಅವರ ಪ್ರಥಮ ದರ್ಜೆ ವೃತ್ತಿಜೀವನದ ಐದನೇ ದ್ವಿಶತಕವಾಗಿದ್ದು, ಇದು ಕೇವಲ 61 ಪಂದ್ಯಗಳಲ್ಲಿ ಮೂಡಿಬಂದಿದೆ. ದ್ವಿಶತಕ ಬಾರಿಸಿದ ಬಳಿಕ ಹೊಡಿಬಡಿ ಆಟಕ್ಕೆ ಮುಂದಾದ ಸರ್ಫರಾಜ್ ಖಾನ್ ಅಂತಿಮವಾಗಿ 227 ರನ್‌ಗಳಿಗೆ ತಮ್ಮ ಇನ್ನಿಂಗ್ಸ್ ಕೊನೆಗೊಳಿಸಿದರು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966